ಸಂಪುಟ: 14 Volume ಸಂಚಿಕೆ: 13 Issue ಪುಟಗಳು 08 Pages ಬುಧವಾರ 15 ಏಪ್ರಿಲ್ 2026 ₹4 PRGINO.120927 (RNINO: KARKAN/2011/48371) BDR/054/2026-2027 www.mallammanudi.in mallammanudi@gmail.com 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಜೀವನದಲ್ಲಿ ಬುದ್ಧಿವಂತಿಕೆಯೊಂದೇ ಸಾಲದು. ತಾಳ್ಮೆ ಮತ್ತು ವಿವೇಚನೆ ಕೂಡ ಮುಖ್ಯ.

–ವಿನೋಬಾ ಭಾವೆ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

ಜಯಂತಿಯಲ್ಲಿ ಪ್ಲಾಸ್ಟಿಕ್ ಹೂ ಬಳಕೆಗೆ ಖಂಡನೆ 6

ಅಂಬೇಡ್ಕರ್ ಅವರ ಕೊಡುಗೆ ಜಗತ್ತಿಗೆ ಅಪಾರ 7

ಸಂಕೋಲೆ: ವಿಮುಕ್ತರಾಗಲು ಶಿಕ್ಷಣವೇ ಅಸ್ತ್ರ 8

## ಭೈರವೈಕ್ಯ ಮಂದಿರಕ್ಕೆ ಇಂದು ಮೋದಿ



**ಮಂಡ್ಯ:** ಆದಿಚುಂಚನಗಿರಿ ಮಠದ 71ನೇ ಪೀಠಾಧಿಪತಿ ಭೈರವೈಕ್ಯ ಬಾಲಗಂಗಾಧರನಾಥ ಸ್ವಾಮೀಜಿಯವರ ಗದ್ದುಗೆ ಇರುವ ಗುರು ಭೈರವೈಕ್ಯ ಮಂದಿರವನ್ನು ಪ್ರಧಾನಿ ನರೇಂದ್ರ ಮೋದಿ ಏ.15ರಂದು ಲೋಕಾರ್ಪಣೆಗೊಳಿಸಲಿದ್ದಾರೆ ಎಂದು ಆದಿಚುಂಚನಗಿರಿ ಮಠದ ನಿರ್ಮಲಾನಂದನಾಥ ಸ್ವಾಮೀಜಿ ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಗುರು ಭೈರವೈಕ್ಯ ಮಂದಿರದ ಲೋಕಾರ್ಪಣೆಗೆ ಸಂಬಂಧಿಸಿದಂತೆ ಧಾರ್ಮಿಕ ವಿಧಿವಿಧಾನಗಳು ಪ್ರಾಣ ಪ್ರತಿಷ್ಠಾಪನಾ ಕಾರ್ಯ ಪೂಜಾ ಕೈಂಕರ್ಯಗಳು ಸಂಪನ್ನಗೊಂಡಿವೆ ಎಂದರು.

## ನಸೀರ್, ಜಬ್ಬಾರ್ ರಾಜಿನಾಮೆ

**ಬೆಂಗಳೂರು:** ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಸಮರ್ಥ್ ಅವರನ್ನು ಸೋಲಿಸಲು ಪ್ರತಿ ಪಕ್ಷ ಮುಖಂಡರ ಜೊತೆಗೆ ಕಾಂಗ್ರೆಸ್ ಪಕ್ಷದ ಮುಖಂಡರು ಪ್ರಯತ್ನ ನಡೆಸಿದ್ದಾರೆ ಎಂದು ಆರೋಪ ಕೇಳಿ ಬಂದಿದೆ. ಇದರ ಬೆನ್ನಲ್ಲೇ ಕೆಪಿಸಿಸಿ ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಸ್ಥಾನಕ್ಕೆ ಅಬ್ದುಲ್ ಜಬ್ಬಾರ್ ರಾಜೀನಾಮೆ ನೀಡಿದ್ದಾರೆ. ಜೊತೆಗೆ ಸಿಎಂ ಸಿದ್ದರಾಮಯ್ಯ ಅವರ ರಾಜಕೀಯ ಕಾರ್ಯದರ್ಶಿ ಹುದ್ದೆಗೆ ನಸೀರ್ ಅಹ್ಮದ್ ಅವರೂ ರಾಜೀನಾಮೆ ನೀಡಲು ಸೂಚನೆ ಬಂದ ಹಿನ್ನೆಲೆಯಲ್ಲಿ ಸಿಎಂ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಸಿದ್ದರಾಮಯ್ಯ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ರಾಜಿನಾಮೆ ನೀಡಿದ್ದಾರೆ.

## ಸಾಮ್ರಾಟ್ ಚೌಧರಿ ಸಿಎಂ ಆಗಿ ಆಯ್ಕೆ



**ಪಾಟ್ನಾ:** ಬಿಹಾರ ರಾಜ್ಯದ ಮೊದಲ ಬಿಜೆಪಿ ಮುಖ್ಯಮಂತ್ರಿ ಆಗಿ ಸಾಮ್ರಾಟ್ ಚೌಧರಿ ಆಯ್ಕೆಯಾಗಿದ್ದಾರೆ. ಪಾಟ್ನಾದ ಲೋಕಭವನದಲ್ಲಿ ನಿತೀಶ್ ಕುಮಾರ್ ಸಿಎಂ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸಿದ ಬಳಿಕ ಈ ಬೆಳವಣಿಗೆಯಾಗಿದೆ. ಪಾಟ್ನಾದ ಬಿಜೆಪಿ ಕಚೇರಿಯಲ್ಲಿ ನಡೆದ ಪಕ್ಷದ ಶಾಸಕಾಂಗ ಸಭೆಯಲ್ಲಿ ಉಪ ಮುಖ್ಯಮಂತ್ರಿ ಸಾಮ್ರಾಟ್ ಚೌಧರಿ ಅವರನ್ನು ನೂತನ ಮುಖ್ಯಮಂತ್ರಿಯಾಗಿ ಆಯ್ಕೆ ಮಾಡಲಾಗಿದೆ.

## ಶೌಚಾಲಯಕ್ಕಾಗಿ ಜನರ ಪರದಾಟ

**ಚಿತ್ತಾಪುರ:** ದಿನದಿಂದ ದಿನಕ್ಕೆ ಬೆಳೆಯುತ್ತಿರುವ ಪಟ್ಟಣದ ಜನಸಂಖ್ಯೆಗೆ ಪೂರಕವಾಗಿ ಪುರಸಭೆ ಅಗತ್ಯ ಸೌಲಭ್ಯ ಒದಗಿಸುತ್ತಿಲ್ಲ ಎಂಬ ಆರೋಪ ವ್ಯಕ್ತವಾಗಿದೆ. ಮುಖ್ಯವಾಗಿ ಪಟ್ಟಣದಲ್ಲಿ ಸಾರ್ವಜನಿಕ ಶೌಚಾಲಯಗಳ ಕೊರತೆಯಿದ್ದು, ಜನ ಸಮಸ್ಯೆ ಎದುರಿಸುವಂತಾಗಿದೆ. ಪಟ್ಟಣದಲ್ಲಿ ಬಸ್ ನಿಲ್ದಾಣದ ಬಳಿ, ಬಸವೇಶ್ವರ ವೃತ್ತದ ಬಳಿ ಬಿಟ್ಟರೆ ಉಳಿದ ಕಡೆ ಎಲ್ಲಿಯೂ ಸಾರ್ವಜನಿಕ ಶೌಚಾಲಯಗಳಿಲ್ಲ. ಸದಾ ಜನದಟ್ಟಣೆಯ ಪ್ರದೇಶವಾಗಿರುವ ಅಂಬೇಡ್ಕರ್ ವೃತ್ತ, ತಾಲೂಕು ಪಂಚಾಯಿತಿ ರಸ್ತೆ, ತಹಶೀಲ್ ಕಾರ್ಯಾಲಯ ರಸ್ತೆ, ಸ್ಟೇಷನ್ ರಸ್ತೆ, ಲಾಡ್ಜಿಂಗ್ ಕ್ರಾಸ್, ಕೋರ್ಟ್ ರಸ್ತೆ, ಭುವನೇಶ್ವರಿ ವೃತ್ತ, ನಾಗಾವಿ ವೃತ್ತದ ಹತ್ತಿರ ಸಾರ್ವಜನಿಕ ಮೂತ್ರಾಲಯ, ಶೌಚಾಲಯ ಕಾಣಸಿಗುವುದಿಲ್ಲ.

## ಸಿದ್ದರಾಮಯ್ಯ ಎಷ್ಟೇ ಪುಂಗಿ ಬಾರಿಸಿದರೂ..!

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ಕಾಂಗ್ರೆಸ್ಸಿನವರು, ಸಿದ್ದರಾಮಯ್ಯನವರು ಎಷ್ಟೇ ಪುಂಗಿ ಬಾರಿಸಿದರೂ ಉಪ ಚುನಾವಣೆ ನಡೆದ ರಾಜ್ಯದ ಎರಡೂ ಕ್ಷೇತ್ರಗಳಲ್ಲಿ ಅವರು ಗೆಲುವು ಸಾಧಿಸಲು ಸಾಧ್ಯವಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಮಾಧ್ಯಮಗಳ ಜೊತೆ ಇಂದು ಮಾತನಾಡಿದ ಅವರು ಪ್ರಶ್ನೆಗೆ ಉತ್ತರಿಸಿ, ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಕ್ಷೇತ್ರಗಳಲ್ಲಿ ಬಿಜೆಪಿ ಗೆದ್ದೇ ಗೆಲ್ಲಲಿದೆ ಎಂದರು. ಕಾಂಗ್ರೆಸ್ ಸರಕಾರದ ಬಗ್ಗೆ ಜನರು ಇವತ್ತು ಬೇಸತ್ತಿದ್ದಾರೆ. ಆಡಳಿತ ಯಂತ್ರ ಕುಸಿದಿದೆ. ಮುಖ್ಯಮಂತ್ರಿ ಕುರ್ಚಿಗೆ ಬೀದಿಕಾಳಗ ನಡೆಯುತ್ತಿದೆ. ಅಭಿವೃದ್ಧಿ ಇಲ್ಲವಾಗಿದೆ ಎಂದು ಟೀಕಿಸಿದ್ದಾರೆ.

ಇದಲ್ಲದೇ, ಕಾಂಗ್ರೆಸ್ ಸರಕಾರ ಎಂದರೆ ಅಲ್ಪಸಂಖ್ಯಾತರ ಓಲೈಕೆ ಮಾಡುವ ಮತ್ತು ಹಿಂದೂಗಳ ಅಪಮಾನ ಮಾಡುವ ಕೆಲಸ ಮಾಡುತ್ತಿದೆ. ಇವೆಲ್ಲದರ ಪರಿಣಾಮವಾಗಿ ಜನರು ಬಿಜೆಪಿಗೆ ಆಶೀರ್ವಾದ ಮಾಡಲಿದ್ದಾರೆ ಎಂದಿದ್ದಾರೆ.

## ಸಂವಿಧಾನ ಆಶಯಕ್ಕೆ ಧಕ್ಕೆ: ಸಿದ್ದಬಸವಶ್ರೀ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ



ಕೆಲವರು ಸಂವಿಧಾನದ ಮೂಲ ಆಶಯಕ್ಕೆ ಧಕ್ಕೆ ತರುವ ಕೆಲಸ ಮಾಡುತ್ತಿದ್ದು, ಅದರ ಪಾವಿತ್ರ್ಯವನ್ನು ನಾವು ಕಾಪಾಡಬೇಕು ಎಂದು ಬೆಳಗಾವಿ ಯಮಕನಮರಡಿಯ ಜಗದ್ಗುರು ಶೂನ್ಯ ಸಂಪಾದನಾ ಮಠದ ಉತ್ತರಾಧಿಕಾರಿ ಸಿದ್ದಬಸವ ದೇವರು ಹೇಳಿದ್ದಾರೆ.

ನಗರದ ಜಗತ್ ವೃತ್ತದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ವತಿಯಿಂದ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಪ್ರಯುಕ್ತ ಆಯೋಜಿಸಿದ್ದ ವಿಶ್ವಜ್ಞಾನ ದಿನಾಚರಣೆ ಕಾರ್ಯಕ್ರಮದ ಬಹಿರಂಗ ಸಭೆಯಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದ್ದಾರೆ. ಭಂತೆ ವರಜ್ಯೋತಿ, ಬಸವರಾಜ ದೇಶಮುಖ, ಅರುಣಕುಮಾರ ಎಂ.ವೈ.ಪಾಟೀಲ, ಶರಣಕುಮಾರ ಮೋದಿ, ರಾಜಕುಮಾರ ಕಪನೂರ, ಸಂತೋಷ ಬಿಲಗುಂದಿ ಇದ್ದರು. ಸಂತೋಷ ಹಾದಿಮನಿ ವಂದಿಸಿದರು. ಐ.ನವೀನ ಸಜ್ಜು ಬಾಬಾಸಾಹೇಬರ ಕುರಿತು ಕ್ರಾಂತಿಗೀತೆಗಳು ಹಾಡಿದರು.

# ಅಲ್ಲಿ ಸಂಪುಟ ಇಲ್ಲಿ ಸಂಕಟ

## ದಿಲ್ಲಿಯಲ್ಲಿ ಹೈಕಮಾಂಡ್ ಮುಂದೆ ಸಚಿವ ಪದವಿಗೆ ಪಟ್ಟು | ಸಿಎಂ ಬಣದ ವಿಕೆಟ್‌ಗಳೂ ಪತನ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ದಿಲ್ಲಿಯಲ್ಲಿ ರಾಜ್ಯ ಕಾಂಗ್ರೆಸ್ ನಾಯಕರು ತಮಗೆ ಮಂತ್ರಿ ಪದವಿ ಬೇಕು ಎಂದು ಒತ್ತಾಯಿಸುತ್ತಿದ್ದಾರೆ. ಇಲ್ಲಿ ಸಿದ್ದರಾಮಯ್ಯ ಬಣದ ನಸೀರ್ ಅಹ್ಮದ್ ಸೇರಿ ಒಂದೊಂದೇ ವಿಕೆಟ್ ಬೀಳತೊಡಗಿದೆ. ಏತ್ಮಧ್ಯೆ ಸಚಿವ ಸಂಪುಟ ಪುನಾರಚನೆ ಚರ್ಚೆಗಳು ಜೋರಾಗತೊಡಗಿದೆ. ಇದಕ್ಕಾಗಿ ರಾಜ್ಯದ 15ಕ್ಕೂ ಹೆಚ್ಚು ಶಾಸಕರ ನಿಯೋಗವು ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿರುವುದು ಕುತೂಹಲ ಕೆರಳಿಸಿದೆ.

**ಬದಲಾವಣೆಯ ಬಿರುಗಾಳಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಶೀಘ್ರದಲ್ಲೇ ಸಚಿವ ಸಂಪುಟದಲ್ಲಿ ಬದಲಾವಣೆಗಳಾಗಲಿವೆ ಎಂಬ ಊಹಾಪೋಹಗಳಿಗೆ ರೆಕ್ಕಪುಕ್ಕಗಳು ಹರಿದಾಡುತ್ತಿವೆ. ಸಚಿವ ಸ್ಥಾನಕ್ಕಾಗಿ ಆಕಾಂಕ್ಷಿಗಳಾಗಿರುವ ಶಾಸಕರು ತಮ್ಮ ಬೇಡಿಕೆಗಳನ್ನು ನೇರವಾಗಿ ಹೈಕಮಾಂಡ್ ಗಮನಕ್ಕೆ ತಂದಿದ್ದು ವಿಶೇಷವಾಗಿದೆ.

**ಶೀಘ್ರದಲ್ಲೇ ಸಂಪುಟ ಪುನಾರಚನೆ?:** ದಿಲ್ಲಿಯ ಸಭೆಯ ಬಳಿಕ ಮಾಜಿ ಸಚಿವ ಟಿ.ಬಿ. ಜಯಚಂದ್ರ ಮಾತನಾಡಿ, ಖರ್ಗೆ ಅವರು ನಮ್ಮ ಮನವಿಯನ್ನು ಸಕಾರಾತ್ಮಕವಾಗಿ ಸ್ವೀಕರಿಸಿದ್ದಾರೆ. ಪಕ್ಷದ ಹಿತದೃಷ್ಟಿಯಿಂದ ತೀರ್ಮಾನ ಕೈಗೊಳ್ಳುವ ಶ್ವಾಸವಿದೆ ಎಂದಿದ್ದಾರೆ. ಇದರಿಂದ ಸಚಿವ ಸಂಪುಟ ಪುನರ್ರಚನೆ ಶೀಘ್ರದಲ್ಲೇ ನಡೆಯುವ ನಿರೀಕ್ಷೆ ದಟ್ಟವಾಗಿದೆ.



### ಸಚಿವ ಪದವಿ ಬೇಕೆಂದವರು..!

ಮಂತ್ರಿಪದವಿಗಾಗಿ ಬೇಳೂರು ಗೋಪಾಲಕೃಷ್ಣ, ವಿಜಯ ಕುಲಕರ್ಣಿ, ಕೆ. ಶಡಕ್ಷರಿ ಸೇರಿದಂತೆ ಹಲವು ಶಾಸಕರು ಭಾಗಿಯಾಗಿದ್ದಾರೆ. ದೆಹಲಿಯಲ್ಲೇ ಉಳಿದು ಮುಂದಿನ ಹಂತದ ಮಾತುಕತೆ ನಡೆಸಲು ಚಿಂತನೆ ನಡೆಸಿದ್ದಾರೆ. ಶಾಸಕ ಎ.ಆರ್. ಕೃಷ್ಣಮೂರ್ತಿ ಸೇರಿದಂತೆ ಕೆಲವರು ಅಂಬೇಡ್ಕರ್ ಜಯಂತಿ ಆಚರಿಸಲು ನಾಡಿಗೆ ಮರಳಿ, ಆನಂತರ ಮತ್ತೆ ದೆಹಲಿಗೆ ತೆರಳುವ ಸಾಧ್ಯತೆ ಇದೆ ಎಂದಿದೆ ಮೂಲ.

### ಹೈ ಮುಂದೆ 2 ಬಣಗಳು

ಸಂಪುಟ ಪುನಾರ ರಚನೆ ಅಥವಾ ವಿಸ್ತರಣೆಯ ಬೇಡಿಕೆ ಇಟ್ಟು 38ಕ್ಕೂ ಹೆಚ್ಚು ಕಾಂಗ್ರೆಸ್ ಶಾಸಕರ ಗುಂಪು ಹೊಸದಿಲ್ಲಿಗೆ ತೆರಳಿದೆ. ಇದರಲ್ಲಿ ಸಿಎಂ ಸಿದ್ದರಾಮಯ್ಯ ಬಣದ ನಾಯಕರು ಮತ್ತು ಡಿಸಿಎಂ ಡಿಕೆಶಿ ಶಿವಕುಮಾರ್ ಬಣದ ನಾಯರೂ ಸೇರಿದ್ದಾರೆ. ಎಲ್ಲರೂ ಒಟ್ಟಾಗಿ ಹೈಕಮಾಂಡ್ ಮುಂದೆ ನಿಂತಿರುವುದು ರಾಜ್ಯ ಕಾಂಗ್ರೆಸ್ ಪಾಲಿಗೆ ಹೊಸ ಬೆಳವಣಿಗೆಯಾಗಿದೆ. ಇವರ ಶ್ರಮಕ್ಕೆ ಫಲ..? ಕಾದು ನೋಡಬೇಕಿದೆ.

### ರೋಪ ಪ್ರತ್ಯಾರೋಪ ಶುರು

ಕಾಂಗ್ರೆಸ್ ನಾಯಕರ ನಡೆ ಮುಸ್ಲಿಂ ಶಾಸಕರ ನಡುವಿನ ಭಿನ್ನಾಭಿಪ್ರಾಯವನ್ನು ಬೈ ಎಲೆಕ್ಷನ್ ಜಗಜ್ಜಾಹಿರಗೊಳಿಸಿದೆ. ಎರಡೂ ಬಣಗಳ ನಡುವೆ ಆರೋಪ ಪ್ರತ್ಯಾರೋಪ ತೀವ್ರಗೊಂಡಿದೆ. ಸಲೀಂ ಅಹ್ಮದ್ ಮತ್ತು ರಿಜ್ವಾನ್ ಅರ್ಷದ್ ಅವರು ಜಮೀರ್ ಬಣದ ವಿರುದ್ಧ ಆರೋಪ ಮಾಡಿದ್ದರು. ಇದಕ್ಕೆ ಕೌಂಟ–ರ್ ಆಗಿ ಅಬ್ದುಲ್ ಜಬ್ಬಾರ್ ಕೂಡಾ ತಮ್ಮ ಆಕ್ರೋಶ ಹೊರಹಾಕಿದ್ದಾರೆ. ಇದಕ್ಕೆ ಅವರು ಬೆಲೆ ತೆತ್ತಿದ್ದಾರೆ.

### ಬಂಡಾಯಕ್ಕೆ ಸಿಕ್ಕ ಪ್ರತಿಫಲ

ಒಂದೆಡೆ ರಾಜ್ಯ ಮುಸ್ಲಿಂ ನಾಯಕರ ಬಂಡಾಯ ಮತ್ತೊಂದೆಡೆ ಸಚಿವ ಆಕಾಂಕ್ಷಿಗಳ ದೆಹಲಿ ದಂಡಯಾತ್ರೆ ಡಿಸಿಎಂ ಡಿಕೆಶಿವಕುಮಾರ್ ಅವರನ್ನು ಕೆರಳಿಸಿದೆ. ರಾಜಕೀಯ ಕಾರ್ಯದರ್ಶಿ ಹುದ್ದೆಯಿಂದ ಸಸ್ಪೆಂಡ್ ಆದ ನಸೀರ್ ಬಗ್ಗೆ ಕೇಳಿದಾಗ, ಬಂಡಾಯಕ್ಕೆ ಸಿಕ್ಕ ಫಲ ಎಂದಿದ್ದು, ಇದು ಸಂಪುಟ ವಿಸ್ತರಣೆ ಸಮಯವಲ್ಲ ಎಂದೂ ಹೇಳಿದ್ದಾರೆ. ಆದಾಗ್ಯೂ, ಶಾಸಕರ ದೆಹಲಿ ಭೇಟಿ ತಪ್ಪಲ್ಲ ಎಂದೂ ಉಪಮುಖ್ಯಮಂತ್ರಿ ಸ್ಪಷ್ಟಪಡಿಸಿದ್ದಾರೆ.

## ಸಾಮಾಜಿಕ ಬದ್ಧತೆಯ ಯುವ ನಾಯಕ

• ಮಲ್ಲಮ್ಮ ನುಡಿ ವಾರ್ತೆ ಬೀದರ್



**ಜನಸೇವೆಗೆ ಮತ್ತೊಂದು ಹೆಸರೇ ಮಹೇಶ ಚಿಂತಾಮಣಿ**

ಜನಸೇವೆಯೇ ರಾಜಕಾರಣದ ಮೂಲ ಉದ್ದೇಶ ಎಂಬ ನಂಬಿಕೆಯಿಂದ ಕಾರ್ಯ ನಿರ್ವಹಿಸುತ್ತಿರುವ ಕಾಂಗ್ರೆಸ್ ಮುಖಂಡ ಮಹೇಶ ಚಿಂತಾಮಣಿ ಅವರು ಸಾಮಾಜಿಕ ಬದ್ಧತೆ ಹೊಂದಿದ ನಾಯಕನಾಗಿ ಗುರುತಿಸಿಕೊಂಡಿದ್ದಾರೆ. ಸಮಾಜದ ಬಡವರು, ಹಿಂದುಳಿದವರು ಹಾಗೂ ಶೋಷಿತ ವರ್ಗದ ಜನರ ಸಮಸ್ಯೆಗಳಿಗೆ ಸ್ಪಂದಿಸಿ ಸದಾ ಅವರ ನೆರವಿಗೆ ಧಾವಿಸುವ ಮೂಲಕ ಜನಮನ ಗೆದ್ದಿದ್ದಾರೆ. ಯುವಕರಿಗೆ ಪ್ರೋತ್ಸಾಹ, ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ಸಹಾಯ, ಸಮಾಜಮುಖಿ ಕಾರ್ಯಕ್ರಮಗಳ ಮೂಲಕ ಮಹೇಶ ಚಿಂತಾಮಣಿ ಅವರು ಜನಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ರಾಜಕೀಯ ಅಂದರೆ ಕೇವಲ ಅಧಿಕಾರವಲ್ಲ, ಸಂಕಷ್ಟಗಳಿಗೆ ಸ್ಪಂದಿಸಿ ಅಭಿವೃದ್ಧಿಯ ದಾರಿ ತೋರಿಸುವುದೇ ನಾಯಕತ್ವ ಎಂಬುದನ್ನು ತಮ್ಮ ಕಾರ್ಯಶೈಲಿಯಿಂದ ತೋರಿಸುತ್ತಿದ್ದಾರೆ.

## ಸಮಾಜಕ್ಕೆ ಅಂಬೇಡ್ಕರ್ ಕೊಡುಗೆ ಅನನ್ಯ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್



ಭಾರತದ ಸಂವಿಧಾನ ಶಿಲ್ಪಿಯಾಗಿ, ಸಾಮಾಜಿಕ ಸಮಾನತೆಯ ಹರಿಕಾರರಾಗಿ ಮತ್ತು ಶೋಷಿತರ ಧ್ವನಿಯಾಗಿ ನಾಗರಿಕ ಸಮಾಜಕ್ಕೆ ಅಂಬೇಡ್ಕರ್ ಅವರು ನೀಡಿದ ಕೊಡುಗೆ ಅನನ್ಯ ಮತ್ತು ಅಪ್ರತಿಮ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ತಿಳಿಸಿದ್ದಾರೆ.

ನಗರದ ಮಾಜಿ ಸಚಿವರ ಗೃಹ ಕಚೇರಿಯಲ್ಲಿ ಮಂಗಳವಾರ ನಡೆದ ಡಾ. ಬಿ.ಆರ್. ಅಂಬೇಡ್ಕರ್ ಅವರ ಜಯಂತಿ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿ, ಅಂಬೇಡ್ಕರ್ ಅವರು ಜಾತಿ ಪದ್ಧತಿಯ ನಿರ್ಮೂಲನೆ, ಮಹಿಳಾ ಹಕ್ಕುಗಳು, ಕಾರ್ಮಿಕನ ಕಲ್ಯಾಣ, ಮತ್ತು ಆರ್ಥಿಕ ಸುಧಾರಣೆಗಳ ಮೂಲಕ ಆಧುನಿಕ ಭಾರತದ ಬುನಾದಿ ಹಾಕಿದ ಮಹಾನ್ ಚೇತನ ಎಂದು ಕೊಂಡಾಡಿದ್ದಾರೆ.

## ಶಿಕ್ಷಣ, ಸಂಘಟನೆ, ಹೋರಾಟವೇ ಶಕ್ತಿ

• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್

ದಲಿತ ಸಮುದಾಯ ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಮೂಲಭೂತ ಹಕ್ಕುಗಳನ್ನು ಪಡೆದುಕೊಳ್ಳಬೇಕೆಂದು ಡಾ.ಸಿದ್ರಾಮ್ ವಘಮಾರೆ ತಿಳಿಸಿದ್ದಾರೆ.

ಪಟ್ಟಣದ ಶ್ರೀ ಮಾಣಿಕ ಪ್ರಭು ಸೌಹಾರ್ದ ಸಹಕಾರಿ ನಿ, ಆವರಣದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ಬಾಬಾ ಸಾಹೇಬ್ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮಾತನಾಡಿ, ಶೋಷಿತ ಸಮುದಾಯಗಳಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಚಿಂತನೆಗಳೇ ಶಕ್ತಿಯಾಗಿದೆ. ತಮ್ಮ ಬುದ್ಧಿ ಶಕ್ತಿಯಿಂದಲೇ ವಿಮೋಚನೆ ಸಾಧ್ಯವೆಂದು ಅಂಬೇಡ್ಕರ್ ನಂಬಿದ್ದರು. ದಲಿತ ಮತ್ತು ಹಿಂದುಳಿದ ಸಮುದಾಯಗಳು ಉನ್ನತ ಶಿಕ್ಷಣ ಪಡೆದುಕೊಂಡಾಗ ಮಾತ್ರ ಸಾಮಾಜಿಕ ಮತ್ತು ಆರ್ಥಿಕ ಸುಧಾರಣೆ ಹೊಂದಲು ಸಾಧ್ಯವೆಂದು ಪ್ರತಿಪಾದಿಸಿದ್ದಾರೆ. ಹುಲೇಪ್ಪ ಪವಿತ್ರ, ವೈಜಿನಾಥ ಧನ್ನೂರೆ, ಕೃಷ್ಣಪ್ಪ, ವೈಜಿನಾಥ ಡಾಂಗೆ, ರಾಮರೆಡ್ಡಿ ಕಂಚೆಟ್ಟಿ, ಸುರೇಶ ಧುಮಾಳೆ ಉಪಸ್ಥಿತರಿದ್ದರು.



> ದಲಿತ ಸಂಘಟನೆ ಹಿಂದುಳಿದ ಜಾತಿ, ಜನಾಂಗಗಳ ನೋವಿಗೆ ಧ್ವನಿ ನೀಡಿದೆ. ಪ್ರೊ.ಬಿ.ಕೃಷ್ಣಪ್ಪ ಅವರು ಸ್ಥಾಪಿಸಿದ ಈ ಸಂಘಟನೆ ರಾಜ್ಯದ ಉದ್ದಗಲಕ್ಕೂ ಪಟ್ಟ ಭದ್ರರ ವಿರುದ್ಧ ರಾಜಿ ರಹಿತ ಹೋರಾಟ ನಡೆಸುತ್ತಿದೆ. ನೊಂದವರ ಧ್ವನಿಯಾಗಿ ನೆರವು ನೀಡುತ್ತಿದೆ.
> –ಡಾ.ಸಿದ್ರಾಮ್ ವಘಮಾರೆ

**ಜನರ ಹಕ್ಕುಗಳಿಗಾಗಿ ಹೋರಾಡಿದ ಮಹಾನ್ ನಾಯಕ:** ಸೌಹಾರ್ದ ಬ್ಯಾಂಕ್ ಅಧ್ಯಕ್ಷ ರಮೇಶರೆಡ್ಡಿ ಮಾತನಾಡಿ, ಡಾ. ಅಂಬೇಡ್ಕರ್ ಅವರ ಜೀವನ ಮತ್ತು ಹೋರಾಟವನ್ನು ಸ್ಮರಿಸಿ, ಅಂಬೇಡ್ಕರ್ ಅವರು ಕೇವಲ ದಲಿತರಿಗಾಗಿ ಮಾತ್ರವಲ್ಲ, ಇಡೀ ದೇಶದ ಜನರ ಹಕ್ಕುಗಳಿಗಾಗಿ ಹೋರಾಟ ನಡೆಸಿದ ಮಹಾನ್ ನಾಯಕರು. ಜಾತಿ ವ್ಯವಸ್ಥೆಯ ವಿರುದ್ಧ ಅವರು ನಡೆಸಿದ ಹೋರಾಟ ಮತ್ತು ಸಮಾನತೆಯ ಸಂದೇಶವನ್ನು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು 'ಶಿಕ್ಷಣ, ಸಂಘಟನೆ ಮತ್ತು ಹೋರಾಟ' ಎಂಬ ಅವರ ತತ್ವಗಳು ಇಂದಿಗೂ ಯುವಕರಿಗೆ ದಾರಿದೀಪವಾಗಿವೆ ಎಂದು ಹೇಳಿದ್ದಾರೆ.

## ನಿರುದ್ಯೋಗಿ ಬೀದಿಗಿಳಿದು ಹೋರಾಡಬೇಕು

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು



ರಾಜ್ಯದಲ್ಲಿ ನಿರುದ್ಯೋಗ ತಾಂಡವವಾಡುತ್ತಿದೆ. ಪಾರದರ್ಶಕ ನೇಮಕಾತಿ ಮಾಡಬೇಕಾದ ಕರ್ನಾಟಕ ಲೋಕಸೇವಾ ಆಯೋಗ ಅಕ್ರಮಗಳಲ್ಲಿ ಮುಳುಗಿದೆ. ಈ ಸರ್ಕಾರ ಒಂದೇ ಒಂದು ನೇಮಕಾತಿ ಮಾಡಿಲ್ಲ. ಇಂಥ ಸಂದರ್ಭದಲ್ಲಿ ತಮ್ಮ ಹಕ್ಕು ಸಾಧನೆಗಾಗಿ ನಿರುದ್ಯೋಗಿ ಬೀದಿಗಿಳಿದು ಹೋರಾಟ ಮಾಡಬೇಕು ಎಂದು ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು ಅಭಿಪ್ರಾಯಪಟ್ಟರು.

ಪಕ್ಷದ ಕಚೇರಿಯಲ್ಲಿ ಕೇಂದ್ರ ಸಚಿವರು ಮಾಧ್ಯಮ ಪ್ರತಿನಿಧಿಗಳ ಜತೆ ಮಾತಾಡುತ್ತಾ, ಈ ಸರ್ಕಾರದ ವಿರುದ್ಧ ಬೀದಿಗಿಳಿದು ಹೋರಾಟ ಮಾಡಿ. ಪೊಲೀಸ್ ಕೇಸುಗಳಿಗೆಲ್ಲ ಹೆದರಬೇಡಿ. ಆ ಕೇಸುಗಳನ್ನು ಕಿತ್ತೆಸೆಯುವುದು ನಮ್ಮ ಜವಾಬ್ದಾರಿ ಎಂದು ಕುಮಾರಸ್ವಾಮಿ ಅವರು ನಿರುದ್ಯೋಗಿ ಯುವಕರಿಗೆ ಧೈರ್ಯ ತುಂಬಿದರು.

ಈ ಕೆಟ್ಟ ಸರ್ಕಾರದ ವಿರುದ್ಧ ಇಡೀ ರಾಜ್ಯದ ಎಲ್ಲೆಡೆ ಹೋರಾಟ ಮಾಡಬೇಕು. ಧಾರವಾಡ ಮಾತ್ರವಲ್ಲ, ಇಡೀ ರಾಜ್ಯದಲ್ಲಿ ಹೋರಾಟ ನಡೆಸಬೇಕು. ಇದನ್ನು ನಾನು ರಾಜಕೀಯಕ್ಕಾಗಿ ಕೇವಲ ರಾಜಕೀಯಕ್ಕಾಗಿ ಹೇಳುತ್ತಿಲ್ಲ. ಪ್ರತಿಭಾವಂತ ನಿರುದ್ಯೋಗಿ ಯುವಜನರ ಭವಣೆಯನ್ನು ಕಂಡು ರೋಸಿ ಹೋಗಿ ಹೇಳುತ್ತಿದ್ದೇನೆ ಎಂದು ಕೇಂದ್ರ ಸಚಿವರು ಬೇಸರದಿಂದ ಹೇಳಿದರು.

ಕೆಪಿಎಸ್ಸಿಯಲ್ಲಿ ಏನೇನು ನಡೆಯುತ್ತಿದೆ ನಾನು ಗಮನಿಸುತ್ತಿದ್ದೇನೆ. ಅದನ್ನು ಕ್ಲೀನ್ ಮಾಡುತ್ತೇನೆ ಎಂದು ನಿರಂತರವಾಗಿ ಹೇಳುತ್ತಿರುವ ಮುಖ್ಯಮಂತ್ರಿಗಳು ಇನ್ನೂ ಕ್ಲೀನ್ ಮಾಡುವುದರಲ್ಲಿ ಇದ್ದಾರೆ ಪಾಪ.. ಆದರೆ ಕೆಪಿಎಸ್‌ಸಿ ಮಾತ್ರ ಕೊಳೆತು ನಾರುತ್ತಿದೆ. ನಿರುದ್ಯೋಗಿ ಯುವಕರು ಬೀದಿಗೆ ಬೀದಿಗೆ ಬಂದು ಹೋರಾಟ ಮಾಡುವ ಪರಿಸ್ಥಿತಿ ಸೃಷ್ಟಿಯಾಗಿದೆ ಎಂದು ಅವರು ಪ್ರಶ್ನೆಯೊಂದಕ್ಕೆ ಉತ್ತರಿಸಿದರು.

ಕೆಪಿಎಸ್‌ಸಿಯಲ್ಲಿ ತಪ್ಪು ಮಾಡಿದವರನ್ನು ಹಾಗೆಯೇ ಬಿಟ್ಟಿದ್ದಾರೆ. ತಪ್ಪೇ ಮಾಡಿರುವ ವ್ಯಕ್ತಿಗಳ ವಿರುದ್ಧ ಷಡ್ಯಂತ್ರ ಮಾಡುತ್ತಿದ್ದಾರೆ. ಇಡೀ ರಾಜ್ಯದಲ್ಲಿರುವ ವಿದ್ಯಾರ್ಥಿಗಳು ಇಂತಹ ಕೆಟ್ಟ ಸರ್ಕಾರದ ವಿರುದ್ಧ ಪ್ರತಿಭಟನೆ ಮಾಡಬೇಕು. ಇಲ್ಲವಾದರೆ ಅವರಿಗೆ ನ್ಯಾಯ ಸಿಗಲ್ಲ. 60ರಿಂದ 70 ಸಾವಿರ ಹುದ್ದೆಗಳನ್ನು ಭರ್ತಿ ಮಾಡುತ್ತೇವೆ ಎಂದು ಯುವ ಜನರಲ್ಲಿ ನಂಬಿಕೆ ಹುಟ್ಟಿಸಿದ್ದರು. ಎನ್ನುವುದಿಲ್ಲ ಈ ಸರ್ಕಾರ. ಇದೇ ಸಿದ್ದರಾಮಯ್ಯ ಅವರು 2011ರಲ್ಲಿ ಕೆಪಿಎಸ್ಸಿ ಮಾಡಿದ್ದ ನೇಮಕಾತಿ ಪ್ರಕ್ರಿಯೆಯನ್ನು ರದ್ದು ಮಾಡಿದ್ದರು. ಹಿಂಸೆ ಕೊಡುವುದಕ್ಕೂ ಇತಿಮಿತಿ ಇಲ್ಲವೇ? ಒಬ್ಬ ವ್ಯಕ್ತಿಯನ್ನಷ್ಟೇ ಗುರಿಯಾಗಿಸಿಕೊಂಡು ಈ ರೀತಿ ಮಾಡುತ್ತಿದ್ದಾರೆ. ಯುವಕರು ಸಿದ್ದರಾಗಬೇಕು, ಮೊದಲು ಈ ಕೆಟ್ಟ ಸರ್ಕಾರವನ್ನ ಒದ್ದು ಹೊರಗೆ ಹಾಕಿ ಎಂದ ಕುಮಾರಸ್ವಾಮಿ ಅವರು ಕರೆ ನೀಡಿದರು.

**ಕೆಳಗೆ ಕುಳಿತಿರುವವನಿಗೆ, ಹೊರಗೆ, ಒಳಗೆ ಇರುವವನಿಗೂ ಒಂದಲ್ಲ ಒಂದು ದಿನ ಅವಕಾಶವಿದೆ. ಒಳಮೀಸಲಾತಿ ವಿಚಾರದಲ್ಲಿ ಬಿಜೆಪಿ ದಾರಿ ತಪ್ಪಿಸುತ್ತಿದೆ:ಡಿಸಿಎಂ ಡಿಕೆಶಿವಕುಮಾರ್**

# ನೈಜ ಮತದಾರರಿಗೆ ಅನ್ಯಾಯವಾಗದಂತೆ ಎಚ್ಚರವಹಿಸಿ: ಜಿಲ್ಲಾಧಿಕಾರಿ ಸೂಚನೆ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ, ಪ್ರಕ್ರಿಯೆಯು ಸಂಪೂರ್ಣ ಕಾನೂನುಬದ್ಧ ಹಾಗೂ ಪಾರದರ್ಶಕವಾಗಿರಬೇಕು. ಯಾವುದೇ ಕಾರಣಕ್ಕೂ ಒಬ್ಬನೇ ನೈಜ ಮತದಾರ ಪಟ್ಟಿಯಿಂದ ಹೊರಗುಳಿಯಬಾರದು ಎಂದು ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ತಾಲೂಕಿನ ಚೊಂಡಿಮುಖೇಡ್ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಗೆ ಸೋಮವಾರ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಅಲ್ಲಿ ನಡೆಯುತ್ತಿದ್ದ ಮತದಾರರ ಪಟ್ಟಿ ಪರಿಷ್ಕರಣಾ ಕಾರ್ಯವನ್ನು ಖುದ್ದಾಗಿ ಪರಿಶೀಲಿಸಿದರು. ಈ ವೇಳೆ ಬಿಎಲ್‌ಒ ಹಾಗೂ ಗ್ರಾಮ ಆಡಳಿತಾಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಪ್ರಕ್ರಿಯೆಯ ಕುರಿತು ಮಹತ್ವದ ನಿರ್ದೇಶನಗಳನ್ನು ನೀಡಿದರು. ಮತದಾರರು ವಾಸಸ್ಥಳ ಬದಲಾಯಿಸಿದಾಗ ವಿವಿಧ ಮತಗಟ್ಟೆಗಳಲ್ಲಿ ಹೆಸರು ದಾಖಲಾಗಿರುವ ಸಾಧ್ಯತೆ ಇರುತ್ತದೆ. ಅಂತಹ ಹೆಸರುಗಳನ್ನು ಸಮಗ್ರವಾಗಿ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು. ತಾಂತ್ರಿಕ ಕಾರಣಗಳಿಂದಾಗಿ ಅರ್ಹ ಮತದಾರರನ್ನು 'ಕಾಣೆ–ಯಾದ ಮತದಾರರು' ಎಂದು ತಪ್ಪಾಗಿ ವರ್ಗೀಕರಿಸಬಾರದು. ನೈಜ ಮತದಾರರ ಹಕ್ಕುಗಳನ್ನು ರಕ್ಷಿಸುವುದು ಮೊದಲ ಆದ್ಯತೆ–ಯಾಗಲಿ. ಪಟ್ಟಿಯಿಂದ ಹೆಸರು ಕೈಬಿಡಲ್ಪಟ್ಟ ವ್ಯಕ್ತಿಗಳಿಗೆ ತಮ್ಮ ಅರ್ಹತೆ ಸಾಬೀತುಪಡಿಸಲು ಸೂಕ್ತ ಅವಕಾಶ ನೀಡಬೇಕು. ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ನ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

ಈ ಸಂದರ್ಭದಲ್ಲಿ ಕಮಲನಗರ ತಹಸೀಲ್ದಾರ ಅಮಿತಕುಮಾರ ಕುಲಕರ್ಣಿ, ಸೇರಿದಂತೆ ಸಂಬಂಧಪಟ್ಟ ಅಧಿಕಾರಗಳು ಮತ್ತು ಗ್ರಾಮಸ್ಥರು ಇದ್ದರು.

# ಅಂಬೇಡ್ಕರ್ ವಿಚಾರಧಾರೆ ಸಮಾಜಕ್ಕೆ ದಾರಿದೀಪ: ಬಸವರಾಜ

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಡಾ.ಬಿ.ಆರ್.ಅಂಬೇಡ್ಕರ್ ಅವರ ವಿಚಾರಧಾರೆಗಳು ಸಮಾನತೆ, ಸ್ವಾತಂತ್ರ್ಯ, ಭ್ರಾತೃತ್ವ ಮತ್ತು ಸಾಮಾಜಿಕ ನ್ಯಾಯದ ತಳಹದಿಯ ಮೇಲೆ ನಿಂತಿರುವ ಶ್ರೇಷ್ಠ ಮಾನವತಾವಾದಿ ಚಿಂತನೆಗಳಾಗಿವೆ ಎಂದು ಪ್ರಾಚಾರ್ಯ ಬಸವರಾಜ ಮೊಳಕೀರೆ ಹೇಳಿದರು.

ತಾಲೂಕಿನ ಕರಡ್ಯಾಳ ಚನ್ನಬಸವೇಶ್ವರ ಗುರುಕುಲದಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೆಯ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸಂವಿಧಾನ ಶಿಲ್ಪಿಯಾಗಿ ಅಂಬೇಡ್ಕರ ಅವರು ಶೋಷಿತರ ಧ್ವನಿಯಾಗಿ, ಶಿಕ್ಷಣ ಮತ್ತು ಮಹಿಳಾ ಸಬಲೀಕರಣದ ಪ್ರತಿಪಾದಕರಾಗಿ ಅವರು ನೀಡಿದ ಕೊಡುಗೆಗಳು ಭಾರತೀಯ ಸಮಾಜವನ್ನು ಸುಧಾರಿಸುವಲ್ಲಿ ದಾರಿದೀಪವಾಗಿವೆ. ವಿದ್ಯಾರ್ಥಿಗಳು ಅಂಬೇಡ್ಕರ್ ಅವರ ವಿಚಾರಧಾರೆ ಮೈಗೂಡಿಸಿಕೊಂಡು ತಮ್ಮ ಜೀವನವನ್ನು ಉತ್ತಮವಾಗಿ ರೂಪಿಸಿ ಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಉಪ ಪ್ರಾಚಾರ್ಯ ಸಿದ್ರಾಮ ಗೊಗ್ಗಾ, ಸಿಬಿಎಸ್ ಇ ಪ್ರಿನ್ಸಿಪಲ್ ಎನ್.ರಾಜು, ಲಚಮಾ ರೆಡ್ಡಿ, ಹಣಮಂತ ಜ್ಯಾಂತಿಕರ್, ಶಶಿಧರ ಕುಲಕರ್ಣಿ, ಬಲಭೀಮ ಸುತಾರ್ ಸೇರಿದಂತೆ ಹಲವರು ಇದ್ದರು.



## ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೊ: 9845028349

# ಬ್ರಷ್ಟ ಅಧಿಕಾರಿಗಳಿಗೆ ಕಡಿವಾಣ ಹಾಕುವುದು ಯಾವಾಗ?

ಸರ್ಕಾರದ ವ್ಯವಸ್ಥೆಯಲ್ಲಿ ಪಾರದರ್ಶಕತೆ, ಕಠಿಣ ಕಾನೂನು ಜಾರಿ ಮತ್ತು ಜನಜಾಗೃತಿ ಹೆಚ್ಚಾದಾಗ ಮಾತ್ರ ಬ್ರಷ್ಟ ಅಧಿಕಾರಿಗಳಿಗೆ ಕಡಿವಾಣ ಹಾಕಲು ಸಾಧ್ಯ. ಲಂಚ, ನಿರ್ಲಕ್ಷ್ಯ ಹಾಗೂ ಅಧಿಕಾರ ದುರುಪಯೋಗ ಮಾಡುವವರ ವಿರುದ್ಧ ಸರ್ಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಜನರ ಕೆಲಸಕ್ಕೆ ವಿಳಂಬ ಮಾಡುವ ಹಾಗೂ ಬಡವರನ್ನು ಕಚೇರಿಗಳಲ್ಲಿ ಅಲೆದಾಡಿಸುವ ಅಧಿಕಾರಿಗಳ ಮೇಲೆ ನಿರ್ದಾಕ್ಷಿಣ್ಯ ಕ್ರಮ ಜರುಗಿಸಬೇಕು.

ಪ್ರಾಮಾಣಿಕ ಅಧಿಕಾರಿಗಳಿಗೆ ಪ್ರೋತ್ಸಾಹ ನೀಡುವ ಜೊತೆ–ಗೆ ಬ್ರಷ್ಟರನ್ನು ಸೇವೆಯಿಂದ ಅಮಾನತು, ತನಿಖೆ ಹಾಗೂ ಶಿಕ್ಷೆಗೆ ಒಳಪಡಿಸಿದಾಗ ಮಾತ್ರ ವ್ಯವಸ್ಥೆಯಲ್ಲಿ ಬದಲಾವಣೆ ಕಾಣಬಹುದು. ಜನರೂ ಕೂಡ ಭಯ ಬಿಟ್ಟು ದೂರು ನೀಡುವ ಮನೋಭಾವ ಬೆಳೆಸಿಕೊಂಡಾಗ ಮತ್ತು ಪ್ರತಿಯೊಬ್ಬ ನಾಗರಿಕ ತನ್ನ ಹಕ್ಕಿಗಾಗಿ ಧ್ವನಿ ಎತ್ತಿದಾಗ ಭ್ರಷ್ಟಾಚಾರಕ್ಕೆ ಕಡಿವಾಣ ಬೀಳುತ್ತದೆ.

ಬ್ರಷ್ಟಾಚಾರ ಮುಕ್ತ ಆಡಳಿತವೇ ಉತ್ತಮ ಸಮಾಜದ ಅಡಿಪಾಯ.



ಬೀದರ :ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಅಪರ ಜಿಲ್ಲಾಧಿಕಾರಿ ಶಿವಾನಂದ ಕರಾಳೆ, ಸಹಾಯಕ ಆಯುಕ್ತರಾದ ಮಹಮ್ಮದ ಶಕೀಲ್, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಯೋಗೇಶ, ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಚಂದ್ರಕಾಂತ ಶಾಬಾದಕರ, ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ ಚಿಮಕೋಡೆ, ಮುಖಂಡರಾದ ರೋಹಿದಾಸ ಘೋಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಶಾಲೆಯಲ್ಲಿ ಅಂಬೇಡ್ಕರ್ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ನಗರದ ಹೊರವಲಯದ ಅಲ್ಲೀಪುರದಲ್ಲಿರುವ ಶ್ರೀ ವಾಲ್ಮೀಕಿ ಗುರುಕುಲಾಶ್ರಮದ ಅಡಿಯಲ್ಲಿ ನಡೆಯುತ್ತಿರುವ ಶ್ರೀ ಕಂಪಿಲರಾಯ ಗಿರಿಜನ ಪ್ರೌಢಶಾಲೆಯಲ್ಲಿ ಮಂಗಳವಾರ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅತ್ಯಂತ ಸಡಗರದಿಂದ ಆಚರಿಸಲಾಯಿತು.

ಶಾಲಾ ಆವರಣದಲ್ಲಿ ನಡೆದ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಗಣ್ಯರು ಗೌರವ ನಮನ ಸಲ್ಲಿಸಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲೆಯ ಅಧ್ಯಕ್ಷ ಎನ್.ಕೆ. ಸದಾಶಿವಪ್ಪ ಅವರು ಮಾತನಾಡಿ, ಬಾಬಾಸಾಹೇಬ್ ಅಂಬೇಡ್ಕರ್ ಅವರು ದೇಶದ ಸಮಾನತೆಗಾಗಿ ತಮ್ಮ ಇಡೀ ಜೀವನವನ್ನೇ ಮುಡುಪಾಗಿಟ್ಟ ಮಹಾನ್ ಚೇತನ. ಅವರ ತತ್ವಗಳು ಇಂದಿಗೂ ನಮಗೆ ದಾರಿದೀಪವಾಗಿವೆ ಎಂದು ಅಭಿಪ್ರಾಯಪಟ್ಟರು. ಈ ಸಂದರ್ಭದಲ್ಲಿ ಸಂಸ್ಥೆಯ ಕಾರ್ಯದರ್ಶಿ ಬಿ.ರುದ್ರಪ್ಪ, ನಿಕಟಪೂರ್ವ ಅಧ್ಯಕ್ಷ ಬಿ.ಜಯರಾಂ ಸೇರಿದಂತೆ ಆಡಳಿತ ಮಂಡಳಿಯ ಸರ್ವ ಸದಸ್ಯರು, ಶಾಲೆಯ ಮುಖ್ಯಗುರುಗಳು, ಸಹ ಶಿಕ್ಷಕರು ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ದೇಶಕಂಡ ಮಹಾನ್ ಶಕ್ತಿ ಬಾಬಾ ಸಾಹೇಬ್ ಅಂಬೇಡ್ಕರ



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಭಾರತದ ಅಪ್ರತಿಮ ಮಹಾನ್ ವ್ಯಕ್ತಿ ಡಾ।ಬಿ.ಆರ್.ಅಂಬೇಡ್ಕರ್‌ರವರಾಗಿದ್ದರು ಎಂದು ಶ್ರೀರಾಮನವಮಿ ಉತ್ಸವ ಸಮಿತಿಯ ಮುಖಂಡ ಚನ್ನಬಸವಣ್ಣ ಬಳತೆ ಅಭಿಪ್ರಾಯಪಟ್ಟರು. ಪಟ್ಟಣದ ಬಳತೆ ಯೋಗ ಮಂದಿರದಲ್ಲಿ ವಿಶ್ವಹಿಂದೂಪರಿಷದ್–ಬಜರಂಗದಳ ಹಾಗು ಶ್ರೀ ರಾಮ ನವಮಿ ಉತ್ಸವ ಸಮಿತಿಯ ವತಿಯಿಂದ ಆಯೋಜಿಸಿದ್ದ ಡಾ।ಬಿ.ಆರ್. ಅಂಬೇಡ್ಕರ್ 135ನೇ ಜಯಂತಿ ಮಹೋತ್ಸವ ಉದ್ಘಾಟಿಸಿ ಅವರು ಮಾತನಾಡಿದರು. ಭಾರತೀಯರು ಸದಾ ನೆನಪಿನಲ್ಲಿಟ್ಟುಕೊಳ್ಳಬೇಕಾದ ಮಹಾನ್ ವ್ಯಕ್ತಿ ಡಾ।ಬಿ.ಆರ್. ಅಂಬೇಡ್ಕರ್ ರವರಾಗಿದ್ದಾರೆ. ಅವರ ದೂರ ದೃಷ್ಠಿತ್ವದಿಂದ ಇಂದು ನಾವೆಲ್ಲರೂ ಸಮೃದ್ಧಿಯಿಂದ ಬಾಳುವೆ ನಡೆಸುವಂತಾಗಿದೆ ಎಂದು ಹೇಳಿದರು. ವಿಶ್ವಹಿಂದೂ ಪರಿಷತ್ ಮುಖಂಡ ಶಿವುಲೋಖಂಡೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಉತ್ಸವ ಸಮಿತಿಯ ಮಾತೃಶಕ್ತಿ ಮುಖಂಡೆ ಸುನಿತಾ ಕುಡತೆ (ಮೀನಕೇರೆ) ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಪ್ರಮುಖರಾದ ಸೋಮನಾಥಪ್ಪ ಅಸ್ಟೂರೆ, ಶಿವಲಿಂಗ ಕುಂಬಾರ, ಪ್ರಕಾಶ ಮಾಶೆಟ್ಟೆ, ಸತೀಶ ಮುದಾಳೆ, ಜಯಕಿಶನ ಬಿಯಾಣಿ, ಬಸವರಾಜ ಕನ್ನಾಳೆ, ಡಾ। ಜಗದೀಶ ಭೂರೆ, ಶ್ರೀನಾಥ ಹೆಡಾ, ಸಚಿನ ಜಾಧವ, ರವಿ ಕುಂಬಾರ, ಶೈಲೇಶ ಮಾಲಪಾಣಿ, ದೇವರಾಜಸಿಂಗ ಠಾಕೂರ, ಅಮರ ಚವ್ಹಾಣ, ರಾವುಲ ವಾಡೆಕರ, ಕೃಷ್ಣಕಾಂತ ಬಿರಾದಾರ, ಅಕಾಶ ಮೈಲಾರೆ, ಬಳಿರಾಮ ಪವಾರ, ಕಪೀಲ ಕಲ್ಯಾಣೆ, ಸುರೇಖಾ, ಶರದ ದುರ್ಗಾಳೆ, ಶೈಲೇಶ ಮಾಲಪಾಣಿ ಉಪಸ್ಥಿತರಿದ್ದರು.

# ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಜಯಂತ್ಯುತ್ಸವ

• ಮಲ್ಲಮ್ಮ ನುಡಿ ವಾರ್ತೆ ಬೀದರ



ದೇಶದಲ್ಲಿ ಸಮಾನತೆಯ ಸಮಾಜ ನಿರ್ಮಾಣಕ್ಕಾಗಿ ಅತ್ಯುತ್ತಮ ಸಂವಿಧಾನ ರಚಿಸಿಕೊಟ್ಟ ಮಹಾನ್ ಸಂವಿಧಾನಿಕ ತಜ್ಞ ಡಾ.ಬಿ.ಆರ್. ಅಂಬೇಡ್ಕರ್ ಎಂದು ಶ್ಲಾಘಿಸುತ್ತಾ, ಶಿಕ್ಷಣವನ್ನು ಸರಿಯಾಗಿ ಪಡೆದುಕೊಂಡು ಬರಿ ಸರಕಾರಿ ಕೆಲಸವನ್ನು ಪಡೆದುಕೊಳ್ಳುವುದಷ್ಟೇ ಮುಖ್ಯವಲ್ಲ, ಶಿಕ್ಷಣವು ಜೀವನವನ್ನು ರೂಪಿಸುತ್ತದೆ ಎನ್ನುವುದಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ರವರೆ ಸಾಕ್ಷಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತನ್ನು ಹೇಳುತ್ತಾ, ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎನ್ನುವುದು ಶ್ರೀಯುತರ ಮುಖ್ಯ ಧ್ಯೇಯ ವಾಕ್ಯಗಳಾಗಿದ್ದವು, ಶಿಕ್ಷಣ ಎನ್ನುವುದು ಪುರುಷರಿಗೆ ಎಷ್ಟು ಮುಖ್ಯವೋ,

ಮಹಿಳೆಯರಿಗೂ ಸಹ ಅಷ್ಟೇ ಮುಖ್ಯವೆಂದು, ಮನಸ್ಸಿನ ಅಭಿವೃದ್ಧಿ ಮಾನವ ಜನಾಂಗದ ಅಂತಿಮ ಗುರಿಯಾಗಿರಬೇಕು, ಇತಿಹಾಸವನ್ನು ಮರೆತವರು ಇತಿಹಾಸವನ್ನು ನಿರ್ಮಿಸಲಾರರು, ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಮಾಡಿದ ಸಾಧನೆ ಅನನ್ಯವಾದುದೆಂದು, ತೋಟಗಾರಿಕೆ ಮಹಾವಿದ್ಯಾಲಯ, ಬೀದರನ ರಾಷ್ಟ್ರೀಯ ಸೇವಾ ಯೋಜನೆ ಘಟಕ ಹಾಗೂ ಪರಿಶಿಷ್ಟಜಾತಿ ಮತ್ತು ಪರಿಶಿಷ್ಟ ಪಂಗಡ ಕೋಶ, ತೋ.ಮ.ವಿ., ಬೀದರ ಇವರ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ರವರ 135 ನೇ ಜಯಂತೋತ್ಸವ ಕಾರ್ಯಕ್ರದಲ್ಲಿ ಡಾ.ಎಸ್.ವಿ. ಪಾಟೀಲ್, ಡೀನ್, ತೋ. ಮ.ವಿ., ಬೀದರವರು ಭಾಗಹಿಸಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಅರ್ಪಿಸುವುದರೊಂದಿಗೆ ಗೌರವನ್ನು ಸಮರ್ಪಿಸಿ ಅಧ್ಯಕ್ಷೀಯ ಭಾಷಣವನ್ನು ಮಾಡಿದರು.

ಮುಂದುವರೆದು, ಭಾರತದ ಪ್ರತಿಯೊಬ್ಬ ನಾಗರಿಕರು ಸ್ವಾತಂತ್ರ್ಯ, ಸಮಾನತೆ, ಸಹಬಾಳ್ವೆಯಿಂದ ಪರಸ್ಪರ ಪ್ರಗತಿ ಹೊಂದಬೇಕೆಂಬುದೇ ಡಾ.ಬಿ.ಆರ್. ಅಂಬೇಡ್ಕರ್ ರವರ ಮುಖ್ಯ ಉದ್ದೇಶವಾಗಿತ್ತು. ಭಾರತದ ಕಾನೂನು ಸುವ್ಯವಸ್ಥೆ, ಅಸ್ಪೃಶ್ಯತೆ ನಿವಾರಣೆ, ಪ್ರಜೆಗಳ ಮೂಲಭೂತ ಕರ್ತವ್ಯ, ಸಮಾನತೆ, ಶಿಕ್ಷಣ ಕ್ಷೇತ್ರ ಸೇರಿದಂತೆ ಹಲವು ಕ್ಷೇತ್ರಗಳಿಗೆ ಅವರು ನೀಡಿದ ಕೊಡುಗೆ ಅವಿಸ್ಮರಣೀಯವಾದುದೆಂದು ಶ್ಲಾಘಿಸಿದರು. ಅಂಬೇಡ್ಕರ್ ರವರು ಅಪಮಾನಗಳ ನಡುವೆಯೇ ಭಾರತದ ಮಹಾನ್ ಚೇತನವಾಗಿ ಬೆಳದದ್ದು ಎಲ್ಲರನ್ನು ಬೆರಗುಗೊಳಿಸುವಂತಹುದು. ಅಂಬೇಡ್ಕರ್ ಅವರ ಜೀವನ ಸಾಧನೆಯನ್ನು ಪ್ರತಿಯೊಬ್ಬ ವಿದ್ಯಾರ್ಥಿಯು ತಿಳಿದುಕೊಳ್ಳುವಂತಾಗಬೇಕು, ಅಂಬೇಡ್ಕರ್ ಅವರು ತಮ್ಮ ವಿದ್ಯಾರ್ಥಿ ಜೀವನದಲ್ಲಿನ ಕಷ್ಟದ ಬದುಕು, ವಿದ್ಯಾಭ್ಯಾಸ, ಜ್ಞಾನಾರ್ಜನೆ ಅರಿತು ಮುನ್ನಡೆಯಬೇಕೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ಡಾ.ಮೊಹಮ್ಮದ್ ಫಾರೂಕ್, ಡಾ.ವಿಜಯ ಮಹಾಂತೇಶ ಮತ್ತು ಆಂಜನೇಯ ಎನ್. ಡಾ.ಬಿ.ಆರ್.ಅಂಬೇಡ್ಕರ್ ರವರ ಹಾಗೆ ಪ್ರತಿಯೊಬ್ಬ ವಿದ್ಯಾರ್ಥಿಗಳು ಅಭ್ಯಾಸ ಮಾಡಿ ಒಳ್ಳೆಯ ಸಾಧನೆ ಮಾಡಿದಲ್ಲಿ ಮಾತ್ರ ಶ್ರೀಯುತರ ಕನಸು ನನಸು ಮಾಡಿದಂತಾಗುತ್ತದೆ. ವಿದ್ಯಾರ್ಥಿಗಳು ಗ್ರಂಥಾಲಯಗಳಿಗೆ ತೆರಳಿ ಪಠ್ಯ ಪುಸ್ತಕಗಳ ಜೊತೆಗೆ ಸ್ಪರ್ಧಾತ್ಮಕ ಪುಸ್ತಕಗಳನ್ನು ಓದಿ ಡಾ.ಬಿ.ಆರ್. ಅಂಬೇಡ್ಕರ್ ರವರಂತೆ ಜ್ಞಾನಿಗಳಾದಲ್ಲಿ ಮಾತ್ರ ಈ ಸಮಾಜದ ಬದಲಾವಣೆ ಸಾಧ್ಯವೆಂದು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು. ತೋಟಗಾರಿಕೆ ಮಹಾವಿದ್ಯಾಲಯದ ವಿದ್ಯಾರ್ಥಿಗಳಾದ ಸಂದೀಪ ಕಟಬರ್ ಇವರು ಡಾ. ಬಿ.ಆರ್. ಅಂಬೇಡ್ಕರ್ ಇವರ ಜೀವನ ಚರಿತ್ರೆ ಹಾಗೂ ಸಂವಿಧಾನದ ಮಹತ್ವದ ಕುರಿತು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು. ಮಹಾವಿದ್ಯಾಲಯದ ಶಿಕ್ಷಕ, ಶಿಕ್ಷಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಮತ್ತು ಕಾರ್ಮಿಕ ವರ್ಗದವರು ಅತ್ಯುತ್ಸಾಹದಿಂದ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ರಾಷ್ಟ್ರೀಯ ಸೇವಾ ಯೋಜಾನಾಧಿಕಾರಿಯಾದ ಡಾ. ವಿಜಯ ಮಹಾಂತೇಶ, ಸಹಾಯಕ ಪ್ರಾಧ್ಯಾಪಕರು, ತೋ.ಮ.ವಿ., ಬೀದರ. ರವರು ಕಾರ್ಯಕ್ರಮದ ನೇತೃತ್ವವನ್ನು ವಹಿಸಿದರು. ವಿದ್ಯಾರ್ಥಿನಿಯಾದ ಮಧುಮತಿ ಒಡೆಯರ ಸ್ವಾಗತ ಭಾಷಣ, ವಂದನಾರ್ಪಣೆ ಮತ್ತು ನಿರೂಪಿಸಿದರು.



ಬಸವಕಲ್ಯಾಣ: ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದ ದಾಸೋಹ ಮನೆಯಲ್ಲಿ ಅಂಬೇಡ್ಕರ ಜಯಂತಿ ನಿಮಿತ್ಯ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಮಂಗಳವಾರ ಭಾರತರತ್ನ ಬಿ. ಆರ್. ಅಂಬೇಡ್ಕರ ರವರ ಭಾವಚಿತ್ರಕ್ಕೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಹೇಮಲತಾ ಎಂ. ಹಿರೇಮಠ, ಶಿವಶರಣಯ್ಯ ಕಂಬಳಿಮಠ, ಸಿದ್ರಾಮ ಕವಳೆ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).

# ಅಂಬೇಡ್ಕರ್ ತತ್ವಾದರ್ಶ ಅಳವಡಿಸಿಕೊಳ್ಳಿ: ಸತೀಶ್



• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಎಲ್ಲ ವರ್ಗದ ಜನರ ಅಭಿವೃದ್ಧಿಗಾಗಿ ಹಗಲಿರುಳು ದುಡಿದಿದ್ದಾರೆ. ಹೀಗಾಗಿ ಪ್ರತಿಯೊಬ್ಬರೂ ಅವರ ತತ್ವಾದರ್ಶಗಳನ್ನು ಮೈಗೂಡಿಸಿಕೊಂಡು ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು' ಎಂದು ಮುಖ್ಯಾಧಿಕಾರಿ ಸತೀಶ ಗುಡ್ಡೆ ಹೇಳಿದರು. ಪಟ್ಟಣದ ಪುರಸಭೆಯಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಸಮಾಜದ ಕೊನೆಯ ವ್ಯಕ್ತಿಗೂ ಶಿಕ್ಷಣ ಸಿಗಬೇಕು. ಶೋಷಣೆಮುಕ್ತ ಸಮಾಜ ನಿರ್ಮಾಣವಾಗಬೇಕು ಎಂಬುದು ಅಂಬೇಡ್ಕರ್ ಕನಸಾಗಿತ್ತು. ಇದನ್ನು ಸಾಕಾರಗೊಳಿಸಲು ಅವರು ಇಡೀ ಜೀವನವನ್ನೇ ಮುಡಿಪಾಗಿಟ್ಟರು. ಇಂದಿನ ಯುವಪೀಳಿಗೆಗೆ ಅಂಬೇಡ್ಕರ್ ಅವರು ಮಾರ್ಗದರ್ಶಿಯಾಗಿದ್ದಾರೆ ಎಂದರು.

ಈ ಸಂದರ್ಭದಲ್ಲಿ ಸಿಬ್ಬಂದಿಗಳಾದ ವಾಣಿ ಕುಲಕರ್ಣಿ, ವಿಜಯಕುಮಾರ, ವಿಜಯದೀಪ, ಚಿದಾನಂದ, ಸಂತೋಷ ಬಿರಾದಾರ್, ರವಿಕುಮಾರ ಸ್ವಾಮಿ, ಆನಂದ, ಶಿವಕುಮಾರ, ರಾಜಕುಮಾರ ಗುತೆ–ದಾರ್, ಕವಿತಾ, ಸರೋಜನಿ, ಸಚಿನ, ನಥಾನಿಯೆಲ್, ಅಶ್ವಿನಿ ಚವ್ಹಾಣ, ಮಂಜುಳಾ, ಬಕ್ಕಪ್ಪ, ರಾಜೇಶ ತೆಲಂಗ, ರಾಜೆಶ್ರೀ, ಮಾಲಾಶ್ರೀ, ಐಶ್ವರ್ಯ, ಪ್ರಿಯಾ, ಪ್ರಮುಖರಾದ ಮುಜಾಫರ್ ಪಟೇಲ್, ಅಶೋಕ ಸ್ವಾಮಿ, ಶಾಮರಾವ ಭುತ್ತಳೆ, ವಿಶಾಲ ಬೋರಳೆ, ರಹೇಮಾನ ಪಾಶ, ಹಬೀಬ್, ಷರೀಫ್, ಭಾಸ್ಕರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಬಸವ ಅಂಬೇಡ್ಕರ್ ದುಡಿವ ವರ್ಗದ ನಾಯಕರು



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ


ಬಸವಣ್ಣನವರು ಮತ್ತು ಬಾಬಾಸಾಹೇಬ್ ಅಂಬೇಡ್ಕರ್ ಅವರು ದುಡಿಯುವ ವರ್ಗದ ಪರವಾಗಿ ಬದುಕಿದ್ದರು ಎಂದು ಚಿಗರಳ್ಳಿಯ ಮರುಳ ಶಂಕರದೇವ ಗುರುಪೀಠದ ಪೂಜ್ಯಶ್ರೀ ಸಿದ್ಧಬಸವ ಕಬೀರ ಮಹಾಸ್ವಾಮಿಗಳು ಹೇಳಿದರು. ನಗರದ ಶ್ರೀ ಬಸವೇಶ್ವರ ಐಟಿಐ ಕಾಲೇಜಿನಲ್ಲಿ ಬಸವ ಜಯಂತಿ ಮತ್ತು ಮಹಾತ್ಮ ಬಸವೇಶ್ವರರ 76ನೇ ಜಾತ್ರಾ ಮಹೋತ್ಸವ ಪ್ರಯುಕ್ತ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಹಾಗೂ ವಿಶ್ವಸ್ಥ ಸಮಿತಿಯ ವತಿಯಿಂದ ಮಂಗಳವಾರ ಹಮ್ಮಿಕೊಂಡಿದ್ದ ಉದ್ಯೋಗ ಮೇಳದ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಶ್ರಮಿಕರ ಪರವಾಗಿ ಹೋರಾಟ ಮಾಡಿದ ಬಸವಣ್ಣ ಹಾಗೂ ಶ್ರಮಿಕರನ್ನು ಸುಖವಾಗಿರಿಸಿದ ಅಂಬೇಡ್ಕರ್ ಅವರು ಈ ದೇಶದ ದೊಡ್ಡ ಸಾಮಾಜಿಕ ಶಕ್ತಿಗಳು

ಎಂದರು. ಸಿಕ್ಕ ಕೆಲಸವನ್ನು ಅತ್ಯಂತ ಶ್ರೆದ್ದೆಯಿಂದ ಮಾಡಿರಿ. ಉದ್ಯೋಗದಿಂದ ಭವ್ಯವಾದ ಬದುಕು ರೂಪಿಸಿಕೊಳ್ಳುವ ಸಾಧ್ಯ. ಕೆಲಸದಲ್ಲಿ ಯಶಸ್ಸು ಸಾಧಿಸಲು ಪ್ರಯತ್ನ ಮಾಡಿ. ಅದು ನಿಮ್ಮನ್ನು ಗುರುತಿಸುವಿಕೆ ರೂಪಿಸುತ್ತದೆ ಎಂದರು. ಬಿಡಿಪಿಸಿ ಅಧ್ಯಕ್ಷರಾದ ಅನಿಲಕುಮಾರ ರಗಟೆ ಅಧ್ಯಕ್ಷತೆ ವಹಿಸಿ ಮಾತನಾಡಿ, ಸ್ಪರ್ಧಾತ್ಮಕ ಜಗತ್ತಿನಲ್ಲಿ ಕೌಶಲ್ಯದಿಂದ ಕೂಡಿದ ಉದ್ಯೋಗಕ್ಕೆ ಹೆಚ್ಚು ಮಹತ್ವವಿದೆ. ಉದ್ಯೋಗದಿಂದ ವೈಯಕ್ತಿಕ ಮತ್ತು ಸಾಮಾಜಿಕ ಜೀವನ ಸುಧಾರಣೆ–ಯಾಗುತ್ತದೆ. ಆರ್ಥಿಕ ಸ್ವಾವಲಂಬನೆಗೆ ದಾರಿಯಾಗಿದೆ ಎಂದರು.

ವ್ಯಾಲೀ ಕಂಪನಿಯ ಸಿಇಓ ನಿಲೇಶ ನಿತ್ನಾವರೆ ಉದ್ಯೋಗ ಮೇಳದ ವಿವರ ನೀಡಿದರು. ಬಿಡಿಪಿಸಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಕುರಕೋಟೆ, ಕೋಶಾಧ್ಯಕ್ಷರಾದ ಜಗನ್ನಾಥ ಖೂಬಾ, ಕಾರ್ಯದರ್ಶಿಗಳಾದ ಅಶೋಕ ನಾಗರಾಳೆ , ಸಹ ಕಾರ್ಯದರ್ಶಿ ಸುನೀಲ ರಾಯವಾಡೆ, ಬಸವರಾಜ ಬಾಲಕಿಲೆ, ನಿರ್ದೇಶಕರಾದ ಬಸವರಾಜ ಕೋರಕೆ, ಈರಣ್ಣಾ ಹಲಶೆಟ್ಟೆ, ಭದ್ರಿನಾಥ ಪಾಟೀಲ , ವಿವೇಕಾನಂದ ಹೊದಲೂರೆ ಬಸವರಾಜ ತೊಂಡಾರೆ, ಮಲ್ಲಿಕಾರ್ಜುನ ಚಿರಡೆ ಸುನೀಲಕುಮಾರ ಹೊಳಕುಂದೆ, ರಾಜಕುಮಾರ ಹೊಳಕುಂದೆ, ಪುಷ್ಪಾವತಿ ಮಾಮಾ, ಬಿಡಿವಿಸಿ ಬಿಡಿವಿಸಿ ಉಪಾಧ್ಯಕ್ಷ ಡಾ. ಜಿ.ಎಸ್ ಭೂರಳೆ, ಕಾರ್ಯದರ್ಶಿ ನಾಗಯ್ಯಾ ಸ್ವಾಮಿ, ಶಿವರಾಜ ಶಾಶೆಟ್ಟಿ , ಬಸವರಾಜ ಪಾಟೀಲ, ಸೋಮಶೇಖರಯ್ಯಾ ವಸ್ತ್ರದ, ಮಲ್ಲಿನಾಥ ಮಂಠಾಳೆ ಉದ್ಯೋಗ ಮೇಳದ ಸಹ ಸಂಯೋಜಕ ಸಂದೀಪ್ ಪಾಟೀಲ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ದೇಶದ ವಿವಿಧ ಕಂಪನಿಗಳಾದ ವ್ಯಾಲಿ, ಫೆಲಿಕ್ಸ್, ಅಂಬರ್, ಕಲ್ಯಾಣಿ, ಧನಂಜಯ, ಸಂಜೀವ, ರೇವೆಂಟ್, ರಾಧೇಯಾ ಗ್ರೂಪ್ಸ್, ಫಿನಾಬೆಲ್, ಕ್ರೋಮ್‌ವೆಲ್ ಮೊದಲಾದ ಸಂಸ್ಥೆಗಳಿಗೆ ಅಭ್ಯರ್ಥಿಗಳು ಆಯ್ಕೆಯಾದರು. ಆಕಾಶ ಖಂಡಾಳೆ ಪ್ರಾಸ್ತಾವಿಕ. ಪ್ರಾಚಾರ್ಯರಾದ ಜ್ಞಾನರೆಡ್ಡಿ ಬೋಳಿಂಗೆ ಸ್ವಾಗತಿಸಿದರು. ಜಗನ್ನಾಥ ಖ್ಯಾಡೆ ನಿರೂಪಿಸಿದರು. ರಾಜಕುಮಾರ ನಾಗರಾಳೆ ವಂದಿಸಿದರು.

# ವಿಶ್ವಹಿಂದೂ ಪರಿಷತ್, ಬಜರಂಗದಳದಿಂದ ಅಂಬೇಡ್ಕರ್ ಜಯಂತಿ



• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಪಟ್ಟಣದ ಅಂಬೇಡ್ಕರ ವೃತ್ತದ ಡಾ।ಬಿ.ಆರ್.ಅಂಬೇಡ್ಕರ್ ಪುಥಳಿಯ ಹತ್ತಿರ ಮಂಗಳವಾರ ವಿಶ್ವಹಿಂದೂ ಪರಿಷತ್ ಹಾಗು ಬಜರಂಗದಳದ ವತಿಯಿಂದ ಸಂವಿಧಾನ ಶಿಲ್ಪಿ ಡಾ। ಬಿ.ಆರ್.ಅಂಬೇಡ್ಕರ್ ರವರ 135ನೇ ಜಯಂತಿ ಮಹೋತ್ಸ ಆಚರಿಸಲಾಯಿತು. ಎಲ್ಲಾ ಸದಸ್ಯರಿಂದ ಬಾಬಾಸಾಹೆಬ್ ಅಂಬೇಡ್ಕರ್ ರವರ ಪುಥಳಿಗೆ ಪೂಜೆ ಸಲ್ಲಿಸಿ ಮಾಲಾರ್ಪಣೆ ಮಾಡಲಾಯಿತು. ಈ ಸಂದರ್ಭದಲ್ಲಿ ಪ್ರಮುಖರಾದ ವಿಶ್ವಹಿಂದೂ ಪರಿಷತ್ ಕೇಂದ್ರ ಟ್ರಸ್ಟಿ ಜಯಕಿಶನ ಬಿಯಾಣಿ, ವಿಹೆಚ್‌ಪಿ ಜಿಲ್ಲಾ ಖಜಾಂಚಿ ಶ್ರೀನಾಥ ಹೆಡಾ, ವಿಹೆಚ್‌ಪಿ ತಾಲೂಕು ಅಧ್ಯಕ್ಷ ಸಚಿನ ಜಾಧವ, ಉಪಾಧ್ಯಕ್ಷ ಶೈಲೇಶ ಮಾಲಪಾಣಿ, ದೇವರಾಜಸಿಂಗ ಠಾಕೂರ, ಗೋರಕ್ಷಾ ಪ್ರಮುಖ ಅಮರ ಚವ್ಹಾಣ, ಬಜರಂಗದಳ ನಗರ ಸಂಯೋಜಕ ರಾಹುಲ ವಾಡೇಕರ, ಕೃಷ್ಣಕಾಂತ ಬಿರಾದಾರ, ಆಕಾಶ ಮೈಲಾರೆ, ಬಳಿಪಾರ ಪವಾರ ಉಪಸ್ಥಿತರಿದ್ದರು.

# ಡಾ. ಅಂಬೇಡ್ಕರ್ ಜನ್ಮ ದಿನಾಚರಣೆ , ಗಣ್ಯರಿಂದ ಮಾಲಾರ್ಪಣೆ

**ಮಲ್ಲಮ್ಮ ನುಡಿ ವಾರ್ತೆ ಬೀದರ:**



ಭಾರತದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರು ಸಂವಿಧಾನ ರಚನಾ ಸಭೆಯ ಕರಡು ಸಮಿತಿಯ ಅಧ್ಯಕ್ಷರಾಗಿ, ದೇಶದ ಸರ್ವತೋಮುಖ ಅಭಿವೃದ್ಧಿಗೆ ಬುನಾದಿಯಾದ ಸಮಾನತೆ, ಸ್ವಾತಂತ್ರ್ಯ ಮತ್ತು ನ್ಯಾಯದ ಮೌಲ್ಯಗಳನ್ನು ಸಂವಿಧಾನದಲ್ಲಿ ಅಚ್ಚಳಿಯದಂತೆ ಮೂಡಿಸಿದರು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿನುಡಿ ವರಾದ ಈಶ್ವರ ಬಿ.ಖಂಡ್ರೆ ತಿಳಿಸಿದರು.

ಅವರು ಮಂಗಳವಾರ ಜಿಲ್ಲಾ ಡಳಿತ, ಜಿಲ್ಲಾ ಪಂಚಾಯತ, ಮಹಾನಗರ ಪಾಲಿಕೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಬೀದರ ಇವರುಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ ಭಾರತರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ನಿಮಿತ್ಯ ಮಾನವತಾವಾದಿ ಅಂಬೇಡ್ಕರ್ ವೃತ್ತದಲ್ಲಿರುವ ಅವರ ಪುತ್ತಳಿಗೆ ಪುಶ್ಪನಮನ ಸಲ್ಲಿಸಿ ನಂತರ ಮೆರವಣಿಗೆಗೆ ಚಾಲನೆ ನೀಡಿ ಮಾತನಾಡಿದರು.

ಅವರ ದೂರದೃಷ್ಠಿ ಮತ್ತು ಬದ್ಧತೆಯ ಫಲವಾಗಿ ನಮ್ಮ ಸಂವಿಧಾನವು ಪ್ರತಿಯೊಬ್ಬ ನಾಗರಿಕರಿಗೂ ಹಕ್ಕುಗಳ ಮತ್ತು ಗೌರವಯುತ ಜೀವನದ ಭರವಸೆ ನೀಡುತ್ತಿದೆ. ಶೋಷಿತರ ಹಾಗೂ ಹಿಂದುಳಿದವರ ಹಕ್ಕುಗಳಿಗಾಗಿ ಅವರು ನಡೆಸಿದ ಹೋರಾಟವು ಸದಾ ಪ್ರೇರಣೆಯಾಗಿ ಉಳಿದಿದೆ. ಅವರ ಆದರ್ಶಗಳು ಮತ್ತು ಸಂವಿಧಾನದ ಮೌಲ್ಯಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೆಂಡು ಸಮಾನತೆ ಮತ್ತು ನ್ಯಾಯಯುತ ಸಮಾಜ ನಿರ್ಮಾಣದ ದಿಸೆಯಲ್ಲಿ ನಾವೆಲ್ಲರೂ ಕೈಜೋಡಿಸೋಣ ಎಂದರು.

ಪೌರಾಡಳಿತ ಹಾಗೂ ಹಜ್ ಸಚಿವರಾದ ರಹೀಂ ಖಾನ್ ಅವರು ಮಾತನಾಡಿ, ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಆದರ್ಶಗಳು ನಮ್ಮ ಸಮಾಜಕ್ಕೆ ದಾರಿದೀಪವಾಗಿದ್ದು, ಸಮಾನತೆ ನ್ಯಾಯ ಮತ್ತು ಸ್ವಾಭಿಮಾನಕ್ಕಾಗಿ ಅವರು ನೀಡಿದ ಮಹತ್ವದ ಸಮದೇಶಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಬೀದರ ದಕ್ಷಿಣ ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ ಅವರು ಮಾತನಾಡಿ, ಭಾರತದ ಮಹಾನ ಚಿಂತಕ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ ಅವರ ಜಯಂತಿಯನ್ನು ಆಚರಿಸುತ್ತಿರುವುದು ನಮ್ಮೆಲ್ಲರಿಗೂ ಹೆಮ್ಮೆಯ ವಿಷಯವಾಗಿದೆ. ಡಾ.ಅಂಬೇಡ್ಕರ್ ಅವರು ಕೇವಲ ವ್ಯಕ್ತಿಯಲ್ಲ ಒಂದು ಚಿಂತನೆ ಕ್ರಾಂತಿ ಅವರು ನೀಡಿದ ಸಮಾನತೆ, ನ್ಯಾಯ ಮತ್ತು ಸ್ವಾಭಿಮಾನದ ಸಂದೇಶಗಳು ನಮ್ಮ ಸಮಾಜಕ್ಕೆ ದಾರಿದೀಪವಾಗಿದೆ. ಶೋಷಿತರು, ಹಿಂದುಳಿದವರು ಮತ್ತು ಬಡವರ ಹಕ್ಕಿಗಾಗಿ ಅವರು ನಡೆಸಿದ ಹೋರಾಟ ನಮ್ಮೆಲರಿಗೆ ಪ್ರೇರಣೆ ಅವರು ಸದಾ ಶಿಕ್ಷಣವೇ ಶಕ್ತಿ ಎಂದು ಸಾರಿದರು. ಸಮಾಜದ ಅಭಿವೃದ್ಧಿಗೆ ಶಿಕ್ಷಣವೇ ಪ್ರಮುಖ ಸಾಧನೆ, ಪ್ರತಿಯೊಬ್ಬರು ವಿದ್ಯಾಭ್ಯಾಸಕ್ಕೆ ಆದ್ಯತೆ ನೀಡಬೇಕು. ಅವರ ಮಹಾನ ತತ್ವಗಳನ್ನು ನಾವು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳೋಣ ಎಂದರು.

ಇದೇ ಸಂದರ್ಭದಲ್ಲಿ ಅರಣ್ಯ, ಜೀವಿಶಾಸ್ತ್ರ, ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರು ಧಮ್ಮ, ಸಂಸ್ಕೃತಿ ಮತ್ತು ಶಿಕ್ಷಣ ಜಾಗೃತಿ ವೇದಿಕೆ ಬೀದರ ವತಿಯಿಂದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ ಜೀವನ ಚರಿತ್ರೆ ಭಾವಚಿತ್ರ ಪ್ರದರ್ಶನ ಮಳಿಗೆ ಉದ್ಘಾಟಿಸಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಗಿರೀಶ ಬದೋಲೆ, ಮಹಾನಗರ ಪಾಲಿಕೆಯ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಮಹಾನಗರ ಪಾಲಿಕೆಯ ಅಧ್ಯಕ್ಷ ಎಂ.ಡಿ.ಗೌಸ್, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿಯ ಅಧ್ಯಕ್ಷ ಅಮೃತರಾವ ಚಿಮಕೋಡೆ, ಮಾಜಿ ಸಚಿವರಾದ ಬಂಡೆಪ್ಪಾ ಖಾಶಂಪೂರ, ವಿಧಾನ ಪರಿಷತ್ ಸದಸ್ಯ ಅರವಿಂದಕುಮಾರ ಅರಳಿ, ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಯೋಗೇಶ, ಮುಖಂಡರಾದ ಸೂರ್ಯಕಾಂತ ನಾಗಮಾರಪಳ್ಳಿ, ಈಶ್ವರಸಿಂಗ ಠಾಕೂರ, ವಿಜಯಕುಮಾರ ಸೋನಾರೆ, ಮಾರುತಿ ಬೌಧೆ, ಅನೀಲ ಬೆಲ್ದಾರ, ಸಂಜಯ ಜಾಗಿರದಾರ, ವಿನೋದ ಅಪ್ಪೆ, ಪೃಥ್ವಿರಾಜ್, ಮಹೇಶ ಗೋರನಾಳಕರ್,

ಪಂಡಿತರಾವ ಚೇದ್ರಿ, ಸಿದ್ದರಾಮಯ್ಯ ಸ್ವಾಮಿ, ಬಾಬು ಪಾಸ್ವಾನ, ಶ್ರೀಪತರಾವ ದಿನೆ, ಶಿವಕುಮಾರ ನೀಲಕಟ್ಟಿ, ವಿನಯಕುಮಾರ ಮಾಳಗೆ, ರಾಜಕುಮಾರ ವಾಘಮೊರೆ, ಅಭಿ ಕಾಳೆ, ರಾಜಕುಮಾರ ಬನ್ನೂರ, ಡಾ.ಕಾಶಿನಾಥ ಬೆಲ್ದೆ ಸೇರಿದಂತೆ ವಿವಿಧ ಸಂಘ ಸಂಸ್ಥೆ ಪದಾಧಿಕಾರಿಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಅಂಬಿಗರ ಚೌಡಯ್ಯ ಯುವ ಸೇನೆಯಿಂದ ಅಂಬೇಡ್ಕರ್ ಜಯಂತಿ ಆಚರಣೆ



**ಮಲ್ಲಮ್ಮ ನುಡಿ ವಾರ್ತೆ ಬೀದರ್**

ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜೀವನವೇ ಸಮಾಜ ಪರಿವರ್ತನೆಗೆ ದಾರಿ ದೀಪವಾಗಿದೆ ಎಂದು ಸಾಹಿತಿ ಡಾ.ರಾಮಚಂದ್ರ ಗಣಾಪೂರ್ ಅವರು ಹೇಳಿದರು.

ನಗರದ ಅಂಬಿಗರ ಚೌಡಯ್ಯ ಯುವ ಸೇನೆಯ ಕೇಂದ್ರ ಕಛೇರಿಯಲ್ಲಿ ಮಂಗಳವಾರ ಬೆಳಿಗ್ಗೆ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಸಿಹಿ ತಿನಿಸುವುದರ ಮೂಲಕ ಆಚರಿಸಿದರು.

ಅಂಬೇಡ್ಕರ್ ಅವರು ಶಿಕ್ಷಣದ ಮೂಲಕ ಹಿಂದುಳಿದ ವರ್ಗಗಳಿಗೆ ಆತ್ಮವಿಶ್ವಾಸ ಮೂಡಿಸಿ, ಸಮಾನತೆ ಮತ್ತು ನ್ಯಾಯದ ಮೌಲ್ಯಗಳನ್ನು ಸ್ಥಾಪಿಸಿದರು. ಅವರು ನೀಡಿದ ಶಿಕ್ಷಣ ಪಡೆದುಕೊಳ್ಳಿ, ಸಂಘಟಿತರಾಗಿ, ಹೋರಾಟ ಮಾಡಿ ಎಂಬ ಸಂದೇಶ ಇಂದಿನ ಯುವಜನತೆಗೆ ಅತ್ಯಂತ ಪ್ರಸ್ತುತವಾಗಿದೆ ಎಂದು ತಿಳಿಸಿದರು.

ಪತ್ರಕರ್ತ ಎಂ.ಪಿ.ಮುದಾಳೆ ಮಾತನಾಡಿ, ಅಂಬೇಡ್ಕರ್ ಅವರು ಅನುಭವಿಸಿದ ಕಷ್ಟಗಳು ಮತ್ತು ಹೋರಾಟಗಳು ಇಂದಿನ ಸಮಾಜಕ್ಕೆ ದೊಡ್ಡ ಪಾಠವಾಗಿವೆ. ಸಮಾಜದಲ್ಲಿ ಅಸಮಾನತೆ ನಿವಾರಣೆಗೆ ಪ್ರತಿಯೊಬ್ಬರೂ ಅವರ ಆದರ್ಶಗಳನ್ನು ಅನುಸರಿಸಬೇಕು. ಶಿಕ್ಷಣವೇ ವ್ಯಕ್ತಿಯ ಜೀವನವನ್ನು ಬದಲಾಯಿಸುವ ಶಕ್ತಿಯಾಗಿದೆ ಎಂಬುದನ್ನು ಅಂಬೇಡ್ಕರ್ ತಮ್ಮ ಜೀವನದ ಮೂಲಕ ತೋರಿಸಿದ್ದಾರೆ ಎಂದು ಅವರು ಅಭಿಪ್ರಾಯಪಟ್ಟರು.

ಅಂಬಿಗರ ಚೌಡಯ್ಯ ಯುವ ಸೇನೆಯ ಸಂಸ್ಥಾಪಕ ಅಧ್ಯಕ್ಷರಾದ ಸುನೀಲ ಭಾವಿಕಟ್ಟಿ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವಗಳು ಸಮಾಜದ ಅಭಿವೃದ್ಧಿಗೆ ಮಾರ್ಗದರ್ಶಕವಾಗಿವೆ. ಶಿಕ್ಷಣ, ಸಂಘಟನೆ ಮತ್ತು ಹೋರಾಟ ಎಂಬ ಅವರ ಸಂದೇಶ ಇಂದಿನ ಯುವಕರಿಗೆ ಪ್ರೇರಣೆಯಾಗಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಮುಖರಾದ ಬಾಬುರಾವ ಕುಂಬಾರ, ಸಂಜೀವಕುಮಾರ್ ಸಿರ್ಸೆ, ಪಂಢರಿ ನೇಳಗೆ, ಶರಣಬಸವ ಕೆ, ನಾಗಪ್ಪ ಉಪ್ಪೆ, ಚಂದ್ರಕಾಂತ ಹಳ್ಳಿಖೇಡಕರ್, ಸಂತೋಷ ಹೊನ್ನಡಿ, ಕಾಮಶೆಟ್ಟಿ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಆದ್ದೂರಿ ನಡೆದ ಅಂಬೇಡ್ಕರ್ ಅವರ ಭಾವಚಿತ್ರದ ಮೆರವಣಿಗೆ



- **ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ**

ಹುಮ್ನಾಬಾದ್ ಬಸ್ ಘಟಕದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮವನ್ನು ಹುಮನಾಬಾದ ಘಟಕದ ವ್ಯವಸ್ಥಾಪಕ ರವೀಂದ್ರ ಕುಮಾರ್ ಹಾಗೂ ಸಂಚಾರ ನಿರೀಕ್ಷಕ ಹನುಮಂತಪ್ಪ ಛಲವಾದಿ ರವರ ಅಧ್ಯಕ್ಷತೆಯಲ್ಲಿ ಜರುಗಿತು.

ಹಾಗೂ ಪ್ರತಿ ವರ್ಷವೂ ಕೂಡ ಬಸ್ಸಿಗೆ ಹೂವಿನಿಂದ ಅಲಂಕಾರದೊಂದಿಗೆ ಅಂಬೇಡ್ಕರ್ ರವರ ಭಾವ ಚಿತ್ರದ ಮೆರವಣಿಗೆಯನ್ನು ಪಟ್ಟಣದ ಬಸ್ ಡಿಪೋದಿಂದ ಅಂಬೇಡ್ಕರ್ ವೃತ್ತದವರೆಗೆ ಬಸ್ಸಿನ ಚಾಲಕರು,

ನಿರ್ವಾಹಕರು ಹಾಗೂ ತಾಂತ್ರಿಕ ಸಿಬ್ಬಂದಿಗಳು ಹೆಜ್ಜೆಗಳನ್ನು ಹಾಕುವ ಮೂಲಕ ಕುಣ್ಣಿದು ಕುಪ್ಪಳಿಸಿ ಸಂಭ್ರಮಿಸಿದರು. ತದನಂತರ ಅಂಬೇಡ್ಕರ್ ಪುತ್ಥಳಿಗೆ ಮರ್ಲಾಪಣೆ ಮಾಡಿ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಕೈಲಾಸ್ ಮೇಟಿ, ಪ್ರಕಾಶ ಅಂಬುಲಗಿ, ರಾಜಕುಮಾರ್ ವರ್ಮಾ, ದಶರಥ ಹೊಸಳ್ಳಿ, ಕಲ್ಲಪ್ಪ ನವಲಿ, ಅನಿಲ್ ಕಲ್ಲೂರ್ ರಾಜಪ್ಪ ಪದ ಶೆಟ್ಟಿ,, ಸಂಜೀವ್ ಕುಮಾರ್ ರೆಡ್ಡಿ, ರಮೇಶ್ ಕಲ್ಲೂರ್ , ಸಂಜೀವ್ ಕುಮಾರ್ ಧುಮ್ಮನಸೂರ, ರಮೇಶ್ ಶಿಂಧೆ ಉಮಾಕಾಂತ್,

ಸಂಜು ರೆಡ್ಡಿ, ಸಂತೋಷ್ ಸಾಗರ್ ಗುಂಡಪ್ಪ ಬೆನಚಿಂಚೋಳಿ ರಾಘು ಬೆನಚಿಂಚೋಳಿ, ರಾಮು ಪೂಜಾರಿ, ಅಂಕುಶ್ ರಾಜೋಳ, ಜಲೆಂದರ್ ಉಪಸ್ಥಿತರಿದ್ದರು.

# ಸಮಾನತೆಯ ಬದುಕು ನೀಡಿದ ಮಹಾನ್ ಮಾನವತಾವಾದಿ ಅಂಬೇಡ್ಕರ್: ಪಾಟೀಲ

**ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:**

ಸ್ವಾತಂತ್ರ್ಯ ಪೂರ್ವ ಭಾರತದಲ್ಲಿ ಮನುಷ್ಯರನ್ನು ಮನುಷ್ಯರನ್ನಾಗಿ ನೋಡದೆ ಜಾತಿಯತೆ, ಅಸ್ಪೃಶ್ಯತೆ, ಮೂಢನಂಬಿಕೆ ಬೇರೂರಿತು. ಇಡೀ ದೇಶ ಒಪ್ಪುವಂತಹ ಸಂವಿಧಾನ ಬರೆದು ಸರ್ವರಿಗೂ ಸಮಾನತೆಯ ಬದುಕು ನೀಡಿದ ಮಹಾನ್ ಮಾನವತಾವಾದಿ ಅಂಬೇಡ್ಕರ್ ಅವರಾಗಿದ್ದಾರೆ ಎಂದು ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಹೇಳಿದರು.

ಮಂಗಳವಾರ ಕಲಬುರಗಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ರವರ 135ನೇ ಜಯಂತ್ಯೋತ್ಸವ ಅಂಗವಾಗಿ ನಗರದ ಜಗತ್ ಸರ್ಕಲ್ ಹತ್ತಿರದ ಡಾ. ಬಿ. ಆರ್. ಅಂಬೇಡ್ಕರ್ ಜಯಂತಿ ವೇದಿಕೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಹನ್ನೆರಡನೇ ಶತಮಾನದಲ್ಲಿಯೇ ಅಣ್ಣ ಬಸವಣ್ಣನವರು ಅಲ್ಲಮಪ್ರಭು ಅವರ ಮುಂದಾಳತ್ವದಲ್ಲಿ ಸಮಾಜದಲ್ಲಿನ ಜಾತೀಯತೆ, ಅಸಾಮಾನತೆ, ಲಿಂಗ ತಾರತಮ್ಯ ಹೋಗಲಾಡಿಸಲು ಶ್ರಮಿಸಿದರಾದರು ಅದೂ ಪೂರ್ಣ ಪ್ರಮಾಣದಲ್ಲಿ ಹೋಗಲಾಡಿಸಲು ಸಾಧ್ಯವಾಗಿರಲಿಲ್ಲ. ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಇದನ್ನೆಲ್ಲವನ್ನು ಹೋಗಲಾಡಿಸಲು ಪ್ರಯತ್ನ ಪಟ್ಟವರು. ದೇಶದ ಪ್ರತಿ ಪ್ರಜೆ ಗೌರವ ಮತ್ತು ಸ್ವಾಭಿಮಾನದಿಂದ ಬದುಕಬೇಕು. ಸಮ ಸಮಾಜ ನಿರ್ಮಾಣ ಮಾಡಬೇಕು ಎಂಬುದು ಅವರ ಮಹಾದಾಸೆಯಾಗಿತ್ತು ಎಂದರು. ಸಂವಿಧಾನದಲ್ಲಿ ಬಡವ-ಶ್ರೀಮಂತ ಎನ್ನದೆ ದೇಶದ ಪ್ರತಿ ವ್ಯಕ್ತಿಗೆ ಒಂದೇ ಮತದ ಹಕ್ಕು ನೀಡಲಾಗಿದೆ. ಲಿಂಗ, ಜಾತಿ, ಧರ್ಮ, ಬಾಷೆ ಆಧಾರಿತ ತಾರತಮ್ಯ ಮಾಡುವಂತಿಲ್ಲ. ಇದು ಪ್ರಜಾಪ್ರಭುತ್ವದ ವೈಶಿಷ್ಟ್ಯ. ತಂದೆ, ಪತ್ನಿ, ಕೊನೆಗೆ ಮಕ್ಕಳನ್ನು ಕಳೆದುಕೊಂಡರು ಅಂಬೇಡ್ಕರವರು ಈ ದೇಶದ ದೀನ ದಲಿತರ, ಬಡವರ, ಅಲ್ಪಸಂಖ್ಯಾತರ, ದಮನಿತರಿಗೆ ನ್ಯಾಯ ಕಲ್ಪಿಸಲು ಜೀವನ ಪರ್ಯಂತ ಹೋರಾಡಿದ ಮಹಾನ್ ಹೋರಾಟಗಾರ ಎಂದು ಬಣ್ಣಿಸಿದರು. ಡಿ.ಜೆ. ಸೌಂಡ್ ನಂತೆ ಶಿಕ್ಷಣದಲ್ಲಿ ಸೌಂಡ್ ಮಾಡಿ: ಕಲಬುರಗಿ ಮಹಾನಗರ ಪಾಲಿಕೆಯ ಮೇಯರ್ ವರ್ಷಾ ರಾಜೀವ ಜಾನೆ ಮಾತನಾಡಿ, ಅಂಬೇಡ್ಕರ ಕೊಟ್ಟ ಸಮಾನತೆಯ ಭಿಕ್ಷೆಯಿಂದ ಇಂದು ನಿಮ್ಮೆದರು ಕಲಬುರಗಿ ನಗರದ ಪ್ರಥಮ ಪ್ರಜೆ-ಯಾಗಿ ನಿಂತಿರುವೆ. ಸಂವಿಧಾನ ಶಿಲ್ಪಿ ಕಂಡ ಕನಸು ನನಸಾಗಬೇಕಾದರೆ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ, ಒಳ್ಳೆಯ ನೌಕರಿ ಪಡೆದು ಸ್ವಾಭಿಮಾನದಿಂದ ಬದುಕಬೇಕು ಎಂದರಲ್ಲದೆ ಜಯಂತ್ಯೋತ್ಸವ ಸಂದರ್ಭದಲ್ಲಿ ಎಲ್ಲೆಡೆ ಡಿ.ಜೆ.ಸೌಂಡ್ ಕೇಳತ್ತೇವೆ. ಆದರೆ ಈ ಸೌಂಡ್ ಶಿಕ್ಷಣ ಪಡೆಯುವಲ್ಲಿ ಇರಲಿ ಎಂದು ಮಾರ್ಮಿಕವಾಗಿ ನುಡಿದರು. ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಮಾತನಾಡಿ, ಅಂಬೇಡ್ಕರ್ ಅವರು ಸುಮಾರು 60 ವಿಷಯಗಳ ಮೇಲೆ ಪಾಂಡಿತ್ಯ ಪಡೆದ ಮಹಾನ್ ಜ್ಞಾನಿಯಾಗಿದ್ದರು. ಆರ್.ಬಿ.ಐ ಸ್ಥಾಪನೆಗೆ ಕಾರಣೀಕರ್ತರು ಆಗಿರುವ ಅಂಬೇಡ್ಕರ್ ಮಹಿಳಾ ಸಬಲೀಕರಣಕ್ಕೆ ದುಡಿದಿದ್ದಾರೆ. ಶಿಕ್ಷಣ, ಸಂವಿಧಾನ ಪರಿಣಾಮ ನಾನು ನಿಮ್ಮುಂದೆ ಡಿ.ಸಿ.ಯಾಗಿ ಮಾತನಾಡುತ್ತಿರುವೆ ಎಂದರು.



ಕಾಳಗಿ ತಾಲೂಕಿನ ಕೋಡ್ಲಿ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಪ್ರಾಚಾರ್ಯರಾದ ಡಾ. ರಾಜಶೇಖರ ಮಾಂಗ್ ಅವರು ಉಪನ್ಯಾಸ ನೀಡಿ, ಹಣೆಬರಹ ನಂಬದೆ ಹಣೆಯ ಬೆವರನ್ನು ನಂಬಬೇಕು. ಕಷ್ಟಪಟ್ಟು ದುಡಿದಲ್ಲಿ ಫಲ ಇದ್ದೆ ಇರಲಿದೆ. ಜಯಂತಿಯ ನೆಪದಲ್ಲಿ ಡ್ರಿಂಕ್, ಡ್ಯಾನ್ಸ್, ಡಿ.ಜೆ ಬಿಟ್ಟು ಯುವ ಸಮೂಹ ಹೊರಬರಬೇಕಿದೆ. ಬದುಕಿನಲ್ಲಿ ಬದಲಾಗಬೇಕಾದರೆ ಉನ್ನತ ಶಿಕ್ಷಣ ಪಡೆಯುವುದು ನಮ್ಮ ಮೂಲ ಮಂತ್ರವಾಗಬೇಕು.

ನಾವು ಎಲ್ಲಿಂದ ಬಂದಿದ್ದೇವೇ ಎಂಬುದನ್ನು ಮರೆಯದೆ ಸಮಾಜಕ್ಕೆ ನಾವು ಚಿರಋಣಿಯಾಗಿರಬೇಕು ಎಂದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ, ದ್ವಿತೀಯ ಪಿ.ಯು.ಸಿ ಯಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಭೀಮನಗರ ಬುದ್ದ ವಿಹಾರದ ಭಂತೆ ವರಜ್ಯೋತಿ ಅವರ ಸಾನಿಧ್ಯದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ, ಎಸ್.ಪಿ. ಅಡ್ಡೂರು ಶ್ರೀನಿವಾಸಲು, ಜಿಲ್ಲಾ ಪಂಚಾಯತ್ ಸಿ.ಇ.ಓ ಭಂವರ್ ಸಿಂಗ್ ಮೀನಾ, ಹನಾಗರ ಪಾಲಿಕೆಯ ಆಯುಕ್ತ ಅವಿನಾಶ ಶಿಂಧೆ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕಿ ಪ್ರೀತಿ ದೊಡ್ಮನಿ, ಡಿ.ಎಚ್.ಓ ಡಾ.ಶರಣಬಸಪ್ಪ ಕ್ಯಾತನಾಳ, ಕಲಬುರಗಿ ತಹಶೀಲ್ದಾರ ಆನಂದಶೀಲ, ಡಾ.ಬಿ.ಆರ್. ಅಂಬೇಡ್ಕರ್ ಜಯಂತ್ಯೋತ್ಸವ ಆಚರಣೆ ಸಮಿತಿಯ ಜಿಲ್ಲಾಧ್ಯಕ್ಷ ಅಶೋಕ ವೀರನಾಯಕ, ಕರ್ನಾಟಕ ರಾಜ್ಯ ಸರ್ಕಾರಿ-ಅರೆ ಸರ್ಕಾರಿ ಎಸ್.ಸಿ-ಎಸ್.ಟಿ ನೌಕರರ ಸಂಘದ ರಾಜ್ಯಾಧ್ಯಕ್ಷ ಮಹೇಶ ಹುಬ್ಳಿ, ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳೂಂಡಗಿ, ಡಿ.ಎಸ್.ಎಸ್. ಮುಖಂಡರಾದ ಪ್ರಕಾಶ ಮೂಲಭಾರತಿ ಸುರೇಶ ಹಾದಿಮನಿ ಸೇರಿದಂತೆ ನೂರಾರು ಸಂಖ್ಯೆಯಲ್ಲಿ ಸಾರ್ವಜನಿಕರು, ವಿವಿಧ ಸಮಾಜದ ಮುಖಂಡರು ಭಾಗವಹಿಸಿದ್ದರು. ಮಾರುತಿ ಬೇಂದ್ರ ಸ್ವಾಗತಿಸಿದರು.

ಸಹ ಶಿಕ್ಷಕ ಸಂತೋಷ್ ಕಲಕೇರಾ ಸಂವಿಧಾನ ವಾಚಿಸಿದರು. ಅಂಬೇಡ್ಕರ್ ಗೆ ಗೌರವ ನಮನ ಸಲ್ಲಿಕೆ: ವೇದಿಕೆ ಕಾರ್ಯಕ್ರಮದ ಮುನ್ನ ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್.ಪಾಟೀಲ, ಶಾಸಕ ಅಲ್ಲಮಪ್ರಭು ಪಾಟೀಲ, ಬಸವರಾಜ ಮತ್ತಿಮೂಡ, ಜಗದೇವ ಗುತ್ತೇದಾರ ಅದಿಯಾಗಿ ಎಲ್ಲಾ ಅಧಿಕಾರಿ-ಗಣ್ಯರು ಸಂವಿಧಾನ ಶಿಲ್ಪಿ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

# ಡಾ.ಬಿ.ಆರ್ ಜಯಂತಿ ಅಂಗವಾಗಿ 135 ಸಸಿಗಳ ವಿತರಣೆ,ಅನ್ನದಾನ ಕಾರ್ಯಕ್ರಮ



**ಮಲ್ಲಮ್ಮ ನುಡಿ ವಾರ್ತೆ ಬೀದರ**

ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತಿಯ ಅಂಗವಾಗಿ ಕಲ್ಯಾಣ ತರಂಗ ಕನ್ನಡ ದಿನಪತ್ರಿಕೆ ವತಿಯಿಂದ ಸಾಮಾಜಿಕ ಸೇವಾ ಕಾರ್ಯವಾಗಿ 135 ಸಸಿಗಳ ವಿತರಣೆ ಹಾಗೂ ಅನ್ನದಾನ ಕಾರ್ಯಕ್ರಮವನ್ನು ಆಯೋಜಿಸಲಾಯಿತು,

ಈ ಸಂದರ್ಭದಲ್ಲಿ ಮುಖ್ಯ ಅತಿಥಿಗಳಾಗಿ ಸೂರ್ಯಕಾಂತ ನಾಗಮಾರಪಳ್ಳಿ ಅವರು ಮಾತನಾಡಿ ಡಾ.ಅಂಬೇಡ್ಕರ್ ಅವರ ತತ್ವ ಹಾಗೂ ಆದರ್ಶಗಳು, ಸಮಾನತೆ, ಶಿಕ್ಷಣ ಹಾಗೂ ಸಾಮಾಜಿಕ ನ್ಯಾಯದ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವ ಅಗತ್ಯವನ್ನು ಒತ್ತಿಹೇಳಿದರು.

ಈ ಸಂದರ್ಭದಲ್ಲಿ ಸಮಾಜದಲ್ಲಿ ಪರಿಸರ ಸಂರಕ್ಷಣೆ ಹಾಗೂ ಮಾನವೀಯ ಮೌಲ್ಯಗಳ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಸಸಿಗಳ ವಿತರಣೆಗೆ ವಿಶೇಷ ಮಹತ್ವ ನೀಡಲಾಯಿತು. ಜೊತೆಗೆ ಅನ್ನದಾನ ವ್ಯವಸ್ಥೆ ಮಾಡಲಾಗಿದ್ದು, ಕಾರ್ಯಕ್ರಮವು ಮಾನವೀಯತೆ ಮತ್ತು ಸೇವಾಭಾವನೆಯ ಸಂಕೇತವಾಗಿ ಮೂಡಿಬಂತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಉಮೇಶ ಸ್ವಾರಳ್ಳಿಕರ್, ಬಿಂದು ಸಾರ್ (ವಾರ್ತಾ ಇಲಾಖೆ), ಈಶ್ವರ ಬಡಿಗೇರ್, ಗೋವಿಂದ ಬಡಿಗೇರ್, ಕಲ್ಲಪ್ಪ ಚಾಂಬೋಳಕರ್, ಡಾ. ಸುಬ್ಬಣ ಕರಕನಳ್ಳಿ, ಗಣಪತಿ ಸೂರ್ಯವಂಶಿ, ವಿಜಯಕುಮಾರ ಬಡಿಗೇರ್, ಬಾಬಣ್ಣ (ಜಮಗಿ ಕಾಲೋನಿ), ವಿಶಾಲ್ ಕುದುರೆ, ಅಮರ ಸಂತಪೂರೆ ಸೇರಿದಂತೆ ಅನೇಕ ಗಣ್ಯರು ಹಾಗೂ ಸಾರ್ವಜನಿಕರು ಭಾಗವಹಿಸಿದರು.


ಕರ್ನಾಟಕ ಸರ್ಕಾರ

(ಮಿನುಗಾರಿಕೆ ಇಲಾಖೆ)

ಮೀನುಗಾರಿಕೆ ಸಹಾಯಕ ನಿರ್ದೇಶಕರು ರವರ ಕಛೇರಿ ಬಸವಕಲ್ಯಾಣ.

ಸಂಖ್ಯೆ:ಮೀಸನಿಬ/ಹೊರಗುತ್ತಿಗೆ ವಾಹನ/01/2026-27ದಿನಾಂಕ:13/04/2026

## ಟೆಂಡರ ಪ್ರಕಟಣೆ

2026-27 ನೇ ಸಾಲಿನ ಮೀನುಗಾರಿಕೆ ಸಹಾಯಕ ನಿರ್ದೇಶಕರು ಬಸವಕಲ್ಯಾಣ ಕಛೇರಿಯ ಮೀನುಗಾರಿಕೆ ಇಲಾಖೆಯ ತಾಲೂಕ ಮಟ್ಟದ ಕಛೇರಿಗೆ ವಿಸ್ತೀರ್ಣಾ ಚಟುವಟಿಕೆ ಹಾಗೂ ಯೋಜನೆಗಳ ಅನುಷ್ಠಾನಕ್ಕೆ ಬಾಡಿಗೆ ವಾಹನ ನೀಡಲು ಅರ್ಹ ಟೂರ್ಸ್ ಮತ್ತು ಟ್ರಾವೆಲ್ಸ್/ ಎಜೆನ್ಸಿಯಿಂದ ದ್ವಿಲಕೋಟೆ ಮಾದರಿಯಲ್ಲಿ ಈ ಕೆಳಗಿನ ವಿವರದಂತೆ ಟೆಂಡರ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

ಟೆಂಡರನಲ್ಲಿ ಭಾಗವಹಿಸುವ ಆಸಕ್ತ ಟೆಂಡರದಾರರು ರೂ.5000/-ಗಳ ಡಿ.ಡಿ. ಯನ್ನು ತೇವಣಿ ರೂಪದಲ್ಲಿ ಕಛೇರಿ ನೀಡಿ ಟೆಂಡರ ಅರ್ಜಿ ಫಾರಂಗಳನ್ನು ದಿನಾಂಕ :13/04/2026ರಿಂದ 27/04/2026 ರಂದು ಮಧ್ಯಾಹ್ನ1:30 ಗಂಟೆ ಒಳಗಾಗಿ ಪಡೆಯಬಹುದಾಗಿದೆ. ಟೆಂಡರ ಅರ್ಜಿ ಫಾರಂಗಳನ್ನು ಮೊಹರು ಮಾಡಿದ ದ್ವಿಲಕೋಟೆಯಲ್ಲಿ ಈ ಕೆಳಗೆ ಸಹಿ ಮಾಡಿದ ಅಧಿಕಾರಿಗಳ ವಿಳಾಸಕ್ಕೆ ದಿನಾಂಕ:28/04/2026 ರಂದು ಮಧ್ಯಾಹ್ನ1:30 ಗಂಟೆಯೊಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು. ನಂತರ ಬಂದ ಟೆಂಡರ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ದಿನಾಂಕ:30/04/2026ರಂದು ಮಧ್ಯಾಹ್ನ12:30 ಗಂಟೆಗೆ ಹಾಜರಿದ್ದ ಟೆಂಡರದಾರರ ಸಮಕ್ಷದಲ್ಲಿ ಟೆಂಡರ ತೆರೆಯಲಾಗುವುದು. ಷರತ್ತು ಮತ್ತು ನಿಬಂಧನೆಗಳಿಗಾಗಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಈ ಕಛೇರಿ ಕೆಲಸದ ವೇಳೆಯಲ್ಲಿ ಸಂಪರ್ಕಿಸಲು ತಿಳಿಸಿದೆ.

ಸಹಿ/-
ಮೀನುಗಾರಿಕೆ ಸಹಾಯಕ ನಿರ್ದೇಶಕರು
ಬಸವಕಲ್ಯಾಣ.


# ಅಂಬೇಡ್ಕರ್ ದೇಶದ 140 ಕೋಟಿ ಜನತೆಯ ಅಮೂಲ್ಯ ಆಸ್ತಿ: ಚವ್ಹಾಣ

- **ಮಲ್ಲಮ್ಮ ನುಡಿ ವಾರ್ತೆ, ಔರಾದ**



ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ದೇಶದ 140 ಕೋಟಿ ಜನತೆಯ ಅಮೂಲ್ಯ ಆಸ್ತಿ. ಅವರ ಚಿಂತನೆಗಳು ಮತ್ತು ಸಾಮಾಜಿಕ ನ್ಯಾಯದ ಆದರ್ಶಗಳು ಇಂದಿಗೂ ದೇಶದ ಪ್ರಗತಿಗೆ ದಿಕ್ಕು ತೋರಿಸುತ್ತಿವೆ ಎಂದು ಮಾಜಿ ಸಚಿವರು ಹಾಗೂ ಔರಾದ(ಬಿ) ಕ್ಷೇತ್ರದ ಶಾಸಕರಾದ ಪ್ರಭು ಬಿ. ಚವ್ಹಾಣ ಅವರು ಅಭಿಪ್ರಾಯಪಟ್ಟರು.

ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯತ್ ಹಾಗೂ ಸಮಾಜ ಕಲ್ಯಾಣ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ಏಪ್ರಿಲ್ 14 ರಂದು ಔರಾದ ತಹಸೀಲ್ ಕಛೇರಿ ಆವರಣದಲ್ಲಿ ಆಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಸಂವಿಧಾನಶಿಲ್ಪಿ, ಬಾಬಾ ಸಾಹೇಬ್, ಭಾರತ ರತ್ನ, ಸಮಾನತೆಯ ಹರಿಹಾರ, ಬೋಧಿಸತ್ವ, ಯುಗಪ್ರವರ್ತಕ, ಸಾಮಾಜಿಕ ಕ್ರಾಂತಿಯ ಹರಿಕಾರ, ಬಡವರ ಧ್ವನಿ, ವಿಶ್ವದರ್ಜೆಯ ನ್ಯಾಯವಾದಿ, ಅರ್ಥಶಾಸ್ತ್ರಜ್ಞ, ತತ್ವಜ್ಞಾನಿ, ರಾಜಕಾರಣಿ ಮತ್ತು ಸಾಮಾಜ ಸುಧಾರಕ ಸೇರಿದಂತೆ ಹಲವಾರು ಬಿರುದುಗಳನ್ನು ಹೊಂದಿರುವ ಅಂಬೇಡ್ಕರ್ ಅವರು ನಮ್ಮೆಲ್ಲರ ಹೃದಯದಂತಿದ್ದು, ನಮ್ಮ ದೇಶಕ್ಕೆ ಸಿಕ್ಕ ಅಮೂಲ್ಯ ರತ್ನವಾಗಿದ್ದಾರೆ ಎಂದರು. ದಲಿತ ಕುಟುಂಬದಿಂದ ಬಂದ ಅವರು ದಲಿತರು, ಶೋಷಿತರು, ಹಿಂದುಳಿದವರ ಹಕ್ಕುಗಳಿಗಾಗಿ ಜೀವನಪೂರ್ತಿ ಹೋರಾಟ ನಡೆಸಿದ ಮಹಾನ್ ನಾಯಕರು. ಬಾಬಾ ಸಾಹೇಬರು ಮತ್ತು ಸಂವಿಧಾನ ಇರುತ್ತಿಲ್ಲವೆಂದರೆ ನಾನು ಶಾಸಕನಾಗಲು ಸಾಧ್ಯವಿರಲಿಲ್ಲ. ದೇಶದ ಸಂಪೂರ್ಣ ಆಡಳಿತ ವ್ಯವಸ್ಥೆಯು ಅಂಬೇಡ್ಕರ್ ನೀಡಿದ ಸಂವಿಧಾನದ ಮೇಲೆ ನಿಂತಿದೆ. ಸೂರ್ಯ ಚಂದ್ರರಿರುವ ವರಗೆಗೆ ಅಂಬೇಡ್ಕರ್ ಅವರ ಹೆಸರು ಅಜರಾಮರವಾಗಿ ಉಳಿಯಲಿದೆ ಎಂದು ಹೇಳಿದರು.


ದೇಶದಾದ್ಯಂತ ಎಲ್ಲ ಕಛೇರಿಗಳು ಮತ್ತು ಶಾಲಾ ಕಾಲೇಜುಗಳಲ್ಲಿ ಅಂಬೇಡ್ಕರ್ ಅವರನ್ನು ಪೂಜಿಸಿ ಗೌರವಿಸಲಾಗುತ್ತಿದೆ. ಅದ್ದೂರಿ ಜಯಂತಿ ಆಚರಿಸಲಾಗುತ್ತಿದೆ. ಪ್ರಧಾನಿ ನರೇಂದ್ರಮೋದಿಯವರು ದೇಶದಲ್ಲಿರುವ ಅಂಬೇಡ್ಕರ್ ಅವರ ಪ್ರಮುಖ ಸ್ಮಾರಕಗಳನ್ನು ಜೀರ್ಣೋದ್ದಾರಕ್ಕೆ ಮುಂದಾಗಿದ್ದಾರೆ. ಅಂಬೇಡ್ಕರರು ಶಿಕ್ಷಣ, ಸಂಘಟನೆ ಮತ್ತು ಹೋರಾಟಕ್ಕೆ ಹೆಚ್ಚಿನ ಒತ್ತು ಕೊಟ್ಟಿದ್ದರು.

# ಕಾರವಾರ ದಲ್ಲಿ: ವಿದ್ಯುತ್ ವ್ಯತ್ಯಯ.

**ಮಲ್ಲಮ್ಮ ನುಡಿ ವಾರ್ತೆ ಕಾರವಾರ**

ಉಪ-ವಿಭಾಗದ ವ್ಯಾಪ್ತಿಯಲ್ಲಿ ಹೆಚ್.ಟಿ. ವಾಹಕ ಬದಲಾವಣೆ, ಮತ್ತು ನಿರ್ವಹಣೆಯ ನಿಮ್ಮಿತ್ತ ಏ.15 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ , ಕಾರವಾರ ಟೌನ್, ಹಬ್ಬುವಾಡ, ಕೆ.ಹೆಚ್.ಬಿ. ನಂದನಗದ್ದಾ, ಸುಂಕೇರಿ, ತೆಲಂಗರೋಡ್, ಶಿರವಾಡ ಫೀಡರಿನ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಸಹಾಯಕ ಕಾರ್ಯನಿರ್ವಾಹಕ ಇಂಜನೀಯರ್(ವಿ) ರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಾ.ಬಿ.ಆರ್. ಅಂಬೇಡ್ಕರ್ ವ್ಯಕ್ತಿಯಲ್ಲ, ಜ್ಞಾನದ ಶಕ್ತಿ: ಭೀಮಾಶಂಕರ ದೊಡ್ಮನಿ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರು ಕೇವಲ ವ್ಯಕ್ತಿಯಲ್ಲ, ಜ್ಞಾನದ ಶಕ್ತಿ

ದೇಶದ ಜನರ ಆರಾಧ್ಯ ದೈವ ಎಂದು ಭಾರತಾಂಬೆ ಸಂಸ್ಥೆಯ ಮುಖ್ಯಸ್ಥ ಭೀಮಾಶಂಕರ ದೊಡ್ಮನಿ ಅವರು ಅಭಿಪ್ರಾಯಪಟ್ಟರು. ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ನಗರಸಭೆ, ಭಾರತಾಂಬೆ ಶಿಕ್ಷಣ ಮತ್ತು ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ನಗರ ವಸತಿ ರಹಿತರ ಆಶ್ರಯ ಕೇಂದ್ರದಲ್ಲಿ ನಡೆದ ಡಾ.ಬಿ.ಆರ್. ಅಂಬೇಡ್ಕರ್ ಅವರ 135 ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪುಷ್ಪಾರ್ಚನೆಗೈದು ಅವರು ಮಾತನಾಡಿದರು.

ಅಂಬೇಡ್ಕರ್ ಅವರ ಚಿಂತನೆಗಳನ್ನು ನಾವು ಗಂಭೀರವಾಗಿ ಅರ್ಥಮಾಡಿಕೊಳ್ಳಬೇಕು.

ಅವರು ಎಷ್ಟು ಬರೆದಿದ್ದಾರೆ ಎಂದರೆ, ನಮ್ಮ ಜೀವನ ಪೂರ್ತಿ ಕೂತು ಓದಿದರೂ ಅವುಗಳನ್ನು ಪೂರ್ಣಗೊಳಿಸಲು ಸಾಧ್ಯವಿಲ್ಲ ಎಂದರು. ಅವರು ಒಂದು ಜನಾಂಗಕ್ಕೆ ಸೀಮಿತವಲ್ಲ. ಎಲ್ಲಾ ಜನಾಂಗಗಳ ಹಿತ ಕಾಯ್ದ ಮಹಾನ್ ವ್ಯಕ್ತಿ. ಸಮಾನತೆಯನ್ನು ತರಲು ಜೀವನ ಪರ್ಯಂತ ಶ್ರಮಿಸಿದರು' ಎಂದು ಹೇಳಿದರು.

ನಿರಾಶ್ರಿತರ ಕೇಂದ್ರದ ವ್ಯವಸ್ಥಾಪಕ ಬೀರಲಿಂಗಪ್ಪ ಕಿಲ್ಲನಕೇರಾ ಮಾತನಾಡಿ ಅಂಬೇಡ್ಕರರನ್ನು ಮರೆತರೆ ನಮ್ಮ ಬದುಕು ಹೀನಾಯವಾಗುತ್ತದೆ, ಮಹಾನ್ ವ್ಯಕ್ತಿಯ ಜಯಂತಿ ಆಚರಿಸುವ ಉದ್ದೇಶವೇ ಅವರ ತತ್ವಆದರ್ಶಗಳನ್ನು ಯುವ ಪೀಳಿಗೆ ಅವಳಡಿಸಿಕೊಳ್ಳಲಿ ಎಲ್ಲರೂ ರಾಷ್ಟ್ರಪ್ರಜ್ಞೆ, ಸಮಾಜಪ್ರಜ್ಞೆ, ಮೈಗೂಡಿಸಿಕೊಂಡು ಸಮಸಮಾಜ ನಿರ್ಮಾಣ ಆಗಲಿ ಎಂಬುದಾಗಿದೆ. ಜಾತೀ ತಾರತಮ್ಯಗಳ ನಿವಾರಣೆಗೆ ಕಾನೂನಿನಲ್ಲಿ ಕಠಿಣ ನಿಯಮಗಳೂ ಇದ್ದರೂ ಸಹ ಹೃದಯದಲ್ಲಿನ ನಿಯಮಗಳು ಬಹಳ ಮುಖ್ಯವಾಗಿದೆ. ನಮ್ಮ ದೇಶದಲ್ಲಿ ದಲಿತರು, ಶೂದ್ರರು ಮತ್ತು ಮಹಿಳೆಯರ ಪರವಾಗಿ ಮಾತನಾಡಿದಯಾರನ್ನೂ ಉಳಿಸಿಲ್ಲ.

ಮಹಿಳೆಯರ ಬಗ್ಗೆ ಧ್ವನಿ ಎತ್ತಿದ ಬುದ್ಧನನ್ನು ಇಲ್ಲಿಂದ ಓಡಿಸಲಾಯಿತು. ಬಸವಣ್ಣ ಅವರಿಗೂ ಇದೇ ಸ್ಥಿತಿ ಬಂತು ಎಂದು ಕಳವಳ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಕೇರ್ ಟೇಕರಗಳಾದ ದೇವಮ್ಮ, ಕೃಷ್ಣ, ಸಿದ್ರಾಮ್, ಅಮೃತ ನಿರಾಶ್ರಿತರಾದ ಪಟೇಲ್ ಸಾಬ್, ಬಾಲಪ್ಪ, ಮುನ್ನಾ, ಭುವನ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# 135ನೇ ಡಾ. ಬಿ. ಆರ್. ಅಂಬೇಡ್ಕರ್ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಪಟ್ಟಣದ ಅಂಬೇಡ್ಕರ್ ಭವನದ ಆವರಣದಲ್ಲಿ 135ನೇ ಅಂಬೇಡ್ಕರ್ ಜಯಂತಿಯನ್ನು ಅತ್ಯಂತ ಭಕ್ತಿಭಾವ ಹಾಗೂ ಸಂಭ್ರಮದಿಂದ ಆಚರಿಸಲಾಯಿತು. ಸರ್ಕಾರದ ವಿವಿಧ ಇಲಾಖೆ ಹಾಗೂ ಸ್ಥಳೀಯ ಸಂಘಟನೆಗಳ ಸಹಭಾಗಿತ್ವದಲ್ಲಿ ನಡೆದ ಕಾರ್ಯಕ್ರಮವು ಗಣನೀಯ ಸಂಖ್ಯೆಯ ಸಾರ್ವಜನಿಕರ ಗಮನ ಸೆಳೆದಿತು.

ತಹಸೀಲ್ದಾರ್ ಕಚೇರಿ, ಪುರಸಭೆ, ತಾಲೂಕು ಪಂಚಾಯತ್, ಪೊಲೀಸ್ ಇಲಾಖೆ, ಪಶು ಚಿಕಿತ್ಸಾ ಇಲಾಖೆ, ಆರೋಗ್ಯ ಇಲಾಖೆ, ಅರಣ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಸೇರಿದಂತೆ ಹಲವು ಸರ್ಕಾರಿ ಇಲಾಖೆ ಹಾಗೂ ರಾಜಕೀಯ ಮುಖಂಡರು, ವಿವಿಧ ಸಂಘಟನೆಗಳ ಪ್ರತಿನಿಧಿಗಳು, ಕಾರ್ಯಕ್ರಮದಲ್ಲಿ ಸಕ್ರಿಯವಾಗಿ ಮಂಗಳವಾರ ಭಾಗವಹಿಸಿದರು.

ಕಾರ್ಯಕ್ರಮದ ಅಂಗವಾಗಿ ಭಾರತ ಸಂವಿಧಾನದ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಮಾಜಿ ಕೇಂದ್ರ ಸಚಿವರಾದ ಬಾಬು ಜಗಜೀವನ ರಾಮ ಅವರ ಪುತ್ಥಳಿಗಳಿಗೆ ಪೂಜೆ ಸಲ್ಲಿಸಿ, ಪುಷ್ಪಾರ್ಚನೆ ಹಾಗೂ ಪುಷ್ಪ ನಮನ ಅರ್ಪಿಸಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ತಾಲೂಕ ಪಂಚಾಯತ್ ಕಾರ್ಯ ನಿರ್ವಾಹಕ ಅಧಿಕಾರಿ ಅಂಬರೀಷ ಪಾಟೀಲ ಮಾತನಾಡಿ ಡಾ. ಅಂಬೇಡ್ಕರ್ ಅವರು ಕೇವಲ ಒಂದು ಜಾತಿಯ ನಾಯಕನಲ್ಲ, ಸಮಸ್ತ ಸಮಾಜದ ಏಳಿಗೆಗಾಗಿ ತಮ್ಮ ಜೀವನವನ್ನೇ ಅರ್ಪಿಸಿದ ಮಹಾನ್ ದಾರ್ಶನಿಕರು ಎಂದು ಹೇಳಿದರು. ಸಾಮಾಜಿಕ ನ್ಯಾಯ, ಸಮಾನತೆ ಮತ್ತು ಶಿಕ್ಷಣದ ಮಹತ್ವವನ್ನು ಸಾರಿದ ಅವರು, ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ದಿಕ್ಕು ತೋರಿದ ದೀರ್ಘದೃಷ್ಟಿಯ ನಾಯಕರು ಎಂದು ಶ್ಲಾಘಿಸಿದರು.

ಇದೇ ವೇಳೆ ಮಹಿಳಾ ಸಮಾನತೆ ಹಾಗೂ ಹಕ್ಕುಗಳ ವಿಷಯದಲ್ಲಿ ಅಂಬೇಡ್ಕರ್ ಅವರ ಕೊಡುಗೆ ಅಪಾರವಾಗಿದೆ. ಮಹಿಳೆಯರಿಗೆ ಶಿಕ್ಷಣ, ಆಸ್ತಿ ಹಕ್ಕು ಹಾಗೂ ಗೌರವಯುತ ಜೀವನದ ಮಾರ್ಗವನ್ನು ಅವರು ತೆರೆದಿದ್ದಾರೆ ಎಂಬುದನ್ನು ಪ್ರೋ. ಕೃಷ್ಣಾ ಒತ್ತಿಹೇಳಿದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳ ಅಧಿಕಾರಿಗಳಾದ ಚನ್ನಮಲ್ಲಪ್ಪ ಘಂಟಿ, ಶರಣಪ್ಪ ಎಮ್, ನರಸಿಂಹಸ್ವಾಮಿ, ಸಂಗಮೇಶ್ ಪಾಟೀಲ, ಕಿರಣ್ ಹಜಾರೆ, ದೇವದಾಸ ಕೆ, ಆಶನ್ನ ಬುದ್ಧ, ಲಾಲಪ್ಪತಲಾರಿ, ಸಂತೋಷನೀರೆಟಿ, ಗುರುನಾಥ ತಲಾರಿ, ಜಗದೀಶ್ ಮೆಂಗಜಿ, ವಿವಿಧ ಇಲಾಖೆಯ ಸಿಬ್ಬಂದಿ, ಸಮಾಜ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಅಂಬೇಡ್ಕರ್ ಅವರ ಆದರ್ಶಗಳನ್ನು ಪಾಲಿಸುವ ಸಂಕಲ್ಪವನ್ನು ವ್ಯಕ್ತಪಡಿಸಿದರು.

# ಕತ್ತಲೆ ನಿಂದ ಬೆಳಕಿನ ಕಡೆ ದಾರಿ ತೋರಿದ ಮಹಾಪುರುಷ: ನಿರ್ಮಲ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಸ್ವತಂತ್ರ ಪೂರ್ವ ಮತ್ತು ನಂತರ ಸಮಾಜದಲ್ಲಿ ಅಸಮಾನತೆ, ಜಾತೀಯತೆ, ಮೇಲು ಕೀಳು ಎಂಬ ವಿಷ ಜಂತು ಜೀವಂತವಾಗಿ ಹುಟ್ಟಿದರಿಂದ ಇದನ್ನು ಬೇರು ಸಮೇತ ಕಿತ್ತಿ ಹೊಗೆಯಲು ಡಾ. ಬಿಆರ್ ಅಂಬೇಡ್ಕರ್ ಅವರು ಸವಿಧಾನವನ್ನು ರಚನೆ ಮಾಡಿ ಕತ್ತಲಿನಲ್ಲಿ ಇರುವ ನಮ್ಮ ಜೀವನವನ್ನು ಬೆಳಕಿನ ಕಡೆ ತೋರಿದ ಮಹಾಪುರುಷ ಎಂದು ಸರಕಾರಿ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯದ ಸಿಬಂದಿ ಶ್ರೀಮತಿ ನಿರ್ಮಲ ಅವರು ಲಿಂಗೇರಿ ಸ್ಟೇಷನ್ ನ ಡಾ. ಬಿ.ಆರ್ ಅಂಬೇಡ್ಕರ್ ಸರಕಾರಿ ಮೆಟ್ರಿಕ್ ಪೂರ್ವ ವಸತಿ ನಿಲಯದಲ್ಲಿ ನಡೆದ ಡಾ. ಬಿ. ಆರ್. ಅಂಬೇಡ್ಕರ್ ರವರ ಜಯಂತೋತ್ಸವದಲ್ಲಿ ಭಾವಚಿತ್ರಕ್ಕೆ ಪೂಜೆಯನ್ನು ಸಲ್ಲಿಸಿ ಮಾತನಾಡಿ ಹೇಳಿದರು.

ಸಮನ್ವಯ ಸೇವಾ ಸಂಸ್ಥೆಯ ಅಧ್ಯಕ್ಷ ಡಿ.ಕೆ. ದೇವಿಂದ್ರ ಮಾತನಾಡಿ ಹಲವು ವರ್ಷಗಳಿಂದ ಹಲವಾರು ರಾಷ್ಟ್ರಗಳ ಸವಿಧಾನ ಪುಸ್ತಕಗಳನ್ನ ಓದಿಕೊಂಡು ವಿಶ್ವದ ಅತಿ ದೊಡ್ಡ ಗ್ರಂಥವನ್ನು ನಿರ್ಮಿಸಿ , ದೊಡ್ಡ ಸಂವಿಧಾನವಾಗಿ ಮಲ್ಲಿಗೆ ಗಿಂತ ಮೃದು ಅಲ್ಲ ವಜ್ರಕಿಂತ ಗಟ್ಟಿಯು ಇಲ್ಲ ಸರಳವಾದ ಲಿಖಿತ ಮತ್ತು ಮೌಖಿಕವಾದ ಸವಿಧಾನವನ್ನು ನಿರ್ಮಾಣ ಮಾಡಿ ದೇಶದ ಜನರ ಜೀವನವನ್ನು ತೋರಿದ ದೇಶ ಕಂಡ ವಿಶ್ವ ನಾಯಕ ಡಾ.ಬಿ.ಆರ್ ಅಂಬೇಡ್ಕರ್ ರವರನ್ನು ನಿತ್ಯ ಸ್ಮರಿಸಬೇಕು ಅಂ–ದಾಗ ನಮ್ಮ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ. ಬಿ.ಆರ್ ಅಂಬೇಡ್ಕರ್ ಸರಕಾರಿ ಮೆಟ್ರಿಕ್ ಪೂರ್ವ ವಸತಿ ನಿಲಯದ ವಾರ್ಡನ್ ದೇವಿಂದ್ರಪ್ಪ, ಬ್ರಿಲಿಯಂಟ್ ಕೋಚಿಂಗ್ ಕ್ಲಾಸೆಸ್ ವ್ಯವಸ್ಥಾಪಕ ನಿರ್ದೇಶಕರಾದ ಮಂಜುನಾಥ, ಶಿಕ್ಷಕರಾದ ಶ್ಯಾಮದಾಸ್, ಶಂಕರ ಮತ್ತು ವಸತಿ ನಿಲಯದ ಅಡುಗೆ ಸಿಬಂದಿ ಶ್ರೀಕಂಠ ಕಡೆಚೋರ ಹಾಗೂ ಪೋಷಕರು, ವಿದ್ಯಾರ್ಥಿಗಳು ಇದ್ದರು.

# ಸಮಾನತೆಗೆ ಅಂಬೇಡ್ಕರ್ ದಾರಿ: ಬಸವರಾಜ

• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಪಟ್ಟಣದಲ್ಲಿ ಇಂದು ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ತಾಲೂಕು ಆಡಳಿತ ವತಿಯಿಂದ ವಿಜೃಂಭಣೆಯಿಂದ ಆಚರಿಸಲಾಯಿತು.

ಮಾಹಾಂತಸ್ವಾಮಿ ವೃತ್ತದಿಂದ ಆರಂಭವಾದ ಭವ್ಯ ಮೆರವಣಿಗೆ ಪ್ರಮುಖ ರಸ್ತೆ ಮಾರ್ಗವಾಗಿ ತಾಲೂಕು ಆಡಳಿತ ಕಚೇರಿವರೆಗೆ ಸಾಗಿತು. ಡೊಳ್ಳು ಕುಣಿತ ಹಾಗೂ ಡಿಜೆ ಸದ್ದಿನ ನಡುವೆ ಅಂಬೇಡ್ಕರ್ ಅವರ ಭಾವಚಿತ್ರವನ್ನು ಹೊತ್ತು ಮೆರವಣಿಗೆ ನಡೆಸಲಾಯಿತು. ಈ ಮೆರವಣಿಗೆಯಲ್ಲಿ ನೂರಾರು ಸಮಾಜದ ಮುಖಂಡರು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

ನಂತರ ನಡೆದ ಕಾರ್ಯಕ್ರಮದಲ್ಲಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದ ತಹಶೀಲ್ದಾರ್ ಎಂ. ಬಸವರಾಜ ಅವರು, ಜಾತಿ ಆಧಾರಿತ ತಾರತಮ್ಯದ ವಿರುದ್ಧ ಹೋರಾಡಿ 'ಅಸ್ಪೃಶ್ಯತೆ' ನಿರ್ಮೂಲನೆಗೆ ಸಂವಿಧಾನದ ಮೂಲಕ ದಾರಿ ತೋರಿದ ಮಹನೀಯರು ಡಾ. ಅಂಬೇಡ್ಕರ್ ಎಂದು ಹೇಳಿದರು. ಅವರು ಸಮಾಜದ ಎಲ್ಲಾ ವರ್ಗಗಳ ಜನರಿಗೆ ಸಮಾನ ಹಕ್ಕು, ಸ್ವಾತಂತ್ರ್ಯ ಹಾಗೂ ನ್ಯಾಯ ಒದಗಿಸಿದ ಮಹಾನ್ ನಾಯಕರು ಎಂದು ಹೇಳಿದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ ಡಾ. ವಿಜಯಕುಮಾರ ಸಾಲಿಮಠ ಅವರು ಮಾತನಾಡಿ, ಡಾ. ಅಂಬೇಡ್ಕರ್ ಅವರು ಭಾರತದ ಸಂವಿಧಾನ ಶಿಲ್ಪಿ, ಸಮಾಜ ಸುಧಾರಕ ಹಾಗೂ ಅರ್ಥಶಾಸ್ತ್ರಜ್ಞರಾಗಿದ್ದು, ದಲಿತರ ಹಕ್ಕುಗಳು, ಮಹಿಳಾ ಸಬಲೀಕರಣ ಮತ್ತು ಕಾರ್ಮಿಕರ ಹಿತಕ್ಕಾಗಿ ಶ್ರಮಿಸಿದ ಮಹನೀಯರು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಬಸಣ್ಣ ನಾಯಕ ಪ್ರಸ್ತಾವಿಕವಾಗಿ ಮಾತನಾಡಿದರು. ಜುಮ್ಮಣ್ಣ ಗುಡಿಮನಿ ಸ್ವಾಗತಿಸಿದರು.

ಈ ಸಂದರ್ಭದಲ್ಲಿ ರಾಜ್ಯ ಮಟ್ಟದ ವಿದ್ಯಾರತ್ನ ಪ್ರಶಸ್ತಿ ಪುರಸ್ಕೃತ ವೀರಣ್ಣ ಬೆಳ್ಳುಬ್ಬಿ ಅವರನ್ನು ಸನ್ಮಾನಿಸಲಾಯಿತು. ಪಿಯುಸಿ ಹಾಗೂ ಎಸ್ಎಸ್ಎಲ್ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಬಸವಶ್ರೀ, ಕಲ್ಪನಾ ಬಸವರಾಜ್ ಕನ್ನಳ್ಳಿ, ಮನೋಹರ್ ಚಂದನಕೇರಿ, ಭಾಗೀರಥಿ ಪಡಸಾಲಿ ಹಾಗೂ ಪುಷ್ಪಲತಾ ಅವರನ್ನು ಗೌರವಿಸಲಾಯಿತು. ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರಾದ ಮರಿಲಿಂಗಪ್ಪ ನಾಟೆಕರ, ಮಲ್ಲಣ್ಣ ಕಟ್ಟಿಮನಿ, ನಂದಪ್ಪ ಪೀರಾಪುರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಪರಶುರಾಮ್ ಛಲವಾದಿ ಕಾರ್ಯಕ್ರಮವನ್ನು ನಿರೂಪಿಸಿದರು.




# ಸರ್ಕಾರಿ ಕಾಲೇಜಗಳಲ್ಲಿ ತಾಲೂಕಿಗೆ ಪ್ರಥಮ ಸ್ಥಾನ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ಸರ್ಕಾರಿ ಕಾಲೇಜುಗಳಲ್ಲಿ ತಾಲೂಕಿಗೆ ಪ್ರಥಮ ಸ್ಥಾನ ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಲಾ ವಾಣಿಜ್ಯ ಮತ್ತು ವಿಜ್ಞಾನ ವಿಭಾಗದಲ್ಲಿ ಕಾಲೇಜುನ ಶೇಕಡಾ 80% ರಷ್ಟು ಫಲಿತಾಂಶದಲಿ ಪ್ರಥಮ ಸ್ಥಾನ ಹೊಂದಿದೆ.ಕಲಾ ವಿಭಾಗದಲ್ಲಿ –80%. ವಾಣಿಜ್ಯ ವಿಭಾಗದಲ್ಲಿ–83.33%. ವಿಜ್ಞಾನ ವಿಭಾಗದಲ್ಲಿ75% ಒಟ್ಟು ಕಾಲೇಜಿನ ಫಲಿತಾಂಶ 80% ರಷ್ಟು. ಕಲಾ ವಿಭಾಗದಲ್ಲಿ ಅರ್ಜುನ್ ರಾಠೋಡ (540/600)–90% ಅಗ್ರ ಶ್ರೇಣಿಯಲ್ಲಿ. ವಾಣಿಜ್ಯ ವಿಭಾಗದಲ್ಲಿ ಅಮುಲ್ ಜಾಧವ್ (449/600)74.83% ಪ್ರಥಮ ಶ್ರೇಣಿಯಲ್ಲಿ. ವಿಜ್ಞಾನ ವಿಭಾಗದಲ್ಲಿ ಶೇಮ್ ಶೇರ್(466/600)77.66% ಪ್ರಥಮ ಸ್ಥಾನದಲ್ಲಿ. ಕಾಲೇಜಿನ ಪ್ರಾಂಶುಪಾಲರು ರಾಜಕುಮಾರ ಜಾದವ್. ಉಪನ್ಯಾಸಕರಾದ ಜ್ಞಾನರಡ್ಡಿ ಬೊಗಲೆ. ಶ್ರೀ ನಾಥ. ಸಂಧ್ಯಾರಾಣಿ. ಆರಿಫಾ ಹಾಗೂ ಸಿಬ್ಬಂದಿ ವರ್ಗ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಹರ್ಷ ವ್ಯಕ್ತಪಡಿಸಿದರು.

# ಸಂವಿಧಾನದ ಆಶಯ ಅಳವಡಿಸಿಕೊಳ್ಳಿ: ಪಿಡಿಒ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ಡಾ. ಬಿ.ಆರ್. ಅಂಬೇಡ್ಕರ ಅವರು ನೀಡಿದ ಸಂವಿಧಾನದ ಆಶಯಗಳನ್ನು ಪ್ರತಿಯೊಬ್ಬರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಸಶಕ್ತ ಸಮಾಜ ನಿರ್ಮಾಣ ಸಾಧ್ಯ ಎಂದು ಡಿಗ್ಗಿ ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವೆಂಕಟೇಶ ದೇಶಪಾಂಡೆ ಹೇಳಿದರು.

ಕಮಲನಗರ ತಾಲೂಕಿನ ಡಿಗ್ಗಿ ಗ್ರಾಮ ಪಂಚಾಯತಿ ಕಾರ್ಯಾಲಯದಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮದಲ್ಲಿ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅವರು ಮಾತನಾಡಿದರು, ಬಾಬಾಸಾಹೇಬರ ಕೊಡುಗೆಯನ್ನು ಸ್ಮರಿಸಿದ ಅವರು, ಶೋಷಿತರ ಪರವಾಗಿ ಮತ್ತು ದೇಶದ ಏಕತೆಗಾಗಿ ಅಂಬೇಡ್ಕರ್ ಅವರು ಮಾಡಿದ ಹೋರಾಟ ಸದಾ ಸ್ಮರಣೀಯ ಎಂದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯ ಸಿಬ್ಬಂದಿಗಳಾದ ಕರವಸೂಲಿಗಾರ ಭೀಮರಾವ ಧಬಾಲೆ,ಡೇಟಾ ಆಪರೇಟರ್

ಸಾಗರದೇಶಮುಖ,ಗ್ರಂಥಪಾಲಕರಾದ ವಿಜಯಕುಮಾರ ಬನವಾಸೆ,ಸಿಬ್ಬಂದಿ ಸೂರ್ಯಕಾಂತ ಖರಾಬೆ, ಸೇರಿದಂತೆ ಪಂಚಾಯತಿಯ ಇನ್ನಿತರ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದರು.

# ಬಾಬಾಸಾಹೇಬ್ ವಿಚಾರಧಾರೆ ಪ್ರತಿಯೊಬ್ಬರೂ ಅಳವಡಿಸಿಕೊಳ್ಳಬೇಕು



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ನಗರದ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಕಾರ್ಯಾಲಯದಲ್ಲಿ ಹಮ್ಮಿಕೊಂಡಿದ್ದ ಸಂವಿಧಾನ ಶಿಲ್ಪಿ ಡಾ. ಬಾಬಾ ಸಾಹೇಬ ಅಂಬೇಡ್ಕರ್ ಅವರ 135ನೇ ಜಯಂತೋತ್ಸವ ನಿಮಿತ್ಯ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚಾಣೆ ಮಾಡುವ ಮೂಲಕ ಗೌರವ ನಮನ ಸಲ್ಲಿಸಿ ಮಾತನಾಡಿದರು, ಪ್ರತಿಯೊಬ್ಬ ಭಾರತೀಯನಿಗೂ ಏಪ್ರಿಲ್ 14 ದಿನ ಮಹತ್ವದ ದಿನವಾಗಿದೆ. ಮಹಿಳೆಯರ ಪ್ರಗತಿ. ಸಮಾಜದ ಏಳಿಗೆಯ ಕನಸು ಕಂಡಿದ್ದ ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಅಸಮಾನತೆಯ ಅಸ್ಪೃಶ್ಯತೆಯ ವಿರುದ್ಧ ಧನಿ ಎತ್ತಿ ಸಮಾಜವನ್ನು ಸಮಾನತೆಗಾಗಿ ಭವ್ಯ ಭಾರತದ ನಿರ್ಮಾಣದತ್ತ ಗಮನ ಹರಿಸಿದ್ದವರು. ಅವರ ಜೀವನದ ಕೊನೆಯ ತನಕ ಸಮಾಜದ ಉನ್ನತಿಗಾಗಿ ಕೆಲಸ ಮಾಡಿದ್ದವರು ಎಂದು ಹೇಳಿದರು.

ಸಹಸ್ರಾರು ಅಸ್ಪೃಶ್ಯ ಸತ್ಯಾಗ್ರಹಿಗಳು ಭಾಗವಹಿಸಿದ ಈ ಅಹಿಂಸಾತ್ಮಕ ಚಳುವಳಿಗಳಿಗೆ ಸವರ್ಣೀಯರು ಹಿಂಸಾತ್ಮಕವಾಗಿ ಪ್ರತಿಕ್ರಿಯಿಸಿದರು. ನ್ಯಾಯಾಲಯದ ಕಟ್ಟೆ ಹತ್ತಿದ ಚೌಡಾರ್ ಕೆರೆಯ ಚಳುವಳಿಯು, ಅನೇಕ ವರ್ಷಗಳ ನಂತರ, ಕೆಳವರ್ಗಗಳ ಪರವಾಗಿ ವಿಜಯ ಸಾಧಿಸುವುದರೊಂದಿಗೆ ಪರ್ಯವಸಾನ ಹೊಂದಿತು. ಅಸ್ಪೃಶ್ಯರನ್ನು ಸಮಾಜ ನಡೆಸಿಕೊಳ್ಳುತ್ತಿದ್ದ ಕ್ರೂರ ರೀತಿಗೆ ಮೂಲ ಕಾರಣ 'ಮನುಸ್ಮೃತಿ' ಎಂದು ಅಂಬೇಡ್ಕರ್ ನಂಬಿದ್ದರು.

ಸಂವಿಧಾನವು ಭಾರತದ ಪವಿತ್ರ ಗ್ರಂಥ ಇದು ನಮ್ಮ ಬದುಕಿಗೆ ದಾರಿ. ಈ ಪವಿತ್ರ ಗ್ರಂಥದ ಮೂಲಕ ಪ್ರಜಾಪ್ರಭುತ್ವಕ್ಕೊಂದು ಅರ್ಥ ಕಲ್ಪಿಸುವ ವ್ಯವಸ್ಥೆಯನ್ನು ಜಾರಿಗೆ ತರಲಾಯಿತು. ಈ ಪವಿತ್ರ ಗ್ರಂಥವನ್ನು ನಮಗೆ ನೀಡಿದವರು ಎಲ್ಲರ ಪಾಲನ ಸ್ಪೂರ್ತಿಯ ಚಿಲುಮೆ ಡಾ.ಬಾಬಾ ಸಾಹೇಬ್. ಅವರ ಬಾಲ್ಯದ ದಿನಗಳು ಬಲು ಕಷ್ಟದಿಂದಲೇ ಕೂಡಿತ್ತು. ಅಸ್ಪೃಶ್ಯತೆ, ಅಸಮಾನತೆಯ ನೋವಿನ ನಡುವೆ ಬೆಳೆದಿದ್ದ ಬಾಬಾ ಸಾಹೇಬ ಅವರು ಬಳಿಕ ವಿಶ್ವವೇ ಗೌರವಿಸುವಂತಹ ನಾಯಕರಾಗಿ ರೂಪಗೊಂಡವರು ಅದೆಷ್ಟೋ ಜನರಿಗೆ ಸ್ಪೂರ್ತಿಯಾಗಿದ್ದಾರೆ. ಸ್ವಾಭಿಮಾನದ ಬದುಕು ಕಟ್ಟಿಕೊಳ್ಳಲು ಪ್ರೇರಣೆಯಾಗಿದ್ದಾರೆ ಎಂದು ತಿಳಿಸಿದರು.

ಸಮಾಜದಲ್ಲಿ ಹಿಂದುಳಿದ ವರ್ಗಗಳ ಹಕ್ಕಿಗಾಗಿ ತಮ್ಮ ಜೀವನವನ್ನು ಮುಡಿಪಿಟ್ಟ ಶ್ರೇಷ್ಠ ವ್ಯಕ್ತಿತ್ವ ಅವರದಾಗಿದ್ದು, ಸ್ವಾತಂತ್ರ ತ್ರ್ಯ, ಸಮಾನತೆ ಮತ್ತು ಬ್ರಾತೃತ್ವದ ಮೂಲಕ ಜಾತ್ಯಾತೀತ ಮತ್ತು ಸಮಾಜವಾದಿ ಪ್ರಜಾಪ್ರಭುತ್ವದ ದೇಶ ಕಟ್ಟಲು ಮಹಾನ್ ನಾಯಕ ಡಾ.ಬಿ.ಆರ್. ಅಂಬೇಡ್ಕರ್ ಎಳೆದು ತಂದು ನಿಲ್ಲಿಸಿದ ರಥವನ್ನು ಮುಂದಕ್ಕೆ ಒಯ್ಯಲು ನಾವೆಲ್ಲ ಕೈಜೋಡಿಸಬೇಕೆಂದು ನುಡಿದರು, ಈ ವೇಳೆ ಕರವೇ ಮುಖಂಡರಾದ ಮಲ್ಲು ಮಾಳಿಕೇರಿ, ನಿಂಗಪ್ಪ ಗುಡಗುಡಿ, ವಿಶ್ವರಾಜ ಪಾಟೀಲ್, ಸಿದ್ಧಲಿಂಗರೆಡ್ಡಿ ಮುನಗಲ್, ನಾಗು ತಾಂಡ್ಲೂಕರ್, ಮಹೇಶ ಠಾಣಗುಂದಿ, ಜರ್ನಾಧನ ಬಡಿಗೇರಾ ಚಾಮನಳ್ಳಿ, ಲಿಂಗಾರೆಡ್ಡಿ ಪಾಟೀಲ್, ಅಶೋಕ ನಾಯಕ, ಶರಣು ತಿಂಥಣಿ, ಮಲ್ಲು ಬಿಳ್ಹಾರ, ಹಣಮಂತ ದೊರೆ, ನಾಗರಾಜ ಪಿಲ್ಲಿ, ವಿರುಪಾಕ್ಷ ಸ್ವಾಮಿ, ಶರಣು ಹಬಳ್ಳಿ, ವಿಶ್ವ ಯಾದಗಿರಿ, ರಮೇಶ.ಡಿ.ನಾಯಕ ಸೇರಿದಂತೆ ಇತರರಿದ್ದರು.

# ಡಾ, ಬಿಆರ್ ಅಂಬೇಡ್ಕರ್ ಒಂದು ಜಾತಿಯ ವ್ಯಕ್ತಿಯಲ್ಲ ಇಡಿ ದೇಶದ ಶಕ್ತಿ



• ಮಲ್ಲಮ್ಮ ನುಡಿ ವಾರ್ತೆ, ಕೆಂಭಾವಿ

ಪಟ್ಟಣದ ವಾರ್ಡ್ ನಂಬರ್ 2ರ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಬಾಬಾಸಾಹೇಬರ ನಾಮಫಲಕಕ್ಕೆ ಪೂಜೆ ಸಲ್ಲಿಸುವ ಮೂಲಕ ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಸಂಭ್ರಮದಿಂದ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಡಿಎಸ್ಎಸ್ (ಅಂಬೇಡ್ಕರ್ ವಾದ) ಹೋಬಳಿ ಸಂಚಾಲಕ ರಾಯಪ್ಪ ಎಂ. ಯತ್ನಾಳ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಜಾತಿಗೆ ಸೀಮಿತವಾದ ವ್ಯಕ್ತಿಯಲ್ಲ. ಅವರು ಈ ದೇಶದ ಪ್ರತಿಯೊಬ್ಬ ಕಟ್ಟಕಡೆ–ಯ ವ್ಯಕ್ತಿಗೂ ದಾರಿದೀಪವಾಗಿದ್ದಾರೆ. ವಿಶೇಷವಾಗಿ ಮಹಿಳೆಯರಿಗೆ ಸಮಾನ ಸ್ಥಾನಮಾನ ನೀಡುವಲ್ಲಿ ಹಾಗೂ ಸಂವಿಧಾನದ ಮೂಲಕ ಪ್ರತಿಯೊಬ್ಬರಿಗೂ ಕಾನೂನು ಅರಿವು ಮೂಡಿಸುವಲ್ಲಿ ಅವರ ಪಾತ್ರ ಅಪಾರ, ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮುಖಂಡರಾದ ರಮೇಶ್ ಕೊಡಗಾನೂರ, ಶಿವಪ್ಪ ಜಿ. ಕಂಬಾರ್, ಅಪ್ಪಣ್ಣ ಅಗ್ನಿ, ಸದಪ್ಪ ಅರಳುಗುಂಡಗಿ, ಮಲ್ಲು ವಠಾರ, ಮಹೇಶ್ ಕಟ್ಟಿಮನಿ, ತಿಮ್ಮಣ್ಣ ಹೊಸಗೇರಿ, ಭೀಮಣ್ಣ ಸೀನಪ್ಪಮನಿ, ಚಂದ್ರು ಕಟ್ಟಿಮನಿ, ಮಲ್ಲು ಬಾವಿಮನಿ, ಸಿದ್ದಪ್ಪ ಕಂಬಾರ್, ರಾಮು ಕಡಕೋಳ, ಮಾದೇವಪ್ಪ ಬಸರಿಗಿಡ, ಹನುಮಂತ್, ಶೇಖಪ್ಪ ಇಂಗಳಗಿ ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

# ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ ಕಮಲನಗರ

ತಾಲೂಕಿನ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ (ಪಿ.ಕೆ.ಪಿ.ಎಸ್) ಇಂದು ಬೆಳಿಗ್ಗೆ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಅತ್ಯಂತ ಶ್ರದ್ಧಾ ಭಕ್ತಿಯಿಂದ ಆಚರಿಸಲಾಯಿತು.

ಕಾರ್ಯಕ್ರಮದ ಆರಂಭದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಗೌರವ ಸಲ್ಲಿಸಲಾಯಿತು.




ಈ ಸಂದರ್ಭದಲ್ಲಿ ಮಾತನಾಡಿದ ಪಿ.ಕೆ.ಪಿ.ಎಸ್ ಅಧ್ಯಕ್ಷರಾದ ಗುರುನಾಥ ವಟಗೆ ಅವರು, "ದೇಶಕ್ಕೆ ಸುಭದ್ರವಾದ ಸಂವಿಧಾನ ನೀಡುವ ಮೂಲಕ ಅಂಬೇಡ್ಕರ್ ಅವರು ಸಮಾನತೆಯ ಹರಿಕಾರರಾಗಿದ್ದಾರೆ. ಅವರ ತತ್ವ ಆದರ್ಶಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು," ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಸಂಘದ ಕಾರ್ಯದರ್ಶಿಗಳಾದ ಬಸವರಾಜ ಸ್ವಾಮಿ, ನಾಗಯ್ಯ ಸ್ವಾಮಿ ಸೇರಿದಂತೆ ಸಂಘದ ಇತರೆ ಆಡಳಿತ ಮಂಡಳಿ ಸದಸ್ಯರು ಹಾಗೂ ಗ್ರಾಮದ ಪ್ರಮುಖರು ಉಪಸ್ಥಿತರಿದ್ದರು.

### ಡಾ.ಬಿ.ಆರ್.ಅಂಬೇಡ್ಕರ್ 135ನೇ ಜನ್ಮ ದಿನಾಚರಣೆ

# ವಿವಿಧ ಗಣ್ಯರಿಂದ ಮಾಲಾರ್ಪಣೆ, ಮೆರವಣಿಗೆಗೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ರಾಯಚೂರಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಅಂಗವಾಗಿ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ವಿವಿಧ ಗಣ್ಯ-ರಿಂದ ಪೂಜೆ ಕಾರ್ಯಕ್ರಮ ನೆರವೇರಿಸಿ, ಮಾಲಾರ್ಪಣೆ ಮಾಡಿ, ಮೆರವಣಿಗೆಗೆ ಚಾಲನೆ ನೀಡಲಾಯಿತು.


ಮೆರವಣಿಗೆಯು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ರಂಗಮಂದಿರವರೆಗೆ ವಿವಿಧ ಕಲಾ ತಂಡದೊಂದಿಗೆ ಡಾ.ಬಿ.ಆರ್. ಅಂಬೇಡ್ಕರ ಅವರ ಭಾವಚಿತ್ರದ ಭವ್ಯ ಮೆರವಣಿಗೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಬೀದರ್ ಬುದ್ಧ ವಿಹಾರನ ಬಂಂತೆ-ಿಜಿ ಯಾಕತ್ಪೂರ್, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್, ಜಿಲ್ಲೆಯ ಪ್ರಭಾರಿ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ವಿರೇಶ ನಾಯಕ, ಸಿಡಾಕ್ ಜಂಟಿ ನಿರ್ದೇಶಕ ಜಿ.ಯು.ಹುಡೇದ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ನವೀನ್ ಕುಮಾರ್, ಮುಖಂಡರಾರ ರವಿ ಭೋಸರಾಜು, ರವೀಂದ್ರ ಜಲ್ದಾರ್, ಕೆ.ಇ.ಕುಮಾರ್, ಮಾರಪ್ಪ, ನರಸಪ್ಪ ದಡೋರ್, ಎಂ.ಈರಣ್ಣ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಮಾಜ ಮುಖಂಡರು ಕಾರ್ಯಕ್ರಮದಲ್ಲಿ ಇದ್ದರು.

### ಜಿಲ್ಲಾಡಳಿತದಿಂದ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯುತ್ಸವ

# ಅಂಬೇಡ್ಕರ್ ಅವರ ಆದರ್ಶ ನಾವೆಲ್ಲ ಅಳವಡಿಸಿಕೊಳ್ಳಬೇಕು: ಪಾಟೀಲ್

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು




ಜಗತ್ತಿನ ಶ್ರೇಷ್ಠ ಜ್ಞಾನಿಯಾಗಿದ್ದ ಅಂಬೇಡ್ಕರ್ ಅವರು ತಮ್ಮ ಪ್ರತಿಭೆಯನ್ನು ಮನುಕುಲದ ಉದ್ಧಾರಕ್ಕಾಗಿ ಮುಡಿಪಾಗಿಟ್ಟರು. ಅವರ ಆದರ್ಶಗಳನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕೆಂದು ರಾಯಚೂರು ನಗರದ ಕ್ಷೇತ್ರದ ಶಾಸಕರಾದ ಡಾ.ಶಿವರಾಜ ಎಸ್.ಪಾಟೀಲ್ ಅವರು ಹೇಳಿದರು.

ಏಪ್ರಿಲ್ 14ರ ಮಂಗಳವಾರ ದಂದು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಜಗತ್ತಿನಲ್ಲಿ ಶಾಂತಿಯುತ, ಸಮೃದ್ಧಿಯಾಗಿ ಯಾವುದಾದರೂ ದೇಶ ಇದ್ದಾರೆ. ಅದು ಭಾರತ ದೇಶವಾಗಿದೆ. ಇದಕ್ಕೆ ಮೂಲಕಾರಣ ಡಾ.ಬಿ.ಆರ್.ಅಂಬೇಡ್ಕರ್ ಅವರ ಭಾರತ ಸಂವಿಧಾನವಾಗಿದೆ. ವಿದ್ಯಾರ್ಥಿಗಳು ಅಚ್ಚುಕಟ್ಟಾಗಿ ಓದಬೇಕು. ವಿದ್ಯಾರ್ಥಿಗಳಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರು ಪ್ರೇರಣೆಯಾಗಬೇಕೆಂದರು.

ಪ್ರಭಾರಿ ಜಿಲ್ಲಾಧಿಕಾರಿ ಆಗಿರುವ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಮಾತನಾಡಿ, ಡಾ.ಬಿ.ಆರ್. ಅಂಬೇಡ್ಕರ್ ಅವರ ವ್ಯಕ್ತಿತ್ವ ಬಹಳ ದೊಡ್ಡದಾಗಿತ್ತು. ಸಂವಿಧಾನ, ಕಾನೂನು, ಆರ್ಥಿಕ ವಿಷಯಗಳಲ್ಲಿ ತಂಜ್ಞರಾಗಿ ಮಾತ್ರವಲ್ಲದೇ ಪ್ರಪಂಚದ ಎಲ್ಲಾ ವಿಷಯಗಳಲ್ಲಿ ಪರಿಣಿತರಾಗಿದ್ದರು. ಪ್ರತಿಯೊಬ್ಬರೂ ಅವರ ತೋರಿಸಿದ ಮಾರ್ಗದಲ್ಲಿ ನಡೆಯಬೇಕು. ಆಗ ಮಾತ್ರ ದೇಶದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದರು.

ಕಾರ್ಯಕ್ರಮದ ಉಪನ್ಯಾಸಕರಾಗಿ ಕುವೆಂಪು ಕನ್ನಡ ಅಧ್ಯಯನ ಕುಪ್ಪಳ್ಳಿ ಮತ್ತು ಹಿರಿಯ ವಿದ್ವಾಂಸರಾದ ಡಾ.ಬಿ.ಎಂ.ಪುಟ್ಟಯ್ಯ ಅವರು ಮಾತನಾಡಿ, ಅಂಬೇಡ್ಕರ್ ಅವರ ಜಯಂತ್ಯೋತ್ಸವವನ್ನು ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಎನ್ನದೇ, ರಾಜಕೀಯ, ಸಂಸದೀಯ, ಪ್ರಜಾಪ್ರಭುತ್ವದ ದೃಷ್ಟಿಯಿಂದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ ಜಯಂತ್ಯೋತ್ಸವ ಎಂದು ಕರೆಯಬೇಕು. ಅಂಬೇಡ್ಕರ್ ಸಂಶೋಧನಾ ಕೇಂದ್ರಗಳು, ಅಧ್ಯಯನ ಕೇಂದ್ರಗಳನ್ನು ಬಾಬಾ ಸಾಹೇಬ್ ಅಂಬೇಡ್ಕರ್ ಕೇಂದ್ರಗಳೆಂದು ಉಲ್ಲೇಖಿಸಬೇಕು. ಮತ್ತು ಎಲ್ಲಾ ಖಾಸಗಿ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳಲ್ಲಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರವನ್ನು ಇರಿಸಬೇಕೆಂದರು.

ಸಂವಿಧಾನದಲ್ಲಿ ಬಡವ-ಶ್ರೀಮಂತ ಎನ್ನದೆ ದೇಶದ ಪ್ರತಿ ವ್ಯಕ್ತಿಗೆ ಒಂದೇ ಮತದ ಹಕ್ಕು ನೀಡಲಾಗಿದೆ. ಲಿಂಗ, ಜಾತಿ, ಧರ್ಮ, ಬಾಷೆ ಆಧಾರಿತ ತಾರತಮ್ಯ ಮಾಡುವಂತಿಲ್ಲ. ಇದು ಪ್ರಜಾಪ್ರಭುತ್ವದ ವೈಶಿಷ್ಟ್ಯ. ತಂದೆ, ಪತ್ನಿ, ಕೊನೆಗೆ ಮಕ್ಕಳನ್ನು ಕಳೆದುಕೊಂಡರು ಅಂಬೇಡ್ಕರವರು ಈ ದೇಶದ ದೀನ ದಲಿತರ, ಬಡವರ, ಅಲ್ಪಸಂಖ್ಯಾತರ, ದಮನಿತರಿಗೆ ನ್ಯಾಯ ಕಲ್ಪಿಸಲು ಜೀವನ ಪರ್ಯಂತ ಹೋರಾಡಿದ ಮಹಾನ್ ಹೋರಾಟಗಾರ ಎಂದು ಬಣ್ಣಿಸಿದರು.

ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಸನ್ಮಾನ: ದ್ವಿತೀಯ ಪಿಯುಸಿಯಲ್ಲಿ ಅತಿಹೆಚ್ಚು ಅಂಕಗಳನ್ನು ಗಳಿಸಿದ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಾದ ಸ್ನೇಹ, ಸಂಗೀತಾ ಹಾಗೂ ಗೀತಾ ಅವರಿಗೆ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಅಂಗವಾಗಿ ವಿವಿಧ ಗಣ್ಯರಿಂದ ಸನ್ಮಾನಿಸಿ, ಗೌರವಿಸಲಾಯಿತು.

ವಿವಿಧ ಗಣ್ಯರಿಂದ ಛಾಯಾಚಿತ್ರ ವೀಕ್ಷಣೆ: ಸಂವಿಧಾನ ಶಿಲ್ಪಿ, ಭಾರತ ರತ್ನ ಡಾ.ಬಿ.ಆರ್.ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಅಂಗವಾಗಿ ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಜೀವನ, ಹೋರಾಟ, ಸಾಧನೆ ಕುರಿತು ಅವರ ಛಾಯಾಚಿತ್ರ ಪ್ರದರ್ಶನ ಏರ್ಪಡಿಸಲಾಗಿತ್ತು.

ಛಾಯಾಚಿತ್ರಗಳನ್ನು ಜಿಲ್ಲಾಧಿಕಾರಿಗಳು, ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಸೇರಿದಂತೆ ವಿವಿಧ ಗಣ್ಯರು, ಸಾರ್ವಜನಿಕರು ವೀಕ್ಷಣೆ ಮಾಡಿದರು.

ಇದೇ ಸಂದರ್ಭದಲ್ಲಿ ಬೀದರ್ ಬುದ್ಧ ವಿಹಾರನ ಬಂಂತೇಜಿ ಯಾಕತ್ಪೂರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ., ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ, ಅಪರ ಜಿಲ್ಲಾಧಿಕಾರಿ ಶಿವಾನಂದ, ರಾಯಚೂರು ಸಹಾಯಕ ಆಯುಕ್ತರಾದ ಡಾ.ಹಂಪಣ್ಣ ಸಜ್ಜನ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ, ಮುಖ್ಯ ಲೆಕ್ಕಾಧಿಕಾರಿ ವಿಜಯಶಂಕರ್, ರಾಯಚೂರು ತಹಶಿಲ್ದಾರ್ ಸುರೇಶ್ ವರ್ಮ, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಪ್ರವೀಣ್ ಕುಮಾರ್, ಆದಿಜಾಂಭವ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ರಾಜೇಂದ್ರ ಜಲ್ದಾರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಸಮಾಜದ ಮುಖಂಡರು ಸಭೆಯಲ್ಲಿ ಇದ್ದರು.

# ಅಪರಿಚಿತ ಶವ ಪತ್ತೆ ಗುರುತು ಪತ್ತೆಗೆ ಪೊಲೀಸರ ಮನವಿ

• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ನಗರದಲ್ಲಿ ಸುಮಾರು 40 ರಿಂದ 45 ವರ್ಷ ವಯಸ್ಸಿನ ಅಪರಿಚಿತ ವ್ಯಕ್ತಿಯ ಶವ ಪತ್ತೆಯಾಗಿದ್ದು, ಮೃತರ ವಾರಸುದಾರರ ಪತ್ತೆಗಾಗಿ ಬಳ್ಳಾರಿ ಬ್ರೂಸ್ ಪೇಟೆ ಪೊಲೀಸ್ ಠಾಣೆಯ ಠಾಣಾಧಿಕಾರಿಯವರು ಸಾರ್ವಜನಿಕರ ನೆರವು ಕೋರಿದ್ದಾರೆ.

ಏ.09 ರಂದು ಬೆಳಿಗ್ಗೆ ಸುಮಾರು 07.45 ಗಂಟೆಯ ಸಮಯದಲ್ಲಿ ಬಳ್ಳಾರಿ ನಗರದ ಬೆಂಗಳೂರು ರಸ್ತೆಯ ಕಾಳಮ್ಮ ರಸ್ತೆ ಹತ್ತಿರವಿರುವ ಬೆಂಗಳೂರು ಬೇಕರಿ ಬಳಿ ಅಪರಿಚಿತ ವ್ಯಕ್ತಿಯು ಅಸ್ವಸ್ಥ ಸ್ಥಿತಿಯಲ್ಲಿ ಕಂಡುಬಂದಿದ್ದರು. ಕೂಡಲೇ ಸಾರ್ವಜನಿಕರು ಅಂಬ್ಯುಲೆನ್ಸ್ ಮೂಲಕ ಅವರನ್ನು ಚಿಕಿತ್ಸೆಗಾಗಿ ಬಳ್ಳಾರಿಯ ಬಿಎಂಸಿಆರ್‌ಸಿ ಆಸ್ಪತ್ರೆಗೆ ದಾಖಲಿಸಿದ್ದರು. ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದರು.

ಚಹರೆ ಗುರುತು: ಎತ್ತರ ಅಂದಾಜು 5.5 ಅಡಿ, ಸಾಧಾರಣ ಮೈಕಟ್ಟು, ಎಣ್ಣೆಗೆಂಪು ಬಣ್ಣ, ದುಂಡು ಮುಖ ಹೊಂದಿದ್ದು, ತಲೆಯಲ್ಲಿ ಚಿಕ್ಕ ಕಪ್ಪು ಕೂದಲು, ಮುಖದಲ್ಲಿ ಬಿಳಿ ಗಡ್ಡ ಹಾಗೂ ಮೀಸೆ ಇರುತ್ತದೆ. ಪಾಚಿ ಬಣ್ಣದ ಉದ್ದನೆಯ ತೋಳಿನ ಶರ್ಟ್ ಹಾಗೂ ಪ್ಯಾಂಟ್ ಧರಿಸಿದ್ದಾರೆ.

ಮೃತನ ವಿಳಾಸ ಅಥವಾ ಅವರ ಸಂಬಂಧಿಕರ ಬಗ್ಗೆ ಯಾವುದೇ ಮಾಹಿತಿ ಲಭ್ಯವಿದ್ದಲ್ಲಿ ಬ್ರೂಸ್‌ಪೇಟೆ ಪೊಲೀಸ್ ಠಾಣೆ ದೂ.08392-272022, ಪಿ.ಎಸ್.ಐ ಮೊ.9480803081 ಅಥವಾ ಬಳ್ಳಾರಿ ಕಂಟ್ರೋಲ್ ರೂಂ ದೂ.08392-258100, 258102 ಗೆ ಕರೆ ಮಾಡಬಹುದು ಎಂದು ಬಳ್ಳಾರಿ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ಠಾಣಾಧಿಕಾರಿ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಬಂಡಿಹಬ್ಬವು ಜಗತ್ತಿನ ಅತಿ ಪ್ರಾಚೀನ ಜಾತ್ರೆ: ಶಾಂತಾರಾಮ

• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಬಂಡಿಹಬ್ಬವು ಜಗತ್ತಿನ ಅತೀ ಪ್ರಾಚೀನ ಜಾತ್ರೆ ಎಂಬ ನಿಗೂಢ ಸತ್ಯವನ್ನು ಪಾಂಡಿತ್ಯಪೂರ್ಣ ಸಂಶೋಧನೆಗಳ ಸಾಕ್ಷಾಧಾರಗಳೊಂದಿಗೆ ಸಾಬೀತು ಪಡಿಸುವಲ್ಲಿ ಲೇಖಕ ವಿಘ್ನೇಶ್ವರ ಗುನಗಾ ಅವರ ಬಂಡಿಹಬ್ಬ ಕೃತಿ ಸಾಫಲ್ಯ ಕಂಡಿದೆ ಎಂದು ಹಿರಿಯ ಸಾಹಿತಿ ಶಾಂತಾರಾಮ ನಾಯಕ ಹಿಚಕಡ ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಪಟ್ಟಣದ ಭೂಮ್ತಾಯಿ ದೇವಸ್ಥಾನದ ಆವರಣದಲ್ಲಿ ಭಾನುವಾರ ಹಮ್ಮಿಕೊಂಡಿದ್ದ 'ಬಂಡಿಹಬ್ಬ' ಪುಸ್ತಕ ಲೋಕಾರ್ಪಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹಿರಿಯ ಪತ್ರಕರ್ತ ಗಂಗಾಧರ ಹಿರೇಗುತ್ತಿ ಮಾತನಾಡಿ, ಗ್ರಾಮದೇವಿಯ ಬಂಡಿಹಬ್ಬದ ಜಾತ್ರೆಯು ಅತ್ಯಂತ ಪ್ರಾಚೀನ ಪದ್ಧತಿಯಾಗಿದೆ ಎಂಬುದನ್ನು ಕೃತಿಕಾರ ವಿಘ್ನೇಶ್ವರ ಗುನಗಾ ಅವರು ಅಧ್ಯಯನ ಹಾಗೂ ಜಾಗತಿಕ ದಾಖಲೆಗಳ ಮೂಲಕ ನಿರೂಪಿಸಿದ್ದಾರೆ. ಜನರಲ್ಲಿ ದೇವರುಗಳ ಪರಿಕಲ್ಪನೆ ಪ್ರಾರಂಭಗೊಂಡ ದಿನದಿಂದಲೇ ಗ್ರಾಮದೇವತೆಗಳ ಆರಾಧನೆಯೂ ಆರಂಭಗೊಂಡಿರುವುದು ಬಂಡಿಹಬ್ಬ ಪುಸ್ತಕದಲ್ಲಿ ತರ್ಕಬದ್ಧವಾಗಿ ಮೂಡಿ ಬಂದಿದೆ. ಮಾಂತ್ರಿಕತೆಯನ್ನೂ ಮೀರಿಸುವ ತಾಂತ್ರಿಕ ಆಚರಣಾ ಪದ್ಧತಿ ಬಂಡಿಹಬ್ಬದಲ್ಲಿ ಇಂದಿಗೂ ಕಾಣಸಿಗುತ್ತದೆ ಎಂಬುದನ್ನು ಕಣ್ಣಿಗೆ ಕಟ್ಟುವಂತೆ ಅಕ್ಷರರೂಪದಲ್ಲಿ ಅಚ್ಚೊತ್ತಿದೆ ಎಂದರು.

ಪ್ರೊ.ಶ್ರೀಧರ ನಾಯಕ ಕೃತಿ ಪರಿಚಯಿಸಿದರು. ಹಿರಿಯ ಪತ್ರಕರ್ತ ವಿಠ್ಠಲದಾಸ ಕಾಮತ, ವಕೀಲ ಸುಭಾಷ ನಾರ್ವೇಕರ, ಕೃತಿಕಾರ ವಿಘ್ನೇಶ್ವರ ಗುನಗಾ ಮಾತನಾಡಿದರು. ಕೈಗಾ ನೌಕರರ ಸಂಘದ ಅಧ್ಯಕ್ಷ ಜಗದೀಶ ಗುನಗಾ ಸ್ವಾಗತಿಸಿದರು. ವಕೀಲ ನಾಗಾನಂದ ಬಂಟ ಪ್ರಾರ್ಥಿಸಿದರು. ಶಿಕ್ಷಕ ರಾಜೇಶ ಮಾಸ್ತರ ಸೂರ್ವೆ ನಿರೂಪಿಸಿದರು.




# ಯಕ್ಷಗಾನ ನಮ್ಮ ಸಂಸ್ಕತಿ ಮತ್ತು ಪರಂಪರೆಯ ಸಂಕೇತ: ಬೀರಣ್ಣ ನಾಯಕ



• ಮಲ್ಲಮ್ಮ ನುಡಿ ವಾರ್ತೆ ಅಂಕೋಲಾ

ಯಕ್ಷಗಾನಕಲೆಕಲಾಲೋಕದಲ್ಲಿಯೇ ಅದ್ಭುತ ಕಲೆಯಾಗಿದ್ದು, ಈ ಕಲೆ ನವರಸಗಳಿಂದ ತುಂಬಿದೆಯಲ್ಲದೇ, ನಮ್ಮ ಪರಂಪರೆ ಹಾಗೂ ಸಂಸ್ಕೃತಿಯ ಪ್ರತೀಕವಾಗಿದೆ ಎಂದು ನಿವೃತ್ತ ಪ್ರಾಚಾರ್ಯ ಬೀರಣ್ಣ ನಾಯಕ ಮೊಗಟಾ ಹೇಳಿದರು.

ಅವರು ತಾಲೂಕಿನ ಮೊಗಟಾದ ಶ್ರೀ ಶಾಂತಿಕಟಾಕ್ಷ ಯಕ್ಷ ಮಿತ್ರ ಬಳಗದ ಆಶ್ರಯದಲ್ಲಿ ಹಿರಿಯ ಯಕ್ಷಗಾನ ಕಲಾವಿದ ಸದಾನಂದ ಗಾಂವಕರ ಮತ್ತು ಯಕ್ಷಗಾನ ಸಂಘಟಕ ಶಾಂತಾ ನಾಯಕ ಅವರ ಜೊತೆ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಈ ಸಂದರ್ಭದಲ್ಲಿ ಜಿ.ಪಂ. ಮಾಜಿ ಸದಸ್ಯ ಜಗದೀಶ ನಾಯಕ, ಸಹಕಾರಿ ಸಂಘದ ಅಧ್ಯಕ್ಷ ಜಗದೀಶ ನಾಯಕ, ಪ್ರಾಚಾರ್ಯ ಉದಯ ನಾಯಕ, ತಮ್ಮಾಣಿ ನಾಯಕ, ಹರೀಶ ನಾಯಕ, ಗಜಾನನ ಗಾಂವಕರ ಇತರರಿದ್ದರು. ಪ್ರಶಸ್ತಿ ವಿಜೇತ ಶಿಕ್ಷಕ ಮಂಜುನಾಥ ನಾಯಕ ಆಂದ್ಲೆ ವಂದಿಸಿದರು. ನಂತರ 'ಸಮಗ್ರಕಂಸ' ಯಕ್ಷಗಾನ ಪ್ರದರ್ಶಿಸಲಾಯಿತು.

# ಡಾ.ಬಿ ಆರ್ ಅಂಬೇಡ್ಕರ್ 135ನೇ ಜನ್ಮ ದಿನೋತ್ಸವ ಡಾ ಬಾಬು ಜಗಜೀವನ್ ರಾಮ್ 119ನೇ ಜನ್ಮ ದಿನೋತ್ಸವ

• ಮಲ್ಲಮ್ಮ ನುಡಿ ವಾರ್ತೆ ಕೊಟ್ಟೂರು



ತಾಲೂಕು ಆಡಳಿತ, ತಾಲೂಕು ಪಂಚಾಯಿತಿ, ಪಟ್ಟಣ ಪಂಚಾಯಿತಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಕೊಟ್ಟೂರು ಇವರ ಸಂಯುಕ್ತ ಆಶ್ರಯದಲ್ಲಿ ಡಾ.ಬಿ ಆರ್ ಅಂಬೇಡ್ಕರ್ ರವರ 135ನೇ ಜನ್ಮ ದಿನೋತ್ಸವ ಹಾಗೂ ಡಾ ಬಾಬು ಜಗಜೀವನ್ ರಾಮ್ ರವರ 119ನೇ ಜನ್ಮ ದಿನೋತ್ಸವ ಕಾರ್ಯಕ್ರಮವನ್ನು ಎಪಿಎಂಸಿ ಆವರಣದ ವೇದಿಕೆಯಲ್ಲಿ ಆಚರಿಸಲಾಯಿತು. ಕಾರ್ಯಕ್ರಮವನ್ನು ಅಧ್ಯಕ್ಷರು, ಕೊಟ್ಟೂರು ತಾಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಅನಿಲ್ ಹೊಸಮನಿ ಇವರು ಉದ್ಘಾಟಿಸಿದರು.

ಡಿಎಸ್ಎಸ್ ಮುಖಂಡರಾದ ತೆಗ್ಗಿನಕೇರಿ ಕೊಟ್ರೇಶ್ ಪ್ರಸ್ತಾವಿಕ ನುಡಿದರೆ, ಇನ್ನೋರ್ವ ಡಿಎಸ್ಎಸ್ ಮುಖಂಡರಾದ ಬದ್ದಿ ಮರಿಸ್ವಾಮಿ ಮಾತನಾಡಿದರು. ಕಲಬುರಗಿ ವಿಶ್ವವಿದ್ಯಾಲಯದ ವಿಶ್ರಾಂತ ಇತಿಹಾಸ ಪ್ರಾಧ್ಯಾಪಕರಾದ ಡಾ ಬಿ ಸಿ ಮಹಾಬಲೇಶ್ವರಪ್ಪ ಇವರು ವಿಶೇಷ ಉಪನ್ಯಾಸವನ್ನು ನೀಡಿದರು.

ಅಧ್ಯಕ್ಷತೆಯನ್ನು ತಹಶೀಲ್ದಾರರಾದ ಅಮರೇಶ್ ಜಿ ಕೆ ಇವರು ವಹಿಸಿ ನೆರವೇರಿಸಿದರು. ವೇದಿಕೆಯಲ್ಲಿ ತಾ ಪಂ ಇಓ ಡಾ.ಬಿ ಆನಂದ ಕುಮಾರ್, ಸಿಪಿಐ ಡಿ ದುರುಗಪ್ಪ, ತಾಲೂಕು ಅಂಬೇಡ್ಕರ್ ಸಂಘದ ಅಧ್ಯಕ್ಷ ಬಿ ದುರುಗಪ್ಪ, ತಾಲೂಕು ಬಾಬು ಜಗಜೀವನರಾಂ ಸಂಘದ ಅಧ್ಯಕ್ಷ ಟಿ ಹನುಮಂತಪ್ಪ ವಕೀಲರು, ಮುಖಂಡರಾದ ಕಂದಗಲ್ ಪರಶುರಾಮ, ಕೆಂಗರಾಜ, ಹೊಟ್ಟೇರ ಅಜ್ಜಯ್ಯ, ರೈತ ಮುಖಂಡ ಗುಡಿಯಾರ ಮಲ್ಲಿಕಾರ್ಜುನ, ಬಿ ಶಿವರಾಜ, ಅಮರೇಶ, ಹಿರಿಯ ಪಶುವೈದ್ಯಾಧಿಕಾರಿಗಳಾದ ಡಾ.ಚಂದ್ರನಾಯ್ಕ, ಎಪಿಎಂಸಿ ಕಾರ್ಯದರ್ಶಿ ಈರಣ್ಣ, ನರೇಗ ಯೋಜನೆಯ ಎಡಿ ಹೆಚ್.ವಿಜಯಕುಮಾರ್, ಪಿಎಸ್‌ಐ ಗೀತಾಂಜಲಿ ಸಿಂಧೆ, ತಾಲೂಕು ಪಂಚಮಸಾಲಿ ಸಂಘದ ಅಧ್ಯಕ್ಷ ಚಾಪಿ ಚಂದ್ರಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಯೋಗೀಶ್ವರ ದಿನ್ನೆ, ಶಿಕ್ಷಣ ಇಲಾಖೆಯ ಇಸಿಓ ನಿಂಗಪ್ಪ, ರವಿಕುಮಾರ್, ಕಸಾಪ ಅಧ್ಯಕ್ಷ ದೇವರಮನಿ ಕೊಟ್ರೇಶ್, ಚಲವಾದಿ ಸಮಾಜದ ಮುಖಂಡ ಮಂಜುನಾಥ, ಮಿಲ್ಟ್ರಿ ಅಜ್ಜಪ್ಪ, ಸಮಾಜ ಕಲ್ಯಾಣ ಇಲಾಖೆಯ ಸಿಬ್ಬಂದಿ ಸದಾನಂದ, ವೀರೇಶ ತುಪ್ಪದ ಹಾಗೂ ಇತರರು ಇದ್ದರು. ಸಿ ಮ ಗುರುಬಸವರಾಜ ಸ್ವಾಗತಿಸಿದರೆ, ವೀರಭದ್ರಪ್ಪ ಶಿಕ್ಷಕರು ಕಾರ್ಯಕ್ರಮವನ್ನು ನಿರೂಪಿಸಿದರು.

ಕಾರ್ಯಕ್ರಮದಲ್ಲಿ ದ್ವಿತೀಯ ಪಿಯುಸಿಯಲ್ಲಿ ರಾಜ್ಯಕ್ಕೆ ಪ್ರಥಮ ರ್ಯಾಂಕ್ ಪಡೆದ ಕುಮಾರಿ ಡಿ ಎಂ ಅರ್ಚನಾ, ಯೋಗಪಟು ಬಂಜಾರ ನಾಗರಾಜ, ಪತ್ರಿಕಾ ವಿತರಕ ಉತ್ತಂಗಿ ಕೊಟ್ರೇಶ್, ನಿವೃತ್ತ ಮುಖ್ಯಗುರುಗಳಾದ ಹೆಚ್ ಚೌಡಪ್ಪ, ಉಪನ್ಯಾಸಕರಾದ ನಾಗರಕಟ್ಟೆ ಬಸವರಾಜ, ವಕೀಲರಾಧ ಡಿ ಎಲ್ ಲಿಂಗರಾಜು, ಶಿಕ್ಷಕರಾದ ಮುತ್ತೇಶ್ ಬಿ, ಪತ್ರಕರ್ತರಾದ ಉಜ್ಜಿನಿ ರುದ್ರಪ್ಪ, ದಲಿತ ಯುವ ಮುಖಂಡ ಬಿ ಪರಶುರಾಮ, ವಾದ್ಯ ಕಲಾವಿಕದರಾದ ಸಿ ಕೆ ಪ್ರಕಾಶ್ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದ ನಂತರ ಅದ್ದೂರಿಯಾಗಿ ಮೆರವಣಿಗೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

# ಯುವಕರು ಕ್ರೀಡೆಯಲ್ಲಿ ಹೆಚ್ಚು ಆಸಕ್ತಿ ವಹಿಸಲಿ: ಸೋಮಶೇಖರ

• ಮಲ್ಲಮ್ಮ ನುಡಿವಾರ್ತೆ, ಕೊಪ್ಪಳ



ಯುವಕರು ಹೆಚ್ಚು ಹೆಚ್ಚು ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಂಡು ತಮ್ಮ ಮಾನಸಿಕ ಹಾಗೂ ದೈಹಿಕ ಆರೋಗ್ಯವನ್ನು ಸದೃಢಪಡಿಸಿಕೊಳ್ಳಬೇಕೆಂದು ಕಾಂಗ್ರೆಸ್ ಪಕ್ಷದ ಯುವ ಧುರೀಣರು, ಸಮಾಜ ಸೇವಕರೂ ಆದ ಕೆ.ನಾಗರಾಜ ಅವರ ಪುತ್ರ ಕೆ.ಸೋಮಶೇಖರ ಅವರು ಕರೆ ನೀಡಿದರು.

ಶಹಪುರ ಗ್ರಾಮದಲ್ಲಿ ಗೋಂಧಳಿ ಸಮಾಜದ ಯುವಕರ ಪಡೆ ಆಯೋಜಿಸಿದ್ದ ಎಸ್.ಪಿ.ಎಲ್.-ಶಹಪುರ ಪ್ರೀಮಿಯರ್ ಲೀಗ್-2026 ರ ಕ್ರಿಕೆಟ್ ಪಂದ್ಯಾವಳಿಗಾಗಿ ಆಕ್ಷನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, 12 ತಂಡಗಳ ಕ್ರೀಡಾಪಟುಗಳಿಗೆ ಪ್ರೋತ್ಸಾಹವಾಗಿ ಜೆರ್ಸಿ ನೀಡಿದರು. ಯುವಕ, ಯುವತಿಯರು ಕೇವಲ ಕ್ರಿಕೆಟ್ ಮಾತ್ರವಲ್ಲ ಕಬ್ಬಡ್ಡಿ, ವಾಲಿಬಾಲ್, ಖೋಖೋ, ಶೆಟಲ್ ಕಾಕ್ ಯಾವುದೇ ಕ್ರೀಡೆಯಲ್ಲಿ ತಮ್ಮನ್ನು ತೊಡಗಿಸಿಕೊಂಡರೆ ಅಗತ್ಯ ನೆರವು ನೀಡುವುದಾಗಿ ಹೇಳಿದರು. ಭವಿಷ್ಯದಲ್ಲಿ ಕೊಪ್ಪಳ ಜಿಲ್ಲೆಯ ಎಲ್ಲ ಕ್ರೀಡಾಪಟುಗಳಿಗೆ ಉತ್ತೇಜನಾತ್ಮಕವಾಗಿ ಬೆಂಗಳೂರಿನ ಚಿನ್ನಸ್ವಾಮಿ ಕ್ರೀಡಾಂಗಣ ಮಾದರಿಯಲ್ಲಿ ಜಿಲ್ಲಾ ಕೇಂದ್ರವಾದ ಕೊಪ್ಪಳ ನಗರದಲ್ಲಿ ಕ್ರೀಡಾ ಮೈದಾನ ನಿರ್ಮಿಸುವ ಕನಸು ಇದೆ ಎಂದು ಕ್ರೀಡೆಗೆ ತಮಗಿರುವ ಒಲವನ್ನು ವ್ಯಕ್ತಪಡಿಸಿದರು.

ಇದೇವೇಳೆ ಗೋಂಧಳಿ ಸಮಾಜದ ಅಧ್ಯಕ್ಷರಾದ ವೀರಣ್ಣ ಜೋಷಿ ಮತ್ತು ಎಲ್ಲ ಪದಾಧಿಕಾರಿಗಳು ಕೆ.ಸೋಮಶೇಖರ್ ಅವರಿಗೆ ಸನ್ಮಾನಿಸಿ ಗೌರವಿಸಿದರು. ಬಳಿಕ ತಂಡಗಳ ಆಕ್ಷನ್ ಪ್ರಕ್ರಿಯೆ ನಡೆಯಿತು. ಶಹಪುರ ಪ್ರೀಮಿಯರ್ ಲೀಗ್ - 2026 ನ ಉಸ್ತುವಾರಿಗಳಾದ ಅಭಿಷೇಕ್ ಎನ್.ಸಿಂಧೆ, ಪ್ರವೀಣ್ ಟಿ.ವಾಕೋಡೆ, ಸತೀಶ್ ಪಿ.ಗೋಗರೆ, ಮೇಘರಾಜ್ ಪಿ.ವಾಕೋಡೆ, ಸಂತೋಷ್ ಕೆ.ಗೋಗರೆ, ಉದಯ್ ಸಿಂಧೆ, ಮಹಾಂತೇಶ್, ಕೃಷ್ಣ ಮತ್ತು ಅಣ್ಣಪ್ಪ ಗೋಗರೆ ಅವರು ಈ ಕಾರ್ಯಕ್ರಮವನ್ನು ಆಯೋಜಿಸಿದ್ದರು.

ಕಾರ್ಯಕ್ರಮದಲ್ಲಿ ಗ್ರಾಮದ ಮುಖಂಡರಾದ ನಿಂಗಜ್ಜ ಚೌಧರಿ, ಗೋಂಧಳಿ ಸಮಾಜದ ಹಿರಿಯರಾದ ಕೋಳೂರಪ್ಪ ಗೋಗರೆ, ಮಾರ್ಕಂಡೆಪ್ಪ ಗೋಗರೆ, ಹಿರಿಯ ಧುರೀಣರಾದ ಎಸ್.ಎಚ್.

ಕಿನ್ನಾಳ್, ಪುಂಡಲೀಕಪ್ಪ ವಾಕೋಡೆ, ಮಲ್ಲೇಶ್ ಗೋಗರೆ, ಸುಭಾಷ್ಚಂದ್ರ ವಾಕೋಡೆ, ದೇವಣ್ಣ ಗೋಗರೆ, ಲಕ್ಷ □□ಣ ವಾಕೋಡೆ, ಪ್ರಾಚಾರ್ಯರಾದ ಡಾ.ದಯಾನಂದ್ ಕಿನ್ನಾಳ್, ರಮೇಶ್ ಸಿಂಧೆ, ಕೃಷ್ಣ ಭೋರಾತ್, ತುಕಾರಾಮ್ ವಾಕೋಡೆ, ಯಮುನಪ್ಪ ನಾಯ್ಕಲ್, ಬಸವರಾಜ ರೇಣಿಕೆ, ಮಂಜು ಕೆ.ಜೋಷಿ, ಪ್ರಭು ನಾಯ್ಕಲ್, ರವಿ ಕೃಷ್ಣ ನಾಯ್ಕಲ್ ಸೇರಿದಂತೆ ಗೋಂಧಳಿ ಸಮುದಾಯದ ಅನೇಕ ಹಿರಿಯರು,

ಯುವಕರು ಮತ್ತು ಕ್ರೀಡಾಭಿಮಾನಿಗಳು ಇದ್ದರು. ಕಾರ್ಯಕ್ರಮದ ನಿರ್ವಹಣೆಯನ್ನು ಪತ್ರಕರ್ತರಾದ ಮಲ್ಲಿಕಾರ್ಜುನ ವಿ.ಜೋಷಿ ಅವರು ನಡೆಸಿಕೊಟ್ಟರು.

# ಸರ್ವ ಸಮುದಾಯಕ್ಕೆ ಓಟಿನ ಹಕ್ಕು ನೀಡಿದವರು ಅಂಬೇಡ್ಕರ್: ರೆಡ್ಡಿ



• ಮಲ್ಲಮ್ಮ ನುಡಿ ವಾರ್ತೆ , ಬಳ್ಳಾರಿ

ಇಂದು ನಗರದ ಮುನಿಷಿಪಲ್ ಹೈಸ್ಕೂಲ್ ಮೈದಾನದಲ್ಲಿ ಹಮ್ಮಿಕೊಂಡಿದ್ದ ಅಂಬೇಡ್ಕರ್ ಜಯಂತಿ ಕಾರ್ಯಕ್ರಮದ ಉದ್ಘಾಟನೆ ನಗರ ಶಾಸಕ ಭರತ್ ರೆಡ್ಡಿಯಿಂದ ನಡೆಯಿತು.

ಸಮಾರಂಭದಲ್ಲಿ ಮಾತನಾಡಿ, ದೇಶದಲ್ಲಿ ನಾಲ್ಕು ವರ್ಗದವರಿಗೆ ಮಾತ್ರ ಓಟು ಮಾಡುವ ಹಕ್ಕು ಇತ್ತು. ಅದನ್ನು ಸರ್ವ ಸಮುದಾಯದ ಜನತೆಗೆ ಓಟಿನ ಹಕ್ಕು ದೊರೆಯುವಂತೆ ಮಾಡಿದವರು ಅಂಬೇಡ್ಕರ್ ಎಂದರು. ನಾವೆಲ್ಲ ಇಂದು ಆರ್ಥಿಕವಾಗಿ ಸ್ವತಂತ್ರರಾಗಿ ಬದಕಲು ಅಂಬೇಡ್ಕರ್ ಅವರೇ ಕಾರಣ ಎಂದರು.

ಮೇಯರ್ ಗಾದೆಪ್ಪ ಮಾತನಾಡಿ, ನಮ್ಮೆಲ್ಲರಿಗೂ ಇಂದು ಪ್ರಜಾಪಭುತ್ವದ ಸ್ವಾತಂತ್ರ್ಯ ದೊರೆಯಲು ಕಾರಣ ಅಂಬೇಡ್ಕರ್ ಎಂದರು.

ಸಂವಿಧಾನದ ಪೂರ್ವ ಪೀಠಿಕೆಯನ್ನು ಡಿ.ಸಿ.ನಾಗೇಂದ್ರ ಪ್ರಸಾದ್ ಭೋಧಿಸಿದರು. ಪ್ರೊ.ಚಿನ್ನಸ್ವಾಮಿ ಸೋಸಲೆ ಇವರಿಂದ ಅಂಬೇಡ್ಕರ್ ಕುರಿತು ವಿಶೇಷ ಉಪನ್ಯಾಸ ನೀಡಿ.

ನಾವುಗಳು ಇಂದಿಗೂ ಸಂವಿಧಾನ ಹೇಳಿದೆ ಎಂಬುದರ ಅರಿವು ಇಲ್ಲ. ಅದಕ್ಕಾಗಿ ಇನ್ನು ಸಮ ಸಮಾಜ ಕಾಣಲು ಸಾಧ್ಯವಾಗಿಲ್ಲ. ಮೊದಲು ನಾವು ಸಂವಿಧಾನದ ಬಗ್ಗೆ ನಾವೆಲ್ಲ ಅರಿತುಕೊಳ್ಳಬೇಕು. ಆ ಕೆಲಸ ದಲಿತ ಸಮೂಹದಿಂದ ಆಗಬೇಕು ಎಂದರು.

ಸಮಾರಂಭದಲ್ಲಿ ಜಿಲ್ಲಾ ಪಂಚಾಯ್ತಿ ಮಾಜಿ ಸದಸ್ಯ ಎ.ಮಾನಯ್ಯ, ಪಾಲಿಕೆ ಸದಸ್ಯೆ ಎಂ.ರಾಜೇಶ್ ಸುಬ್ಬರಾಯ್ಡು, ದಲಿತ ಮುಖಂಡರುಗಳಾದ ಎನ್.ಡಿ.ವೆಂಕಮ್ಮ, ನರಸಪ್ಪ ಛಲವಾದಿ, ಹೆಚ್.ಸಿದ್ದೇಶ್, ಸಿ.ಸೋಮಶೇಖರ್, ಗಂಗಾಧರ, ಮಾರೆಣ್ಣ, ತಿಪ್ಪೆಸ್ವಾಮಿ, ಡಾ.ಪಿ.ಎಸ್.ಗಾದಿಲಿಂಗನಗೌಡ, ರಾಮುನಾಯ್ಕ, ಎರಕುಲಸ್ವಾಮಿ, ಅರುಣ್ ಕುಮಾರ್, ಡಾ.ಸುಮನ್ ಡಿ.ಪನ್ನೇಕರ್, ಜಿಪಂ ಸಿಈಓ ಮಹಮ್ಮದ್ ಹ್ಯಾರೀಸ್ ಸುಮೇರ್, ಎಡಿಸಿ ಮಹಮ್ಮದ್ ಝುಬೇರ, ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ ಮೊದಲಾದವರು ಇದ್ದರು.

ಈ ವೇಳೆ ಫಲಾನುಭವಿಗಳಿಗೆ ಸರ್ಕಾರದ ಯೋಜನೆಗಳ ಚೆಕ್, ಸಾಮಾಗ್ರಿಗಳನ್ನು ವಿತರಿಸಲಾಯ್ತು. ಡಿ.ಕಗ್ಗಲ್ಲು ದೊಡ್ಡ ಬಸವ ಗವಾಯಿ ತಂಡದಿಂದ ಪ್ರಾರ್ಥನೆ, ಸಮಾಜ ಕಲ್ಯಾಣ ಅಧಿಕಾರಿಯಿಂದ ಸ್ವಾಗತ ನಡೆಯಿತು.



ಬಳ್ಳಾರಿ.ಸಂಘದ ಕಛೇರಿಯಲ್ಲಿ ಅಖಿಲ ಕರ್ನಾಟಕ ಕುಳುವ ಮಹಾಸಂಘ (ರಿ ) ಬೆಂಗಳೂರು, ಬಳ್ಳಾರಿ ಜಿಲ್ಲಾ ಘಟಕ ವತಿಯಿಂದ ಡಾ ಬಿ ಆರ್ ಅಂಬೇಡ್ಕರ ರವರ 135ನೇ ಜಯಂತಿಯನ್ನು ಆಚರಿಸಲಾಯಿತು. ಈ ಜಯಂತೋತ್ಸವದಲ್ಲಿ ರಾಜ್ಯ ಖಜಾಂಚಿಗಳಾದ ರಮಣಪ್ಪ ಭಜಂತ್ರಿ ಜಿಲ್ಲಾ ಸಲಹೆ ಸಮಿತಿ ಸದಸ್ಯರಾದ ಹೆಚ್ ಕೆ ಹೆಚ್ ಹನುಮಂತ, ಸಂತೋಷ ಶಾಂತವೀರಪ್ಪ, ಶಿವಪ್ಪ, ಜಿಲ್ಲಾ ಘಟಕದ ಅಧ್ಯಕ್ಷರಾದ ಕೆ ಮಲ್ಲೇಶ ಕಾರ್ಯದರ್ಶಿ ಕೆ ರಂಗಸ್ವಾಮಿ ಪದಾಧಿಕಾರಿಗಳು, ನಗರ ಘಟಕದ ಪದಾಧಿಕಾರಿಗಳು, ಬಳ್ಳಾರಿ ಗ್ರಾಮಾಂತರ ಘಟಕದ ಪದಾಧಿಕಾರಿಗಳು ಬಳ್ಳಾರಿ ಜಿಲ್ಲೆಯ ಸಮಸ್ತ ಮುಖಂಡರು ಎಲ್ಲರೂ ಭಾಗವಹಿಸಿ ಕಾರ್ಯಕ್ರಮ ಯಶ್ವಸಿಗಳಿಸದರು.

# ಜೆಡಿಎಸ್ ಕಚೆರಿಯಲ್ಲಿ ಬಿ.ಆರ್. ಅಂಬೇಡ್ಕರ್‌ಅವರ 135ನೇ ಜಯಂತ್ಯುತ್ಸವ




• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ಜೆಡಿಎಸ್ ಜಿಲ್ಲಾಧ್ಯಕ್ಷ ಮೀನಳ್ಳಿ ತಾಯಣ್ಣ ರವರ ನೇತೃತ್ವದಲ್ಲಿ ಜೆಡಿಎಸ್ ಕಛೇರಿಯಲ್ಲಿ ಸಂವಿಧಾನ ಶಿಲ್ಪಿ, ಭಾರತರತ್ನ ಡಾ॥ ಬಿ.ಆರ್. ಅಂಬೇಡ್ಕರ್‌ರವರ 135ನೇ ಜಯಂತೋತ್ಸವವನ್ನು ಸಡಗರ–ಸಂಭ್ರಮಗಳಿಂದ ಆಚರಿಸಲಾಯಿತು. ಜೆಡಿಎಸ್ ಕಛೇರಿಯಲ್ಲಿ

ಡಾ ಬಿ.ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಲಾಯಿತು. ಈ ಸಂದರ್ಭದಲ್ಲಿ ಮಾತನಾಡಿದ ಮೀನಳ್ಳಿ ತಾಯಣ್ಣ ಅವರು, ಡಾ॥ಅಂಬೇಡ್ಕರ್ ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಪಾಲಿಸುವಂತೆ ಹಾಗೂ ಬಾಬಾ ಸಾಹೇಬ್ ಅವರು ಹಾಕಿಕೊಟ್ಟ ಮಾರ್ಗದಲ್ಲಿ ನಡೆಯಬೇಕು, ಅವರ ಸಂದೇಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ತದನಂತರ ಜೆಡಿಎಸ್ ಜಿಲ್ಲಾಧ್ಯಕ್ಷರಾದ ಶ್ರೀ ಮೀನಳ್ಳಿ ತಾಯಣ್ಣ ರವರು, ಪಕ್ಷದ ಮುಖಂಡರು, ಕಾರ್ಯಕರ್ತರು ನಗರದ ಹೊಸಪೇಟೆ ರಸ್ತೆಯಲ್ಲಿನ ಡಾ ಅಂಬೇಡ್ಕರ್ ಭವನದಲ್ಲಿ ಇರುವ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಬಳ್ಳಾರಿ ನಗರ ಘಟಕದ ಅಧ್ಯಕ್ಷರಾದ ಹೊನ್ನೂರು ಸ್ವಾಮಿ (ವಂಡ್ರಿ), ಅಶೋಕ ಸಂಗನಕಲ್ಲು , ಪರಿಶಿಷ್ಟ ಪಂಗಡದ ಅಧ್ಯಕ್ಷರಾದ ವಸಂತ್ ಕುಮಾರ್ ,ಕಿರಣ್ ಕುಮಾರ್, ಜಾವೀದ್, ಹೊನ್ನೂರು ಅಲಿ, ಮಹಿಳಾ ಮುಖಂಡರುಗಳಾದ ಜಮೀಲಾ ಬೇಗಂ,ಶಮೀಮ್ ಬಾನು ಹಾಗೂ ಇತರೇ ಅನೇಕರು ಉಪಸ್ಥಿತರಿದ್ದರು.

# ಕರ್ನಾಟಕ ದಲಿತ ಸಂಘರ್ಷ ಸಮಿತಿಯಿಂದ ಅಂಬೇಡ್ಕರ್ ಜಯಂತಿ ಆಚರಣೆ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ನಗರದ ಫಸ್ಟ್‌ಗೇಟ್ ಬಳಿಯಿರುವ ಬಾಬಾಸಾಹೇಬ್ ಅಂಬೇಡ್ಕರ್ ಪುತ್ಥಳಿಗೆ ಲಿಡ್ಕರ್ ಅಧ್ಯಕ್ಷ ಮುಂಡ್ರಿಗಿ ನಾಗರಾಜ್ ಪುಷ್ಪನಮನ ಸಲ್ಲಿಸುವ ಮೂಲಕ ಅಂಬೇಡ್ಕರ್ ಜಯಂತಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಸಂಚಾಲಕರಾದ ಜಿ ಗೋವರ್ಧನ, ವೆಂಕಟೇಶ್, ನಟರಾಜ, ಸಣ್ಣ ನಾಗರಾಜ, ಫೋಟೊರಾಜ, ಗುರುದೇವ, ಪೆದ್ದ ಎರಿಸ್ವಾಮಿ, ಹೊನ್ನೇಶ್ ಬಿ ಗೋನಾಳ್, ಶ್ರೀನಿವಾಸ್ ಎಸ್, ಅರುಣ್ ಕುಮಾರ್ ಮುಂಡ್ರಿಗಿ, ಹುಲುಗೇಶ್ ಹೆಗಡೆ, ನಾಗರಾಜ್ ಹೊಗಡೆ, ಪ್ರಹ್ಲಾದ್ ತೆಗ್ಗಿನಬೂದಿಹಾಳ್, ಮಹೇಂದ್ರ ಮುಂತಾದವರು ಉಪಸ್ಥಿತರಿದ್ದರು.

# ಸಂವಿದಾನ ಶಿಲ್ಪಿ ಅಂಬೇಡ್ಕರ್ ಜಯಂತಿಯಲ್ಲಿ ಪ್ಲಾಸ್ಟಿಕ್ ಹೂ ಬಳಕೆಗೆ ಖಂಡನೆ



• ಮಲ್ಲಮ್ಮ ನುಡಿ ವಾರ್ತೆ, ಬಳ್ಳಾರಿ

ನಗರದ ಅಂಬೇಡ್ಕರ್ ಭವನದಲ್ಲಿ ಸಂವಿಧಾನದ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಈ ವೇಳೆ ಹೋರಾಟಗಾರ ಕಟ್ಟೆ ಸ್ವಾಮಿ ಅವರು ಆಗಮಿಸಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿ. ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರ ವಿರುದ್ಧ ತೀವ್ರ ಬೇಸರ ವ್ಯಕ್ತಪಡಿಸಿ ಆಕ್ರೋಶ ಹೊರಹಾಕಿದರು. ಮಹಾನಗರ ಪಾಲಿಕೆಯ ಪ್ಲಾಸ್ಟಿಕ್ ಬಳಕೆ ನಿಷೇಧ ಇದ್ದರೂ ಕೂಡ ಅಂಬೇಡ್ಕರ್ ಅವರ ಪುತ್ಥಳಿಯ ಸುತ್ತ ಹೂವಿನ ಅಲಂಕಾರ

ಬದಲು ಪ್ಲಾಸ್ಟಿಕ್ ಹೂಗಳನ್ನು ಬಳಸಿರುವುದನ್ನು ಅವರು ಖಂಡಿಸಿದರು.

ಇಡೀ ದೇಶಕ್ಕೆ ಮಾದರಿಯಾದ ಮಹಾನ್ ವ್ಯಕ್ತಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯಂತಹ ಮಹತ್ವದ ದಿನದಲ್ಲಿ ಈ ರೀತಿಯ ನಿರ್ಲಕ್ಷ್ಯ ತೋರಿರುವುದು ವಿಷಾದನೀಯ ಎಂದು ಹೇಳಿದರು. ಮುಂದಿನ ದಿನಗಳಲ್ಲಿ ಮಹಾನಗರ ಪಾಲಿಕೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಡಳಿತಕ್ಕೆ ಆಕ್ರೋಶಭರಿತ ಮನವಿ ಸಲ್ಲಿಸಿದರು.

# ಅಂಬೇಡ್ಕರ್ ಅವರ ಕಾಲದಲ್ಲಿದ್ದ ತಾರತಮ್ಯ ಆಧುನಿಕತೆಯಲ್ಲು ಜೀವಂತ: ದಿಲೀಪ್



• ಮಲ್ಲಮ್ಮ ನುಡಿ ವಾರ್ತೆ, ಪಿರಿಯಾಪಟ್ಟಣ

ಅಂಬೇಡ್ಕರ್ ರವರ ಕಾಲದಲ್ಲಿದ್ದ ತಾರತಮ್ಯ ಆಧುನಿಕತೆಯ ತಕ್ಕಂತೆ ಈಗಲೂ ಸಹ ಜೀವಂತವಾಗಿದೆ ಎಂದು ಸಂಪನ್ಮೂಲ ವ್ಯಕ್ತಿ ಡಾ ದಿಲೀಪ್ ನರಸಯ್ಯ ಎಂ ಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದರು.

ಪಟ್ಟಣದ ಆಡಳಿತ ಭವನದಲ್ಲಿ ನಾಡ ಹಬ್ಬಗಳ ಆಚರಣ ಸಮಿತಿ ವತಿಯಿಂದ ಮಂಗಳವಾರ ಏರ್ಪಡಿಸಿದ್ದ ಭಾರತ ರತ್ನ ಬಿ ಆರ್ ಅಂಬೇಡ್ಕರ್ ಅವರ 135 ನೇ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಮಾತನಾಡಿದರು.

ಡಾ ಬಿ ಆರ್ ಅಂಬೇಡ್ಕರ್ ರವರು ವಿಶ್ವಮನುಕುಲವೇ ಜ್ಞಾನದ ಬೆಳಕು ಎಂದು ಒಪ್ಪಿಕೊಂಡಿರುವಾಗ ದೇಶದಲ್ಲಿರುವ ಕೆಲವರು ಜಾತಿಗೆ ಹೋಲಿಸುತ್ತಿರುವುದು ಸರಿಯಲ್ಲ ಎಂದು ತಿಳಿಸಿದರು.

ಅವರು ಸಂವಿಧಾನದ ಮೂಲಕ ಎಲ್ಲಾ ರೀತಿಯಲ್ಲೂ ಅವಕಾಶದ ಬೃಹತ್ ಗೋಪುರವನ್ನು ನಿರ್ಮಿಸಿ ಹೋಗಿದ್ದರು ಒಳಗೆ ಹೋಗಿ ಅನುಭವಿಸಲು ಮುಂದಾಗದೆ ಬೇರೆ ಬೇರೆ ಆಲೋಚನೆ ಮೂಲಕ ಕಳಂಕ ತರುವ ಕೆಲಸ ಮಾಡಲಾಗುತ್ತಿದೆ ಎಂದು ದೂರಿದರು.

ಸಮಾನತೆಯನ್ನು ಸಾರಿ ಹೋಗಿರುವ ಅವರಿಗೆ ಬೇರೆ ಬೇರೆ ರೀತಿಯಲ್ಲಿ ಅರ್ಥೈಸುವುದು ಸರಿಯಲ್ಲ ಎಲ್ಲಾ ಜಾತಿ ವರ್ಗದವರು ಸಹ ಭಾದ್ರತ್ವದಿಂದ ನಡೆದು ದೇಶ ಬದುಕನ್ನು ಕಟ್ಟಿಕೊಳ್ಳುವ ಕೆಲಸವನ್ನು ಎಲ್ಲರೂ ಮಾಡಬೇಕಿದೆ ಎಂದು ಸಲಹೆ ನೀಡಿದರು.

ಮಾಜಿ ತಾ ಪಂ ಸಾಯಿ ಸಮಿತಿ ಅಧ್ಯಕ್ಷ ಟಿ ಈರಯ್ಯ ಮಾತನಾಡಿ ಸಂವಿಧಾನದ ಅಡಿಯಲ್ಲಿ ಮತ ಪಡೆದು ವಿಧಾನಸಭೆ ಸೇರಿದ ಜನಪ್ರತಿನಿಧಿಗಳು ತಮ್ಮ ಇಬ್ಬಂತಿ ತನದಿಂದ ವಡೆದಾಳುವ ನೀತಿಯಿಂದ ಒಳ ಮೀಸಲಾತಿಯನ್ನು ಮುಂದಿಟ್ಟುಕೊಂಡು ಅಣ್ಣತಮ್ಮಂದಿರಂತೆ ಇದ್ದವರನ್ನು ಎರಡು ಭಾಗವಾಗಿ ಒಡೆದು ಚಿದ್ರಗೊಳಿಸಿದ್ದಾರೆ ಎಂದು ಆರೋಪಿಸಿದರು.

ಅಲ್ಲದೆ ಆಡಳಿತ ಮತ್ತು ವಿರೋಧ ಪಕ್ಷಗಳು ಎ□□□ಪಿ ಮತ್ತು ಡಿಎಸ್ಪಿ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಿಕೊಂಡು ಈ ಜನಾಂಗವನ್ನು ಅದು ಪತನಕ್ಕೆ ತಳ್ಳಿರುವುದಲ್ಲದೆ ಈ ಬಗ್ಗೆ ಕಾನೂನು ಕ್ರಮವಾಗಿಲ್ಲ ಏಕೆ ಎಂದು ಪ್ರಶ್ನಿಸಬೇಕಾದ ವಿರೋಧ ಪಕ್ಷಗಳು ಹಸಮರ್ಥವಾಗಿವೆ ಎಂದು ಆರೂಪಿಸಿದರು .

ವಿರೋಧ ಪಕ್ಷ ಮತ್ತು ಆಡಳಿತ ಪಕ್ಷದ ನಡುವೆ ಹೊಂದಾಣಿಕೆ ರಾಜಕಾರಣವನ್ನು ಬಿಟ್ಟರೆ ಕಟ್ಟೆ ಕಡೆಯ ವ್ಯಕ್ತಿಯನ್ನು ರಕ್ಷಿಸುವ ಯಾವ ಪ್ರಯತ್ನ ಮಾಡುತ್ತಿಲ್ಲ ಎಂದು ತಿಳಿಸಿದರು.

ಇರುವ ಸಾವಿರಾರು ಸಂಘಟನೆಗಳನ್ನು ಬಿಟ್ಟು ಎಲ್ಲರೂ ಒಂದೇ ಸಂಘಟನೆಯ ಹೆಸರಿನೊಂದಿಗೆ ತಾಲೂಕಿನಲ್ಲಿ ಮುಂದುವರಿಯೋಣ ಈ ಮೂಲಕ ಬಾಬಾ ಸಾಹೇಬರಿಗೆ ಗೌರವ ಸಲ್ಲಿಸೋಣ ಎಂದು ಸಲಹೆ ನೀಡಿದರು. ತಾ ತಹಶೀಲ್ದಾರ್ ಜಿ ನಿಸರ್ಗ ಪ್ರಿಯ ಮಾತನಾಡಿ ಶಿಕ್ಷಣಕ್ಕೆ ಹಿನ್ನಡೆ ಆಗುತ್ತಿರುವ ಮೂಲಭೂತ ಸೌಲಭ್ಯಗಳ ಕೊರತೆಯನ್ನು ನೀಗಿಸುವ ಬೇಡಿಕೆಗಳು ಜನರಿಂದ ನಿರೀಕ್ಷಿಸುವುದು ಬಹಳಷ್ಟು ವಿರಳವಾಗಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಮೈಸೂರು ಪೇಂಟ್ ಮತ್ತು ವಾರ್ನಿಸ್ ನಿಗಮದ ಅಧ್ಯಕ್ಷ ಎಚ್ ಡಿ ಗಣೇಶ್ ಮಾತನಾಡಿ ಪ್ರಪಂಚವೇ ಮೆಚ್ಚುವಂತಹ ಸಂವಿಧಾನವನ್ನು ನೀಡಿ ಎಲ್ಲರೂ ಒಂದೇ ಕುಟುಂಬದಂತೆ ಬಾಳುವಂತಹ ಸಂದೇಶ ಸಾರಿರುವ ಅಂಬೇಡ್ಕರ್ ರವರಿಗೆ ಎಲ್ಲರೂ ಗೌರವ ಸಲ್ಲಿಸೋಣ ಎಂದರು.

ಮಾಜಿ ತಾಪಂ ಸದಸ್ಯ ಎಸ್ ರಾಮು ಮಾತನಾಡಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಎನ್ ಬಿ ಚಂದ್ರಶೇಖರ್. ತಾಪಂ ಕಾರ್ಯ ನಿರ್ವಾಹಕ ಅಧಿಕಾರಿ ಡಿಬಿ ಸುನಿಲ್ ಕುಮಾರ್. ತಾ ಹಿಂದುಳಿದ ವರ್ಗಗಳ ಅಭಿವೃದ್ಧಿ ಅಧಿಕಾರಿ ಕೃಷ್ಣೇಗೌಡ. ಕ್ಷೇತ್ರ ಶಿಕ್ಷಣಾಧಿಕಾರಿ ರವಿ ಪ್ರಸನ್ನ. ದಲಿತ ಮುಖಂಡರಾದ ಸಿ ತಮ್ಮಣ್ಣಯ್ಯ. ಸೀಗೂರು ವಿಜಯ್ ಕುಮಾರ್. ಸಿಜಿ ರವಿ. ಪಿ ಮಹದೇವ್. ಪಿ ಪಿ ಮಹದೇವ್. ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಮತ್ತು ವಿವಿಧ ಸಂಘ ಸಂಸ್ಥೆಯ ಕಾರ್ಯಕರ್ತರು ಹಾಜರಿದ್ದರು.

# ಪ್ಯಾಷನ್ ಡಿಸೈನಿಂಗ್ ಟೆಲರ್ ತರಬೇತಿಗೆ ಅರ್ಜಿ ಆಹ್ವಾನ

• ಮಲ್ಲಮ್ಮ ನುಡಿ ವಾರ್ತೆ ,ರಾಯಚೂರು

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಹಾಗೂ ಕರ್ನಾಟಕ ಉದ್ಯಮಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಸ್ವ–ಉದ್ಯೋಗವನ್ನು ಸ್ಥಾಪಿಸಲು ಆಸಕ್ತ ಪರಿಶಿಷ್ಟ ಪಂಗಡದ ಮಹಿಳೆಯರಿಗೆ ಉಚಿತವಾಗಿ 4 ವಾರಗಳ ಪ್ಯಾಷನ್ ಡಿಸೈನಿಂಗ್ ಟೆಲರಿಂಗ್ ವಲಯಾಧಾರಿತ ಉದ್ಯಮಶೀಲತಾ ಅಭಿವೃದ್ಧಿ ತರಬೇತಿಗೆ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿ ಕಾರ್ಯಕ್ರಮವು ರಾಯಚೂರು ಹಾಗೂ ಮಾನವಿಯಲ್ಲಿ ಹಮ್ಮಿಕೊಳ್ಳಲಾಗಿದೆ. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಉದ್ಯಮಶೀಲತೆಯ ಗುಣಲಕ್ಷಣಗಳು, ಸ್ವಂತ ಉದ್ಯೋಗ ಸ್ಥಾಪಿಸಲು ಸರ್ಕಾರದ ಯೋಜನೆಗಳು, ಬ್ಯಾಂಕಿನ ವ್ಯವಹಾರ ಮತ್ತು ಸಾಲ ಸೌಲಭ್ಯಗಳ ಮಾಹಿತಿ ಹಾಗೂ ಸ್ವ–ಯಂ ಉದ್ಯಮಗಳನ್ನು ಸ್ಥಾಪಿಸಲು ಇತ್ಯಾದಿ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು.

ರಾಯಚೂರು ಜಿಲ್ಲೆಯ ಆಸಕ್ತ ಪರಿಶಿಷ್ಟ ಪಂಗಡದ ಮಹಿಳಾ ಅಭ್ಯರ್ಥಿಗಳು 18 ವರ್ಷ ದಿಂದ 35 ವರ್ಷ ವಯಸ್ಸಿನವರಾಗಿರಬೇಕು. ಕನಿಷ್ಠ ಹತ್ತನೇ ತರಗತಿ ಪಾಸಾಗಿರಬೇಕು. ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಸಕ್ತರು ಏಪ್ರಿಲ್ 17ರೊಳಗಾಗಿ ಮೊಬೈಲ್ ಸಂಖ್ಯೆ: 9986600631 ಅಥವಾ 7899881410ಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬೇಕು. ಅಥವಾ ಜಂಟಿ ನಿರ್ದೇಶಕರು, ಸಿಡಾಕ್, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ, ನವೀನ ಆಸ್ಪತ್ರೆ ಪಕ್ಕದಲ್ಲಿ, ರಾಯಚೂರು ಇಲ್ಲಿಗೆ ಬಂದು ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿನಿಯರಿಗೆ ಸನ್ಮಾನ

• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ಪಟ್ಟಣದಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಸಮಾರಂಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ವಿದ್ಯಾರ್ಥಿನಿಯರು ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಇಲಾಖೆಯ ನಿರ್ದೇಶಕಿ ಮಂಜುಳಾ ಹಿರೇಮನಿ, ತಹಶೀಲದಾರ್ ವಾಯ್. ಎಸ್ ಸೋಮನಕಟ್ಟಿ, ತಾಪಂ ಇಓ ವೆಂಕಟೇಶ ವಂದಾಲ,

ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಪುರಸಭೆ ಮುಖ್ಯಾಧಿಕಾರಿ ವಿದ್ಯಾಧರ ಎಸ್ ಕಲಾದಗಿ, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮೈಬೂಬ್ ಲಾ ನಾಯ್ಕೋಡಿ, ಡಾ. ರೂಪಾ ಜೋಗಳೇಕರ ಹಾಜರಿದ್ದರು.



# ಮನಗೂಳಿ ಪಪಂನಲ್ಲಿ ಅಂಬೇಡ್ಕರ್ ಜನ್ಮ ದಿನಾಚರಣೆ



• ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ

ತಾಲೂಕಿನ ಮನಗೂಳಿ ಪಟ್ಟಣ ಪಂಚಾಯತ್ ಸಭಾಭವನದಲ್ಲಿ ಮಂಗಳವಾರ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ ಜನ್ಮ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿತ್ತು. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಅನೇಕರು ಮಾತನಾಡಿದರು.

ಈ ಸಂದರ್ಭದಲ್ಲಿ ಮುಖ್ಯಾಧಿಕಾರಿ ನಿಖಿಲ್ ಗೌಡ ಪಾಟೀಲ ಸೇರಿದಂತೆ ಪಪಂ ಸದಸ್ಯರು ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು.

## ಎನ್.ಎಸ್.ಎಸ್ ಶಿಬಿರದಿಂದ ವಿದ್ಯಾರ್ಥಿಗಳಲ್ಲಿ ವ್ಯಕ್ತಿತ್ವ ವಿಕಸನ: ಗಾಳಿ



• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರಗಳು ವಿದ್ಯಾರ್ಥಿಗಳಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸುವುದರೊಂದಿಗೆ ವ್ಯಕ್ತಿತ್ವ ವಿಕಸನಗೊಳಿಸುತ್ತವೆ ಎಂದು ಪ್ರಾಂಶುಪಾಲ ಡಾ.ಅರುಣಕುಮಾರ ಗಾಳಿ ಹೇಳಿದರು.

ಸಮೀಪದ ಮುಚಖಂಡಿ ಗ್ರಾಮದ ವೀರಭದ್ರೇಶ್ವರ ದೇವಸ್ಥಾನದ ಸಭಾ ಮಂಟಪದಲ್ಲಿ ಸೋಮವಾರ ಪ್ರಾರಂಭವಾದ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಷ್ಟ್ರೀಯ ಸೇವಾ ಯೋಜನೆ ಘಟಕದ ವಾರ್ಷಿಕ ವಿಶೇಷ ಶಿಬಿರದ ಉದ್ಘಾಟನಾ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಎನ್.ಎಸ್.ಎಸ್. ಶಿಬಿರಗಳು ವಿದ್ಯಾರ್ಥಿಗಳಲ್ಲಿ ಸೇವಾ ಮನೋಭಾವ ಬೆಳೆಸುವ ಮೂಲಕ ಅವರಲ್ಲಿ ಸಮಯ ಪಾಲನೆ, ಶಿಸ್ತು, ಪ್ರಾಮಾಣಿಕತೆ ಮತ್ತು ಸಾಮಾಜಿಕ ಮೌಲ್ಯಗಳನ್ನು ಬೆಳೆಸುತ್ತವೆ ಎಂದು ಅವರು ಹೇಳಿದರು.

ಜಿಲ್ಲಾ ಪಿಡಿಒ ಸಂಘದ ಅಧ್ಯಕ್ಷ ಸಿದ್ಧಾರ್ಥ ಗೋಠೆ ಸಸಿಗೆ ನೀರುಣಿಸಿ ಶಿಬಿರ ಉದ್ಘಾಟಿಸಿ ಮಾತನಾಡಿ, ವಿದ್ಯಾರ್ಥಿಗಳು ಸೇವಾ ಮನೋಭಾವ, ಗ್ರಾಮೀಣ ಪರಿಸರದ ದೇಶಿಯ ಸಾಂಸ್ಕೃತಿಕತೆಯನ್ನು ತಿಳಿದುಕೊಳ್ಳಬೇಕು. ಏಳು ದಿನ ನಡೆಯುವ ಶಿಬಿರ ಪ್ರತಿಭೆಯ ಸಾಮರ್ಥ್ಯದ ಗುಣಮಟ್ಟ ಹೆಚ್ಚಿಸುತ್ತದೆ. ಬದುಕಿನಲ್ಲಿ ಸೇವಾ ಭಾವನೆಯ ಮೌಲ್ಯಗಳನ್ನು ಬೆಳೆಸಿಕೊಳ್ಳಲು ಸಾಧ್ಯವಿದೆ ಎಂದು ಹೇಳಿದರು.

ಮುಖ್ಯ ಅತಿಥಿಗಳಾಗಿದ್ದ ಜಿಲ್ಲಾ ಪಿಡಿಒ ಸಂಘದ ಪ್ರಧಾನ ಕಾರ್ಯದರ್ಶಿ ಸುರೇಶ ನಾಯಕ, ಗ್ರಾಮೀಣ ಪರಿಸರದಲ್ಲಿ ಸೇವೆ ಮಾಡುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬಹುದು ಎಂದರು.

ಎನ್.ಎಸ್.ಎಸ್. ಘಟಕದ ಕ್ರಾರ್ಯಕ್ರಮಾಧಿಕಾರಿ ಪ್ರೊ.ಸಂಪತ್ತಲಮಾಣಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಐಕ್ಯೂಎಸಿ ಸಂಚಾಲಕ ಡಾ.ಬಸವರಾಜ ಬೀಳಗಿ, ನೀಲಪ್ಪ ಕುರಿ, ಲೇಪಾಕ್ಷಯ್ಯ, ಶಿವಶಂಕರ ಪ್ರಸಾದ, ಸುನಂದಾ ಬೂದಿಹಾಳ, ಶ್ರೀಶೈಲ ಶಿರೋಳ, ಚಂದ್ರಶೇಖರ ಕಾಳೆ, ಹುರಕಡ್ಲಿ, ಪ್ರೇಮಾ ಗೆಜ್ಜಿ ಅತಿಥಿಗಳಾಗಿದ್ದರು.

ಶಿಬಿರಾರ್ಥಿಗಳು ಎನ್.ಎಸ್.ಎಸ್ ಗೀತೆ ಹಾಡಿದರು. ಡಾ.ಬಸವರಾಜ ಬೀಳಗಿ ಸ್ವಾಗತಿಸಿದರು. ಡಾ.ಚಂದ್ರಶೇಖರ ಕಾಳನ್ನವರ ನಿರೂಪಿಸಿದರು. ಪ್ರೊ.ಪರಸಪ್ಪ ತಳವಾರ ವಂದಿಸಿದರು.

## ಡಾ.ಬಿ.ಆರ್.ಅಂಬೇಡ್ಕರ್ ಜಯಂತಿ ಸರಳ ಆಚರಣೆ

• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ಬಾಗಲಕೋಟೆ ವಿಧಾನಸಭಾ ಉಪ ಚುನಾವಣೆ ಹಿನ್ನಲೆಯಲ್ಲಿ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರವರ ಜಯಂತಿಯನ್ನು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸುವ ಮೂಲಕ ಮಂಗಳವಾರ ಸರಳವಾಗಿ ಆಚರಿಸಲಾಯಿತು.

ಜಿಲ್ಲಾಡಳಿತ ಭವನದ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರವರ ಪುತ್ಥಳಿಗೆ ಜಿಲ್ಲಾಧಿಕಾರಿ ಸಂಗಪ್ಪ, ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಶಶೀಧರ ಕುರೇರ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿ ಸಿದ್ಧಾರ್ಥ ಗೋಯಲ್ ಹಾಗೂ ಜಿ.ಪಂ ಉಪ ಕಾರ್ಯದರ್ಶಿ ಎನ್.ವಾಯ್.ಬಸರಿಗಿಡದ ಸೇರಿದಂತೆ ಇತರೆ ಅಧಿಕಾರಿಗಳು ಹೂಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ನಂತರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಡಾ.ಬಿ.ಆರ್. ಅಂಬೇಡ್ಕರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಪುಷ್ಪ ನಮನ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಉಪ ವಿಭಾಗಾಧಿಕಾರಿ ಸಂತೋಷ ಜಗಲಾಸರ, ಮುಖ್ಯ ಯೋಜನಾಧಿಕಾರಿ ಅಲ್ಲಮಪ್ರಭು, ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, , ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ರಮೇಶ ಚವ್ಹಾಣ, ನಗರಾಭಿವೃದ್ದಿ ಕೋಶದ ಯೋಜನಾ ನಿರ್ದೇಶಕಿ ರೇಣುಕಾ ಎಂ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎ.ಸಿ.ಮನ್ನಿಕೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ದಿ ಇಲಾಖೆಯ ಉಪನಿರ್ದೇಶಕ ಕೆ.ಪ್ರಭಾಕರ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲೀಕ ಕಾಂಬಳೆ, ಜಿ.ಪಂ ಸಹಾಯಕ ಯೋಜನಾಧಿಕಾರಿ ಭೀಮಪ್ಪ ತಳವಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.



## ಬೇವೂರ ಕಾಲೇಜಿನ ಅನುರಾಧಾ ಸಾಧನೆ





• **ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ**

ತಾಲ್ಲೂಕಿನ ಬೇವೂರ ಆದರ್ಶ ಸಂಯುಕ್ತ ಪದವಿ ಪೂರ್ವ ಕಾಲೇಜು ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ್ದು, ಅನುರಾಧಾ ಶೇ. 94.66 ಅಂಕ ಪಡೆದು ಕಾಲೇಜಿಗೆ ಪ್ರಥಮಳಾಗಿದ್ದಾಳೆ.

ಶೃತಿ ಕಾವಳ್ಳಿ ಶೇ. 92.16 ಅಂಕ ಪಡೆದು ದ್ವಿತೀಯ, ಸೌಂದರ್ಯ ಮಾದರ ಶೇ.91 ಅಂಕ ಗಳಿಸಿ ತೃತೀಯ ಮತ್ತು ಜಯಶ್ರೀ ನಡಗಡ್ಡಿ ಶೇ.90.5 ಅಂಕ ಪಡೆದು ನಾಲ್ಕನೇ ಸ್ಥಾನ ಗಳಿಸಿದ್ದಾರೆ.

ಪರೀಕ್ಷೆಗೆ ಕುಳಿತವರಲ್ಲಿ 10 ವಿದ್ಯಾರ್ಥಿಗಳು ಡಿಸ್ಟಿಂಕ್ಷನ್ ,30 ವಿದ್ಯಾರ್ಥಿಗಳು ಪ್ರಥಮ ದರ್ಜೆಯಲ್ಲಿ, 10 ವಿದ್ಯಾರ್ಥಿಗಳು ದ್ವಿತೀಯ ಹಾಗೂ 8 ವಿದ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ ಎಂದು ಸಂಸ್ಥೆಯ ಅಧ್ಯಕ್ಷ ವಕೀಲ ಜಿ.ಜಿ.ಮಾಗನೂರ, ಪ್ರಾಚಾರ್ಯ ಜೆ.ಕೆ.ಮಲ್ಲಾಪೂರ ತಿಳಿಸಿದ್ದಾರೆ.

## ಅಂಬೇಡ್ಕರ್ ಬಾಬು ಜಗಜೀವನ ರಾಮ್ ಜಯಂತಿ ಆಚರಣೆ



• **ಮಲ್ಲಮ್ಮ ನುಡಿವಾರ್ತೆ, ಕುಕನೂರು**

ಪಟ್ಟಣದ ಭಾರತೀಯ ಜನತಾ ಪಕ್ಷದ (ಬಿಜೆಪಿ) ಕಾರ್ಯಾಲಯದಲ್ಲಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ ರಾಮ್ ಅವರ ಜಯಂತಿಯನ್ನು ಅತ್ಯಂತ ಗೌರವಪೂರ್ವಕವಾಗಿ ಆಚರಿಸಲಾಯಿತು. ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಈ ಇಬ್ಬರು ಮಹಾನ್ ಚೇತನಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಶ್ರದ್ಧಾಂಜಲಿ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಮಾಜಿ ಸಚಿವ ಹಾಲಪ್ಪ ಆಚಾರ ಮಾತನಾಡಿ, ಡಾ. ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯದ ನಾಯಕರಲ್ಲ, ಅವರು ಇಡೀ ಭಾರತದ ಆಸ್ತಿ. ದೇಶಕ್ಕೆ ಸಮಾನತೆ ಮತ್ತು ಸಾಮಾಜಿಕ ನ್ಯಾಯದ ಭದ್ರ ಬುನಾದಿ ಹಾಕಿಕೊಟ್ಟ ಸಂವಿಧಾನ ಶಿಲ್ಪಿ ಅವರು. ಅವರ ತತ್ವಗಳು ಇಂದಿಗೂ ನಮಗೆ ದಾರಿದೀಪ," ಎಂದರು. ಮುಂದುವರಿದು, ಬಾಬು ಜಗಜೀವನ ರಾಮ್ ಅವರು ಕೃಷಿ ಮತ್ತು ರಾಜಕೀಯ ಕ್ಷೇತ್ರದಲ್ಲಿ ನೀಡಿದ ಕೊಡುಗೆ ಅಪಾರ. ಹಿಂದುಳಿದ ವರ್ಗಗಳ ಹಕ್ಕುಗಳಿಗಾಗಿ ಅವರು ನಡೆಸಿದ ಹೋರಾಟ ಅವಿಸ್ಮರಣೀಯ ಎಂದು ಸ್ಮರಿಸಿದರು.

ನಂತರ ಮಾತನಾಡಿದ ಮುಖಂಡ ಮಂಜುನಾಥ ನಾಡಗೌಡರ್, ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರವು ಅಂಬೇಡ್ಕರ್ ಅವರ ಗೌರವಾರ್ಥವಾಗಿ ಕೈಗೊಂಡಿರುವ ಕಾರ್ಯಗಳನ್ನು ಶ್ಲಾಘಿಸಿದರು. "ಬಾಬಾಸಾಹೇಬರ ಜೀವನದ ಪ್ರಮುಖ ಘಟ್ಟಗಳನ್ನು ನೆನಪಿಸುವ ಐದು ಸ್ಥಳಗಳನ್ನು 'ಪಂಚತೀರ್ಥ'ಗಳನ್ನಾಗಿ ಅಭಿವೃದ್ಧಿಪಡಿಸುವ ಮೂಲಕ ಬಿಜೆಪಿ ಸರ್ಕಾರ ಅವರಿಗೆ ಸಲ್ಲಬೇಕಾದ ಅರ್ಹ ಗೌರವವನ್ನು ನೀಡಿದೆ. ಜಗಜೀವನ ರಾಮ್ ಅವರ ಸರಳತೆ ಮತ್ತು ದೇಶಭಕ್ತಿ ಇಂದಿನ ಯುವಜನತೆಗೆ ಪ್ರೇರಣೆಯಾಗಬೇಕು," ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷರಾದ ಮಾರುತಿ ಗೌರಾಳ, ಎಸ್.ಸಿ. ಮೋರ್ಚಾ ಅಧ್ಯಕ್ಷರಾದ ಸಿದ್ದು ಮಣ್ಣಿನವರ, ಪ್ರಮುಖರಾದ ಶರಣಪ್ಪ ಬಣ್ಣದಭಾವಿ, ಶಿವಕುಮಾರ ನಾಗಲಾಪುರಮಠ, ಕಳಕೇಶ ಹಟ್ಟಿಕಟಗಿ, ನಾಗಪ್ಪ ಸಾಲಮನಿ ಹಾಗೂ ಸುರೇಶ್ ಬಳಗೇರಿ ಉಪಸ್ಥಿತರಿದ್ದರು. ಪಟ್ಟಣ ಪಂಚಾಯತಿ ಸದಸ್ಯರು ಹಾಗೂ ಹಲವಾರು ಕಾರ್ಯಕರ್ತರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು. ದೇಶದ ಇಬ್ಬರು ಧೀಮಂತ ನಾಯಕರ ಸ್ಮರಣೆಯೊಂದಿಗೆ ಕಾರ್ಯಕ್ರಮವು ಶಾಂತಿಯುತವಾಗಿ ಮತ್ತು ಅರ್ಥಪೂರ್ಣವಾಗಿ ಮುಕ್ತಾಯಗೊಂಡಿತು.

## ಹ್ಯೂಮನ್ ರೈಟ್ಸ್ ಫೋರಂ: ಡಾ.ಬಿ.ಆರ್ ಅಂಬೇಡ್ಕರ್ ಅವರ ಜಯಂತಿ



• **ಮಲ್ಲಮ್ಮ ನುಡಿ ವಾರ್ತೆ ಶಿವಮೊಗ್ಗ**

ಈ ಹೊತ್ತಿನ ಕಾಲಘಟ್ಟದಲ್ಲಿ ನಾಗರೀಕ ಸಮುದಾಯಕ್ಕೆಡಾ.ಬಿ.ಆರ್ ಅಂಬೇಡ್ಕರ್ ರವರ ಓದು, ಪ್ರಾಥಮಿಕ ಹಂತದ ತಿಳುವಳಿಕೆ ಅತ್ಯಗತ್ಯವಾಗಿದೆ ಎಂದು ಯುವ ವಕೀಲರು ಹಾಗೂ ದಿ ಗ್ಲೋಬಲ್ ಹ್ಯೂಮನ್ ರೈಟ್ಸ್ ಫೋರಂನ ನಿರ್ದೇಶಕರಾಗಿರುವ ರೇಖೇಶ್ ಮಾನೆ ತಿಳಿಸಿದರು.

ಅಂದಿನ ಅಸ್ಪೃಶ್ಯತೆ, ಸಾಮಾಜಿಕ ಬಹಿಷ್ಕಾರ, ತಾರತಮ್ಯಗಳ ನೀತಿಗಳ ವಿರುದ್ದ ಸಮಗ್ರ ದನಿಯಾಗಿ ಶಿಕ್ಷಣ ಎಂಬುವ ಜ್ಞಾನಸಾಗರದ ಮೂಲಕ ಈ ದೇಶವಾಸಿಯ ಕಟ್ಟೆ ಕಡೆಯ ಶ್ರೀ ಸಾಮಾನ್ಯನ ಸೂರಿಗೂ ಪ್ರಜಾಸತ್ತಾತ್ಮಕವಾದ ಸಾಂವಿಧಾನಿಕ ನ್ಯಾಯವನ್ನು ತಲುಪಿಸುವಲ್ಲಿ ಶ್ರಮಿಸಿದವರು, ಅದಾಗ ಅವರೇ ಹೇಳುವಂತೆ ಸಾಂವಿಧಾನಿಕ ತೇರು ನಿಮ್ಮಗಳ ಮನೆ ಜಗಲಿನ ತಲುಪಿಸಿದ್ದೇನೆ, ಇದನ್ನು ಯಾವುದೇ ಕಾರಣಕ್ಕೂ ಮುಂದೆ ಎಳೆದೊಯ್ಯದಿದ್ದರೂ ಪರವಾಗಿಲ್ಲ ಹಿಂದೆ ಮಾತ್ರ ಏಳೆಯದಿರಿ, ಸಮಾನತೆ, ಸಾಮರಸ್ಯ ಸಹಭಾಳ್ವೆಗಳನ್ನು ತಳೆಯಿರಿ, ನಿಮ್ಮ ಹಕ್ಕುಗಳನ್ನು ನೀವೆ ಗುರುತಿಸಿಕೊಂಡು ಸಾಂವಿಧಾನವನ್ನು ಕಾಪಾಡಿಕೊಳ್ಳಿ ಎನ್ನುವ ಜನ ಸಮುದಾಯದ ಕಾಳಜಿ ಇಂದಿಗೂ ಪ್ರತಿಧ್ವನಿಸುತ್ತಲೇ ಇದೆ, ಈ ಕುರಿತಂತೆ ನಾಗರೀಕವಾಗಿ ಸಾಂವಿಧಾನಿಕ ಅರಿವು ಮೂಡಿಸುವ ಪ್ರಯತ್ನ ಸಂಘ ಸಂಸ್ಥೆಗಳಿಂದ ನಿರಂತರವಾಗಿರಲಿ ಎಂದು ರೇಖೇಶ್ ಮಾನೆ ಈ ಸಂದರ್ಭದಲ್ಲಿ ಅಭಿಪ್ರಾಯಿಸಿದರು.

ಈ ಮೊದಲು ಶಿವಮೊಗ್ಗ ನಗರದ ಸೂರ್ಯಗಗನ ಪತ್ರಿಕೆಯ ಆವರಣದಲ್ಲಿ ದಿ ಗ್ಲೋಬಲ್ ಹ್ಯೂಮನ್ ರೈಟ್ಸ್ ಫೋರಂ ನಿಂದ ಆಯೋಜಿಸಲಾಗಿದ್ದ ಡಾ.ಬಿ.ಆರ್ ಅಂಬೇಡ್ಕರ್ರವರ ಜಯಂತಿ ಆಚರಣೆಯನ್ನು ಪುಷ್ಪವನ್ನು ಅರ್ಪಿಸುವುದರ ಮುಖೇನ ಅಧ್ಯಕ್ಷರಾದ ಗಾರಾ.ಶ್ರೀನಿವಾಸ್ ಚಾಲನೆ ನೀಡಿದರು,

ಪ್ರಧಾನ ಕಾರ್ಯದರ್ಶಿ ನವೀನ್ ತಲಾರಿ ಮಾತನಾಡಿ ಶಿಕ್ಷಣದ ತಾರತಮ್ಯದ ಸಂದರ್ಭದಲ್ಲಿ ಶಿಕ್ಷಣವನ್ನು ಜೀವಾಳು ಆಗಿಸಿಕೊಂಡು ಅನೇಕ ಪದವಿಗಳನ್ನು ಪಡೆದು ಅದರ ಜ್ಞಾನವನ್ನು ಸಂವಿಧಾನದ ಮೂಲಕ ಸಮತೆಯ ಬಿತ್ತಿದ ಮಹಾಪುರುಷ, ಈ ದೇಶಕ್ಕೆ, ಪ್ರಜೆಗಳಿಗೆ ಬದುಕುವ ಸಮಾನತೆಯ ಹಕ್ಕುಗಳ ಗ್ರಂಥವನ್ನು ಅರ್ಪಣೆ ಮಾಡಿ ಜೀವಪರ ನಿಲುವುಗಳನ್ನು ಎತ್ತಿ ಹಿಡಿದರು ಎಂದು ತಿಳಿಸಿದರು.

ಸಂಸ್ಥೆಯ ಕಾನೂನು ಮಾರ್ಗದರ್ಶಕರಾದ ಗೀತಾ ಮಾನೆ ಅವರು ರಂಗೋಲಿಯನ್ನು ಚಿತ್ರಿಸುವುದರ ಮುಖೇನ ಈ ಆಚರಣೆಗೆ ಮೆರಗು ತಂದುಕೊಟ್ಟರು ಅಲ್ಲದೆ ದಿ ಗ್ಲೋಬಲ್ ಹ್ಯೂಮನ್ ರೈಟ್ಸ್ ಫೋರಂನ ಮುಖ್ಯ ಉದ್ದೇಶವಾಗಿರುವ ಟ್ಯಾಗ್ ಲೈನ್ ಆಗಿರುವ ಅನಾದಿ ಕಾಲದ ಕನ್ನಡದ ಪಂಪರವರ ಘೋಷ ವಾಕ್ಯವಾದ ಮನುಷ್ಯ ಜಾತಿ ತಾನೊಂದೆ ವಲಂ ಎನ್ನುವ ಕನ್ನಡದ ಅಕ್ಷರಗಳನ್ನು ರಂಗೋಲಿಯಲ್ಲಿಯೇ ಬರೆದು ಗಮನ ಸೆಳೆದರು. ಈ ಘೋಷಿತ ವಾಕ್ಯವು ಈ ನೆಲದ ಪ್ರತಿ ಮನೆಗೆ ತಲುಪಲಿ ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷರಾದ ಎಲ್.ಕೆ ಪರಮೇಶ್, ನಿರ್ದೇಶಕರಾದ ಚಿರಂಜೀವಿ ಬಾಬು, ಅನಿಲ್ ಕುಮಾರ್ ಹೆಚ್.ಎಲ್, ಭರತ್ ಗುತ್ತಿ, ಯೋಗೇಶ್ ಮಾನೆ, ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಜಗತ್ತಿಗೆ ಅಂಬೇಡ್ಕರ್ ಅವರ ಕೊಡುಗೆ ಅಪಾರ



• **ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ**

ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಕೊಡುಗೆ ಜಗತ್ತಿಗೆ ಅಪಾರವಾಗಿದೆ. ಅವರ ತತ್ವಾದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದರ ಮೂಲಕ ಅವರಿಗೆ ಗೌರವ ಸಲ್ಲಿಸೋಣ ಎಂದು ಪಟ್ಟಣದ ತಹಶೀಲ್ದಾರ್ ವಾಯ್ ಎಸ್ ಸೋಮನಕಟ್ಟಿ ಅಭಿಪ್ರಾಯಪಟ್ಟರು.

ಪಟ್ಟಣದಲ್ಲಿ ಮಂಗಳವಾರ ಆಯೋಜಿಸಿದ್ದ ಡಾ.ಬಾಬಾಸಾಹೇಬ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜನರ ಜೀವನ ಮಟ್ಟ ಸುಧಾರಿಸಲು ಶಿಕ್ಷಣವು ಪ್ರಮುಖವಾದ ಅಸ್ತ್ರವಾಗಿದೆ ಎಂಬ ಅವರ ವಾಣಿಯನ್ನು ಪಾಲಿಸೋಣ ಎಂದರು.

ತಾಪಂ ಇಓ ವೆಂಕಟೇಶ ವಂದಾಲ ಮಾತನಾಡಿ, ಅಂಬೇಡ್ಕರ್ ಅವರು ಜಗತ್ತಿನ ಆತ್ಮವಾಗಿದ್ದಾರೆ. ಅವರು ಸಂವಿಧಾನವನ್ನು ಅನುಭವಿಸಿ ರಚಿಸಿದ ಮಹಾನ್ ಗ್ರಂಥವಾಗಿದೆ ಎಂದರು.

ಡಾ. ರೂಪಾ ಎಸ್ ಜೋಗಳೆಕರ ಮಾತನಾಡಿ, ಅಂಬೇಡ್ಕರ್ ಅವರ ತತ್ವಾದರ್ಶಗಳ ಪಾಲನೆಯಿಂದ ಅನೇಕ ರಾಷ್ಟ್ರಗಳು ಮುಂದುವರೆದಿವೆ. ಅವರ ತತ್ವಗಳನ್ನು ಹೆಚ್ಚು ಹೆಚ್ಚು ಓದಿ, ತಿಳಿ ಹೇಳಬೇಕಾಗಿದೆ. ಶಿಕ್ಷಣ, ಸಂಘಟನೆ ಇರದೇ ಹೋರಾಟಕ್ಕೆ ಮುಂದಾಗಬೇಡಿ. ನಿಮ್ಮ ಮಕ್ಕಳಿಗೆ ಕಡ್ಡಾಯವಾಗಿ ಶಿಕ್ಷಣ ಕೊಡಿಸಿ ಎಂದರು.

ಪುರಸಭೆ ಮುಖ್ಯಾಧಿಕಾರಿ ವಿದ್ಯಾಧರ ಎಸ್ ಕಲಾದಗಿ, ತಾಲೂಕಾ ಗ್ಯಾರಂಟಿ ಸಮಿತಿ ಅಧ್ಯಕ್ಷ ಮೈಬೂಬ್ ಲಾ ನಾಯ್ಕೋಡಿ.ಡಿವೈಎಸ್ಪಿ ಬಲ್ಲಪ್ಪ ನಂದಗಾವಿ, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕಿ ಮಂಜುಳಾ ಹಿರೇಮನಿ ಉಪಸ್ಥಿತರಿದ್ದರು.

ಸಂವಿಧಾನ ಪೀಠಿಕೆಯನ್ನು ಮಂಜುಳಾ ಹಿರೇಮನಿ ವಾಚಿಸಿದರು. ಶಿಕ್ಷಕಿ ಶಾಂತಾ ಕಸ್ತೂರಿ ನಿರೂಪಿಸಿದರು. ಕಛೇರಿ ಅಧೀಕ್ಷಕ ಎಂ.ಎಂ ದಫೇದಾರ ಸ್ವಾಗತಿಸಿ ವಂದಿಸಿದರು.ಸನ್ಮಾನ: ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳ ವಿದ್ಯಾರ್ಥಿನಿಯರು ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿನಿಯರನ್ನು ಸನ್ಮಾನಿಸಲಾಯಿತು.ಭವ್ಯ ಮೆರವಣಿಗೆ: ಸಮಾರಂಭದ ಮುನ್ನ ಪಟ್ಟಣದ ಡಾ. ಬಿ ಆರ್ ಅಂಬೇಡ್ಕರ್ ವೃತ್ತದಿಂದ ಭವ್ಯ ಮೆರವಣಿಗೆ ಆರಂಭಿಸಿ, ಬಸವ ಭವನಕ್ಕೆ ಬರಲಾಯಿತು.

## ಮಹಾನಂದಿ ಶಾಲೆಯಲ್ಲಿ ಅಂಬೇಡ್ಕರ್ ಜಯಂತಿ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ನಗರದ ಅಂಬೇಡ್ಕರ್ ನಗರದಲ್ಲಿರುವ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ಮಹಾನಂದಿ ಕೊಟ್ಟಂನಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ಕಾರ್ಯಕ್ರಮದ ಅಂಗವಾಗಿ ಶಾಲಾಯಲ್ಲಿಡಾ.ಬಿ.ಆರ್.ಅಂಬೇಡ್ಕರ್ ಅವರ ಭಾವಚಿತ್ರವನ್ನು ಅಲಂಕರಿಸಿ, ಶಿಕ್ಷಕರು, ವಿದ್ಯಾರ್ಥಿಗಳು ಪೂಜೆ ಸಲ್ಲಿಸಿದರು.

ಬಳಿಕ ವಿದ್ಯಾರ್ಥಿಗಳು ಅಂಬೇಡ್ಕರ್ ಅವರ ಜೀವನ ಚರಿತ್ರೆ, ಸಾಧನೆಗಳು ಹಾಗೂ ಸಮಾಜ ಪರಿವರ್ತನೆಗಾಗಿ ನೀಡಿದ ಕೊಡುಗೆಗಳ ಬಗ್ಗೆ ಭಾಷಣ ಮಾಡಿ ಗಮನ ಸೆಳೆದರು.ನಂತರ ಮಾತನಾಡಿದ ಶಾಲೆಯ ಪ್ರಭಾರಿ ಮುಖ್ಯಗುರು ಪ್ರಮೀಳಾ ಬಾಯಿ ಎಂ., ಅಂಬೇಡ್ಕರ್ ಅವರು ಜಾತಿ ಭೇದವಿಲ್ಲದ ಸಮಾನತೆಯ ಸಮಾಜ ನಿರ್ಮಾಣದ ದೃಷ್ಟಿಯಿಂದ ದೇಶಕ್ಕೆ ಅತ್ಯುತ್ತಮ ಸಂವಿಧಾನವನ್ನು ನೀಡಿದ್ದಾರೆ.

ಶಿಕ್ಷಣ, ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯದ ಮಹತ್ವವನ್ನು ಅವರು ಪ್ರತಿಪಾದಿಸಿದ್ದು, ಪ್ರತಿಯೊಬ್ಬರೂ ಅವರ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ತಿಳಿಸಿದರು.

ನಾವು ಅಂಬೇಡ್ಕರ್ ಅವರ ಚಿಂತನೆಗಳನ್ನು ಅರ್ಥಮಾಡಿಕೊಂಡು ಅನುಸರಿಸಿದಾಗ ಮಾತ್ರ ಜಯಂತಿ ಆಚರಣೆ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷ ಉಪೇಂದ್ರ ಮಾತನಾಡಿ, ವಿಭಿನ್ನ ಸಂಸ್ಕೃತಿ, ಭಾಷೆ ಮತ್ತು ಧರ್ಮಗಳ ಜನರು ನೆಲೆಸಿರುವ ಭಾರತ ದೇಶಕ್ಕೆ ಸಮಗ್ರ ಮತ್ತು ಸಮರ್ಥ ಸಂವಿಧಾನ ನೀಡಿದ ಮಹಾನ್ ವ್ಯಕ್ತಿ ಅಂಬೇಡ್ಕರ್ ಎಂದು ಕೊಂಡಾಡಿದರು. ಅವರ ತತ್ವಗಳು ದೇಶದ ಏಕತೆ,

ಸಮಾನತೆ ಮತ್ತು ಸಾಮಾಜಿಕ ಸೌಹಾರ್ದತೆಗೆ ಬಲ ನೀಡುತ್ತಿವೆ. ಇಂದಿನ ಯುವಜನತೆ ಅಂಬೇಡ್ಕರ್ ಅವರ ಮಾರ್ಗದಲ್ಲಿ ನಡೆದು ಸಮಾಜ ನಿರ್ಮಾಣದಲ್ಲಿ ಪಾಲ್ಗೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಅಡುಗೆ ಸಹಾಯಕಿಯರಾದ ಗೌರಮ್ಮ, ರುದ್ರಮ್ಮ, ಶಿಕ್ಷಣ ಪ್ರೇಮಿ ಲಕ್ಷ್ಮಣ ಎಸ್. ಭಂಡಾರಿ ಸೇರಿದಂತೆ ಸ್ಥಳೀಯ ಮುಖಂಡರು, ಪಾಲಕರು ಹಾಗೂ ಶಾಲಾ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.

## ಬಿ.ಎಲ್.ಡಿಇ ಸಂಸ್ಥೆಯಲ್ಲಿ ಡಾ. ಬಿ.ಆರ್ ಅಂಬೇಡ್ಕರ್ ಜನ್ಮದಿನಾಚರಣೆ



• **ಮಲ್ಲಮ್ಮ ನುಡಿ ವಾರ್ತೆ ಬಸವನಬಾಗೇವಾಡಿ**

ಪಟ್ಟಣದ ಬಿ.ಎಲ್.ಡಿ.ಇ.ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯದಲ್ಲಿ ಡಾ.ಬಿ.ಆರ್. ಅಂಬೇಡ್ಕರ್ ಅವರ ಜಯಂತಿಯ ನಿಮಿತ್ಯ ಮನೆ ಮನೆಗೆ ಮನ ಮನಕೆ ಡಾ.ಬಾಬಾಸಾಹೇಬರು ಎಂಬ ಅಭಿಯಾನದ ಅಡಿಯಲ್ಲಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪ್ರಾ. ಡಾ.ಎ.ವ್ಹಿ.ಸೂರ್ಯವಂಶಿ, ಡಾ. ಎಸ್.ಎಂ ಬಿಜಾಪೂರ ಹಾಗೂ ವಾಯ್ ಬಿ ನಾಯಕ ಮಾತನಾಡಿದರು. ಬೊಧಕ ಬೋಧಕೇತರ ಸಿಬ್ಬಂದಿಯವರು ಹಾಜರಿದ್ದರು. ಡಾ.ಬಿ.ಎಮ್.ಸಾಲವಾಡಗಿ ನಿರೂಪಿಸಿ ವಂದಿಸಿದರು.

# ಅಂಬೇಡ್ಕರ್ ಜಯಂತಿ ಆಚರಣೆ



**ಸುತ್ತೂರು:** ನಂಜನಗೂಡು ತಾಲ್ಲೂಕು ಸುತ್ತೂರು ಗ್ರಾಮದ. ಶ್ರೀ ದೊಡ್ಡಮ್ಮತಾಯಿ. ಆಟೋ ಚಾಲಕರ. ಆಟೋ ಮಾಲೀಕರು. ಸಂಘದ ವತಿಯಿಂದ. ಶ್ರೀ ಅಂಬೇಡ್ಕರ್ ಜಯಂತಿಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ. ಸ್ಥಳೀಯ ಸರ್ಕಾರಿ ಬಸ್ ನಿಲ್ದಾಣದ ಅಧಿಕಾರಿ. ಬಸವರಾಜು.. ದೊಡ್ಡಮ್ಮ ತಾಯಿ ಆಟೋ ಮಾಲೀಕರ. ಚಾಲಕರು ಭಾಗವಹಿಸಿದರು.

# 135ನೇ ಅಂಬೇಡ್ಕರ್ ಜಯಂತಿ



**ಗಂಗಾವತಿ:** ನಗರದಲ್ಲಿ 135ನೇ ಅಂಬೇಡ್ಕರ್ ಜಯಂತಿ ಅದ್ದೂರಿಯಾಗಿ ಆಚರಿಸಲಾಯಿತು ಅಂಬೇಡ್ಕರ್ ಕಂಚಿನ ಪುತ್ಥಳಿಗೆ ಹೂವಿನ ಹಾರ. ಹಾಕಿ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು ಈ ಸಂದರ್ಭದಲ್ಲಿ ಗಂಗಾವತಿ ಶಾಸಕರಾದ ಗಾಲಿ ಜನಾರ್ದನ್ ರೆಡ್ಡಿ.ಪರಣ್ಣ ಮನವಳ್ಳಿ ಮಾಜಿ ಶಾಸಕರು.ಹೆಚ್. ಆರ್ .ಶ್ರೀನಾಥ್ ಮಾಜಿ ವಿಧಾನಪರಿಷತ್ ಸದಸ್ಯರು. ಮಲ್ಲಿಕಾರ್ಜುನ ನಾಗಪ್ಪ ಮಾಜಿ ಸಚಿವರು. ತಿಪ್ಪೇರುದ್ರಸ್ವಾಮಿ ಮಾಜಿ ಕಾಡ ಅಧ್ಯಕ್ಷರು. ವಿರುಪಾಕ್ಷಪ್ಪ ಸಿಂಗನಾಳ ಬಿಜೆಪಿ ಮುಖಂಡರು. ಎಮ್ ಸರ್ವೇಶ್ ತಾಲೂಕ ಪಂಚಾಯಿತಿ ಅಧಿಕಾರಿಗಳು ನಗರಸಭೆ ಅಧಿಕಾರಿಗಳು ಮತ್ತು ದಲಿತ ಸಂಘಟನೆಗಳು ಅನೇಕರ ಭಾಗವಹಿಸಿದರು.ಈ ಸಂದರ್ಭದಲ್ಲಿ ಗಾಲಿ ಜನಾರ್ದನ್ ರೆಡ್ಡಿ ಶಾಸಕರು ಮಾತಾಡುತ್ತಾ. 135 ನೇ ಅಂಬೇಡ್ಕರ್ ಜಯಂತಿ ಆಚರಿಸುತ್ತ ಅಂಬೇಡ್ಕರ್ ರವರು ಎಲ್ಲ ಜಾತಿ ವರ್ಗದವರಿಗೂ ಸಾಮಾನ್ಯ ಹಕ್ಕುಗಳು ಯುಗ ಪರಿವರ್ತಕ,ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ 140ಕೋಟಿ ಭಾರತೀಯರಿಗೂ ಆದರ್ಶವಾಗಿದ್ದಾರೆ. ಕೊಟ್ಟಿರುವಂತಹ ಸವಿಧಾನವನ್ನು ಪ್ರತಿಯೊಂದು ವರ್ಗದವರಿಗೂ ಅನುಕೂಲವಾಗುತ್ತದೆ ಅವರ ಅನುಕರಣೆಯನ್ನು ಪ್ರತಿಯೊಬ್ಬ ಮನುಷ್ಯನಲ್ಲಿ ಇರಬೇಕು ಅವರ ಆದರ್ಶಗಳನ್ನು ಪ್ರತಿಯೊಬ್ಬರೂ ಆಲಿಸಲೇಬೇಕು ಎಂದು ಹೇಳಿದರು.

# ನಾಗರಿಕ ವಿಮಾನಯಾನ ಸೇವೆ ಮುಂದುವರಿಸಲು ಸರ್ಕಾರ ಬದ್ಧ

**ಬೀದರ್:** ಬೀದರ್ ನಾಗರಿಕ ವಿಮಾನಯಾನ ಸೇವೆ ತಾತ್ಕಾಲಿಕವಾಗಿ



ಸ್ಥಗಿತಗೊಂಡಿರುವ ಕುರಿತು ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ. ಖಂಡ್ರೆ ಅವರು ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿದರು.

ಕಳೆದ ವರ್ಷ ಕೇಂದ್ರ ಸರ್ಕಾರದ ಉಡಾನ್ (UDAN) ಯೋಜನೆಯಡಿ ನೀಡಲಾಗುತ್ತಿದ್ದ ಸಬ್ಸಿಡಿ ಸ್ಥಗಿತಗೊಂಡ ಹಿನ್ನೆಲೆಯಲ್ಲಿ ಬೀದರ್ ವಿಮಾನಯಾನ ಸೇವೆಗೆ ತೊಂದರೆ ಉಂಟಾಗಿತ್ತು. ಈ ಪರಿಸ್ಥಿತಿಯಲ್ಲಿ ಸಚಿವರಾದ ಶ್ರೀ ಈಶ್ವರ ಖಂಡ್ರೆ ಅವರ ನಿರಂತರ ಪ್ರಯತ್ನದಿಂದ, ಕೆಕೆಆರ್‌ಡಿಬಿ (KKRDB) ಅನುದಾನದಡಿ ಸುಮಾರು ₹10 ಕೋಟಿ ಮೀಸಲಿಟ್ಟು, ಸಚಿವ ಸಂಪುಟದ ಅನುಮೋದನೆ ಪಡೆದು ಒಟ್ಟು ₹13 ಕೋಟಿ ರೂ.ಗಳನ್ನು ಕರ್ನಾಟಕ ಸರ್ಕಾರದಿಂದ ಸ್ಟಾರ್ ಏರ್ ಸಂಸ್ಥೆಗೆ ನೀಡಲಾಗಿತ್ತು. ಇದರ ಫಲವಾಗಿ, ಮಾನ್ಯ ಮುಖ್ಯಮಂತ್ರಿಗಳಿಂದ 2025ರ ಏಪ್ರಿಲ್ 16ರಂದು ಬೀದರ್ ವಿಮಾನಯಾನ ಸೇವೆಗೆ ಮರು ಚಾಲನೆ ನೀಡಲಾಗಿತ್ತು.

ಈ ಸೇವೆಗೆ ಒಂದು ವರ್ಷದ ಒಡಂಬಡಿಕೆ ಇತ್ತು, ಅದು 2026ರ ಏಪ್ರಿಲ್ 14ರಂದು ಪೂರ್ಣಗೊಂಡಿದೆ. ಇದೀಗ ವಿಮಾನಯಾನ ಸಂಸ್ಥೆ ಹೆಚ್ಚುವರಿ ಅನುದಾನವನ್ನು ಕೇಳಿರುವ ಹಿನ್ನೆಲೆಯಲ್ಲಿ, ಈ ವಿಷಯವಾಗಿ ಈಗಾಗಲೇ ಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಲಾಗಿದೆ. ಮುಂದಿನ ಸಚಿವ ಸಂಪುಟ ಸಭೆಯಲ್ಲಿ ವಿಷಯವನ್ನು ಮಂಡಿಸಿ, ಬೀದರ್ ವಿಮಾನಯಾನ ಸೇವೆಯನ್ನು ಮುಂದುವರಿಸಲು ಸರ್ಕಾರ ಎಲ್ಲಾ ರೀತಿಯ ಪ್ರಯತ್ನಗಳನ್ನು ಮಾಡಲಿದೆ ಎಂದು ಸಚಿವರು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಮಾಜಿ ಕೇಂದ್ರ ಸಚಿವ ಭಗವಂತ್ ಖುಬಾ ಅವರು ನೀಡುತ್ತಿರುವ ಹೇಳಿಕೆಗಳ ಕುರಿತು ಪ್ರತಿಕ್ರಿಯಿಸಿದ ಸಚಿವರು, ಜಿಲ್ಲೆಯ ಜನರ ಹಿತದೃಷ್ಟಿಯಿಂದ ಕೆಕೆಆರ್‌ಡಿಬಿ ಅನುದಾನವನ್ನು ಬಳಕೆ ಮಾಡಲಾಗಿದೆ. ಉಡಾನ್ ಯೋಜನೆಯ ಸಬ್ಸಿಡಿಯೂ ಸಾರ್ವಜನಿಕರ ತೆರಿಗೆ ಹಣದಿಂದಲೇ ನೀಡಲ್ಪಡುವುದು. ಆದ್ದರಿಂದ ಅನಾವಶ್ಯಕ ಆರೋಪಗಳನ್ನು ಮಾಡುವುದು ಸರಿಯಲ್ಲ ಎಂದು ಹೇಳಿದರು.

ಐದನೇ ಪುಣ್ಯ ಸ್ಮರಣೆ



ಜನನ 02/06/1949
ಮರಣ 09/05/2021

ಅಂಗೈಕ್ಯ ಶ್ರೀ ಬಸಯ್ಯ ಅಂದಾನಯ್ಯ ಹಿರೇಮಠ (ಆಲಮಟ್ಟಿ)
ನಿವೃತ್ತ ಸಿನಿಯರ್ ವರ್ಕ್ ಇನ್ಸ್‌ಪೆಕ್ಟರ್, ಕೆ.ಬಿ.ಜೆ.ಎನ್.ಎಲ್, ಆಲಮಟ್ಟಿ
ಸಾ: ಆಲಮಟ್ಟಿ ತಾ: ನಿಡಗುಂದಿ ಜಿ: ವಿಜಯಪುರ

ನೀವು ನಮ್ಮನ್ನಗಲಿ ಇಂದಿಗೆ ಐದನೇ ವರ್ಷ ಗತಿಸಿತು. ನಿಮ್ಮ ನೆನಪು ಇಂದಿಗೂ ನಮ್ಮ ಮನದಲ್ಲಿ ಹಚ್ಚ ಹಸಿರಾಗಿ ಉಳಿದಿದೆ. ನೀವು ಹಾಕಿಕೊಟ್ಟ ಮಾರ್ಗದರ್ಶನದಲ್ಲಿಯೇ ನಾವು ಮುನ್ನಡೆಯುತ್ತಿದ್ದೇವೆ. ಭಗವಂತನು ನಿಮ್ಮ ಆತ್ಮಕ್ಕೆ ಚಿರಶಾಂತಿ ನೀಡಲೆಂದು ಪ್ರಾರ್ಥಿಸುವ

ಸದಾ ನಿಮ್ಮ ಸ್ಮರಣೆಯಲ್ಲಿರುವ
ಧರ್ಮಪತ್ನಿ: ಶಕುಂತಲಾ ಬಸಯ್ಯ ಹಿರೇಮಠ, ಪುತ್ರಿ: ನೀಲಮ್ಮ
ಪುತ್ರರು: ವಿಜಯಮಹಾಂತೇಶ, ರಾಜಶೇಖರ, ಶಿವಾನಂದ,
ಸೊಸೆಯಂದಿರು: ಗೀತಾ, ಮಂಜುಳಾ, ಭಾವನಾ, ಅಳಿಯ: ಸಂಗಯ್ಯ ಕಂಬಾಳಿಮಠ, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗ ಹಾಗೂ ಆಲಮಟ್ಟಿ ಗ್ರಾಮದ ಗುರು ಹಿರಿಯರು

# ಸಂಕೋಲೆಗಳಿಂದ ವಿಮುಕ್ತರಾಗಲು ಶಿಕ್ಷಣವೇ ಅಸ್ತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು


ಬಾಬಾ ಸಾಹೇಬ್ ಅಂಬೇಡ್ಕರ್ ಅವರು ರಚಿಸಿದ ಸಂವಿಧಾನದಿಂದಲೇ ನಾನು ಈ ರಾಜ್ಯದ ಮುಖ್ಯಮಂತ್ರಿ ಆಗಿದ್ದೇನೆ ಎಂದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಸಮಾಜ ಕಲ್ಯಾಣ ಇಲಾಖೆ ವತಿಯಿಂದ ವಿಧಾನಸೌಧದ ಭವ್ಯ ಮೆಟ್ಟಿಲುಗಳ ಮೇಲೆ ಆಯೋಜಿಸಲಾಗಿದ್ದ ಸಂವಿಧಾನ ಶಿಲ್ಪಿ ಭಾರತ ರತ್ನ ಮಹಾ ಮಾನವತಾವಾದಿ ಬಾಬಾಸಾಹೇಬ್ ಡಾ।। ಬಿ ಆರ್ ಅಂಬೇಡ್ಕರ್ ರವರ ಜನ್ಮ ದಿನಾಚರಣೆ ಹಾಗೂ ಡಾ।। ಬಿ ಆರ್ ಅಂಬೇಡ್ಕರ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು.

ಬಾಬಾ ಸಾಹೇಬ್ ಅಂಬೇಡ್ಕರ್ ಅವರು, "ಜಾತಿ ವ್ಯವಸ್ಥೆ ಇರುವವರೆಗೂ ಅಸ್ಪೃಶ್ಯತೆ ಇರುತ್ತದೆ , ಸಮಾಜಿಕ , ಆರ್ಥಿಕ ಅಸಮಾನತೆ ಇರುವವರೆಗೆ ಜಾತೀಯತೆ ಇರಲಿದೆ" ಎಂದು ಸ್ಪಷ್ಟವಾಗಿ ಹೇಳಿದ್ದರು ಎಂದರು.

**ದೌರ್ಜನ್ಯಕ್ಕೆ ಒಳಗಾದ ಎಲ್ಲರ ಪರವಾಗಿ ಹೋರಾಟ**

ಅಂಬೇಡ್ಕರ್ ಅವರು, ಎಲ್ಲಾ ದಮನಿತರ, ಪರಿಶಿಷ್ಟ ವರ್ಗಗಳ, ಶೋಷಿತರ, ಅವಕಾಶ ವಂಚಿತ ಜನರ ಪರವಾಗಿ ಹೋರಾಟವನ್ನು ತಮ್ಮ ಜೀವನದುದ್ದಕ್ಕೂ ಮಾಡಿದ್ದರು. ಕೇವಲ ದಲಿತರ ನಾಯಕರಾಗಿರದೆ ಅವಕಾಶ ವಂಚಿತರ, ದೌರ್ಜನ್ಯಕ್ಕೆ ಒಳಗಾದ ಎಲ್ಲರ ಪರವಾಗಿ ಹೋರಾಟ ಮಾಡಿದ್ದರು ಎಂದರು.



**ಜಗತ್ತಿನ ಶ್ರೇಷ್ಠ ಸಂವಿಧಾನ**

ಬಾಬಾ ಸಾಹೇಬ್ ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಸಂವಿಧಾನದ ಮೂಲಕ ಎಲ್ಲಾ ಭಾರತೀಯರಿಗೆ ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವವನ್ನು ಒದಗಿಸುವ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ. ಆದ್ದರಿಂದಲೇ ದೇಶದ ಸಂವಿಧಾನವನ್ನು ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠ ಎಂದು ಪರಿಗಣಿಸಲಾಗುತ್ತದೆ ಎಂದರು.

**ಸಂಪೂರ್ಣವಾಗಿ ಸಮಾನತೆಯನ್ನು ಸಾಧಿಸಲಾಗಿಲ್ಲ ಎನ್ನುವುದು ನೋವಿನ ಸಂಗತಿ**

ಸಂಪೂರ್ಣವಾಗಿ ಸಮಾನತೆಯನ್ನು ಸಾಧಿಸಲಾಗಿದೆ ಇರುವುದು ನೋವಿನ ಸಂಗತಿ ಎಂದ ಮುಖ್ಯಮಂತ್ರಿಗಳು, ಸಮಾಜಿಕ, ಆರ್ಥಿಕ ಅಸಮಾನತೆಯಿರುವ ಈ ಸಮಾಜದಲ್ಲಿ ಇವುಗಳನ್ನು ಹೋಗಲಾಡಿಸದಿದ್ದರೆ ದೇಶಕ್ಕೆ ಸ್ವಾತಂತ್ರ ಬಂದಿರುವುದು ಯಶಸ್ವಿಯಾಗಲಾರದು ಎಂದು ಅಂಬೇಡ್ಕರ್ ಸ್ಪಷ್ಟವಾಗಿ ನಡೆದಿದ್ದರು ಎಂದರು.

**ಹಿಂದೂ ಧರ್ಮದ ಸುಧಾರಣೆಗಾಗಿ ಪ್ರಯತ್ನ**

ಅಂಬೇಡ್ಕರ್ ವಿದ್ವಾಂಸರಾಗಿದ್ದರೂ ದಮನಿತರ ಪರವಾಗಿ ಹೋರಾಡಿದರಲ್ಲದೆ, ಹಿಂದೂ ಧರ್ಮದ ಸುಧಾರಣೆಗಾಗಿ ಬಹಳ ಪ್ರಯತ್ನ ಮಾಡಿದರು. ಆದರೆ ಕಡೆಗೆ ಅದು ಕೈಗೂಡದೆ ಹಿಂದೂ ಧರ್ಮವನ್ನು ತ್ಯಜಿಸಿದರು. ಅಸಮಾನತೆಗೆ ಕಾರಣವಾದ ಮನುವಾದವನ್ನು ತಿರಸ್ಕರಿಸಿದ್ದರು ಎಂದರು.

**ಎಲ್ಲ ಸಂಕೋಲೆಗಳಿಂದ ವಿಮುಕ್ತರಾಗಲು ಶಿಕ್ಷಣ ಒಂದೇ ಪ್ರಬಲ ಅಸ್ತ್ರ**

ಸಾಮಾಜಿಕ, ಆರ್ಥಿಕ ಶಕ್ತಿ ಎಲ್ಲರಿಗೂ ದೊರಕಿದಾಗ ಮಾತ್ರ ಸ್ವಾವಲಂಬನೆ ಸಾಧ್ಯ. ಎಲ್ಲ ಸಂಕೋಲೆಗಳಿಂದ ವಿಮುಕ್ತರಾಗಲು ಶಿಕ್ಷಣ ಒಂದೇ ಪ್ರಬಲ ಅಸ್ತ್ರ ಎಂದು ಅಂಬೇಡ್ಕರ್ ಸಾರಿದ್ದರು ಎಂದರು. ಅಂಬೇಡ್ಕರ್ ಅವರು ವಿದ್ಯಾವಂತರಾಗದೆ ಹೋಗಿದ್ದರೆ, ಅವರಲ್ಲಿ ಹೋರಾಟದ ಮನೋಭಾವ ಇರದೇ ಹೋಗಿದ್ದರೆ ಇಂಥ ಸಂವಿಧಾನ ಸಿಗಲು ನಮಗೆ ಸಾಧ್ಯವಿರಲಿಲ್ಲ. ಅದಕ್ಕಾಗಿಯೇ ಶಿಕ್ಷಣಕ್ಕೆ ಹೆಚ್ಚಿನ ಮಹತ್ವ ನೀಡಬೇಕು. ಅಂಬೇಡ್ಕರ್, ರಾಮ್ ಮನೋಹರ್ ಲೋಹಿಯಾ, ಜವಾಹರ್ ಲಾಲ್ ನೆಹರೂ ಅವರು ಪಡೆದಂತಹ ಶಿಕ್ಷಣ ಪಡೆಯಬೇಕು. ವೈಚಾರಿಕತೆ, ವೈಜ್ಞಾನಿಕತೆ, ಮಾನವೀಯತೆಯಿಂದ ಕೂಡಿರುವ ಶಿಕ್ಷಣ ನಮಗೆ ಸಿಗಬೇಕು ಎಂದರು.


ಸಾಮಾಜಿಕ ವ್ಯವಸ್ಥೆಯನ್ನು ಅರ್ಥ ಮಾಡಿಕೊಂಡಿದ್ದರಿಂದಲೇ ಇಂಥ ಸಂವಿಧಾನ ನೀಡಲು ಅಂಬೇಡ್ಕರ್ ಅವರಿಗೆ ಸಾಧ್ಯವಾಯಿತು ಎಂದು ಮುಖ್ಯಮಂತ್ರಿಗಳು ಹೇಳಿದರು.

# ಸಮಾನತೆಗೆ ಹೋರಾಡಿದ ಮಹಾನ್ ಚೇತನ

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ ದಾಸರಹಳ್ಳಿ

ಸಾಮಾಜಿಕ ಸಮಾನತೆ, ಅಸ್ಪೃಶ್ಯತಾ ಏಕತೆಗೆ ಹೋರಾಡಿದ ಮಹಾನ್ ಚೇತನ ಭಾರತ ರತ್ನ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಚಿಂತಕರು ವಾಗ್ಮಿಗಳು ಬುದ್ದಿಜೀವಿಗಳು ಮತ್ತು ರಾಷ್ಟ್ರೀಯ ಅಂತಾರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರಾದ ಡಾ. ಸಂಗನ ಬಸಪ್ಪ ಬಿರಾದಾರ್ ಹೇಳಿದರು.

ಅವರು ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಹೆಗ್ಗನಹಳ್ಳಿ ಮುಖ್ಯ ರಸ್ತೆ ಬಸ್ ನಿಲ್ದಾಣ ಹತ್ತಿರ ಡಾ ಬಿ ಆರ್ ಅಂಬೇಡ್ಕರ್ ಅಭಿಮಾನಿಗಳ ವೇದಿಕೆ ಸಂಸ್ಥಾಪಕ ರಾಜ್ಯಾಧ್ಯಕ್ಷ ಉಮೇಶ್ ಗೌಡ ರಾವಣ್ ಅವರ ನೇತೃತ್ವದಲ್ಲಿ ಆಯೋಜಿಸಿದ್ದ ಸಂವಿಧಾನ ಶಿಲ್ಪಿ ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135ನೇ ಜನ್ಮದಿನಾಚರಣೆ ಅಂಗವಾಗಿ ಡಾ. ಬಿ ಆರ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ



ಮಾಡಿ ಗೌರವ ನಮನ ಸಲ್ಲಿಸಿ ಮೆರವಣಿಗೆಗೆ ತಯಾರಿಯಾಗಿ ನಿಂತಿರುವ ಬೆಳ್ಳಿ ರಥ ವಾಹನಕ್ಕೆ ಚಾಲನೆ ನೀಡಿ ಡಾ. ಸಂಗನ ಬಸಪ್ಪ ಬಿರಾದಾರ್ ನೆರೆದ್ದಿದ ಜನರನ್ನು ಉದ್ದೇಶಿಸಿ ಮಾತನಾಡಿದರು.

ಜನ ವಿಕಾಸ ಕೋ ಆಪರೇಟಿವ್ ಸೊಸೈಟಿ ಸಂಸ್ಥಾಪಕ ಅಧ್ಯಕ್ಷ ದಯಾನಂದ್ ಸಂವಿಧಾನ ಶಿಲ್ಪಿ ಡಾ. ಬಿ ಆರ್ ಅಂಬೇಡ್ಕರ್ ಅವರ ವಾಣಿಗಳನ್ನು ಮನುಷ್ಯನ ಬದುಕಿಗೆ ಪ್ರೇರಣೆ ಎಂದು ಡಾ. ಬಿ ಆರ್ ಅಂಬೇಡ್ಕರ್ ಅವರ ಬಾಲ್ಯ ಜೀವನ ಅವರ ಕೊಡಿಗೆ ಬಗ್ಗೆ ಎಳೆ ಎಳೆಯಾಗಿ ಸಾರ್ವಜನಿಕರಿಗೆ ತಿಳಿಸಿ ಕೊಟ್ಟರು.

# ನಂಬುಗೆ ಕಳೆದುಕೊಂಡ ಎರಡು ಪೀಠ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ಹರಿಹರ ಪಂಚಮಸಾಲಿ ಪೀಠದ ವಚನಾನಂದ ಸ್ವಾಮಿಜಿ ಉಚ್ಚಾಟನೆ ವಿಚಾರವಾಗಿ ವಿಜಯಪುರದಲ್ಲಿ ಶಾಸಕ ಬಸನಗೌಡ ಪಾಟೀಲ ಯತ್ನಾಳ್ ಅವರು ಪ್ರತಿಕ್ರಿಯೆ ನೀಡಿ ಮಾತನಾಡಿದ ಅವರು ಎರಡು ಪೀಠದ ಟ್ರಸ್ಟ್ ಗಳು ನಂಬಿಕೆ ಕಳೆದುಕೊಂಡಿವೆ , ಯಾರು ಹಣ ತಿಂದಿದ್ದಾರೆ ಅಂತಾ ನಡೆದಿದೆ, ಇದು ಎರಡು ಕಡೆ ಅದೆ ನಡೆದಿದೆ, ಇದನ್ನ ಖಾಸಗಿ ಆಸ್ತಿ ಮಾಡಿಕೊಂಡವರು ಇದ್ದಾರೆ ಎರಡು ಟ್ರಸ್ಟ್ ನವರು ಅವರೇ ಇದ್ದಾರೆ, ಇವರಿಂದ ಸಮಾಜಕ್ಕೆ ನ್ಯಾಯ ಸಿಗಲ್ಲ ಎಂದು ಎರಡು ಪೀಠಗಳ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದರು.

ಯಾರು ಪ್ರಾಮಾಣಿಕರಿದ್ದಾರೆ, ಸಮಾಜಕ್ಕೆ ಕೆಲಸ ಮಾಡುವವರು ಯಾರು ಇಲ್ಲ ಇಲ್ಲಿ , ಎಲ್ಲರು ತಮ್ಮ ತಮ್ಮ ಸ್ವಾರ್ಥಕ್ಕಾಗಿ ಈ ಟ್ರಸ್ಟ್ ಗಳನ್ನ ಬಳಸಿದ್ದಾರೆ, ಎಷ್ಟೋ ಜನರು ಇದರಿಂದ ತಮ್ಮ ಅಸ್ತಿ ಮಾಡಿಕೊಂಡಿದ್ದಾರೆ ಇದರಿಂದ ಸಮಾಜಕ್ಕೆ ಹೇಗೆ ಒಳ್ಳೆಯದಾಗುತ್ತೆ ಎಂದರು.



ಉಚ್ಚಾಟನೆ ಮಾಡಿದವರು, ಮಾಡಿಸಿಕೊಂಡವರು ಇಬ್ಬರು ಅವರೇ ಇದ್ದಾರೆ ಸರಕಾರವನ್ನ ಬ್ಲ್ಯಾಕ್ ಮೇಲ್ ಮಾಡುವುದಕ್ಕಾಗಿ ಈ ಟ್ರಸ್ಟ್ ಗಳು ಇದ್ದಾವೆ, ಹಿಂದೆ ಬಸವರಾಜ ಬೊಮ್ಮಾಯಿ, ಯಡ್ಡಿಯೂರಪ್ಪ ಇದ್ದಾಗ 11 ಕೋಟಿ ರೂ ಹಣ ಕೊಟ್ಟಿದ್ದಾರೆ, ಗ್ರಾಮ ಪಂಚಾಯತ್ ಪಿಡಿಓ ಸಹಿ ಕೂಡ ನಕಲಿ ಮಾಡಿದ್ದಾರೆ ಹೀಗಿದ್ದಾಗ ಈ ಟ್ರಸ್ಟ್ ನ್ನ ಹೇಗೆ ನಂಬುತ್ತಿರಿ, ಇವರು ಹೇಗೆ ಸಮಾಜಕ್ಕೆ ಒಳ್ಳೆಯದು ಮಾಡುತ್ತಾರೆ ಈ ಕೂಡಲಸಂಗಮ ಟ್ರಸ್ಟ್ ಕೂಡ ಅದೆ ಇದೆ ಅದು ಒಂದು ಖಾಸಗಿ ಅಸ್ತಿ ಆಗಿದೆ ಈ ಎರಡು ಟ್ರಸ್ಟ್ ಗಳ ಮೇಲೆ ಜನ ನಂಬಿಕೆ ಕಳೆದು ಕೊಂಡಿದ್ದಾರೆ ಎಂದರು.

# ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ





• ಮಲ್ಲಮ್ಮ ನುಡಿ ವಾರ್ತೆ ಬೀದರ

ಸಂವಿಧಾನ ಶಿಲ್ಪಿ, ಭಾರತರತ್ನ, ಮಹಾಮಾನವತಾವಾದಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ 135ನೇ ಜಯಂತಿ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಈಶ್ವರ ಬಿ. ಖಂಡ್ರೆ ಅವರು ಇಂದು ಬೀದರ ನಗರದಲ್ಲಿರುವ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ ಗೌರವ ನಮನಗಳನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಡಾ. ಅಂಬೇಡ್ಕರ್ ಅವರು ರಚಿಸಿದ ಭಾರತದ ಸಂವಿಧಾನವು ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಮಾನತೆ, ಸ್ವಾತಂತ್ರ್ಯ ಹಾಗೂ ನ್ಯಾಯವನ್ನು ಖಚಿತಪಡಿಸುವ ಮಹತ್ವದ ದಸ್ತಾವೇಜಾಗಿದೆ ಎಂದು ಹೇಳಿದರು. ಅವರ ಚಿಂತನೆಗಳು ಮತ್ತು ಆದರ್ಶಗಳು ಸಮಾಜದಲ್ಲಿ ಶೋಷಿತರ ಹಾಗೂ ಹಿಂದುಳಿದವರ ಹಕ್ಕುಗಳ ರಕ್ಷಣೆಗೆ ಸದಾ ಪ್ರೇರಣೆಯಾಗಿವೆ ಎಂದು ಅಭಿಪ್ರಾಯಪಟ್ಟರು.

ನಂತರ ಸಂಭ್ರಮದ ಜಯಂತಿ ಮೆರವಣಿಗೆಗೆ ಚಾಲನೆ ನೀಡಿ ಜನರೊಂದಿಗೆ ಹೆಜ್ಜೆ ಹಾಕಿದ ಸಚಿವರು, ಅಂಬೇಡ್ಕರ್ ಅವರ ಸಂದೇಶಗಳನ್ನು ಜನತೆಗೆ ಸಾರುವಲ್ಲಿ ಭಾಗಿಯಾದರು.

# ದೆಹಲಿಯಿಂದ ಗುಲ್ಬರ್ಗಾಕ್ಕೆ ಬಂದ ಚಿಶ್ತಿ ಪರಂಪರೆಯ ಸಂತರು



**ಧರ್ಮ–ಮರ್ಮ**
● ಡಾ.ಎಂ.ಮಹ್ಮದ್ ಬಾಷ ಗೂಳ್ಯಂ
ಪ್ರಧಾನ ಸಂಪಾದಕ, ಬೆಂಗಳೂರು




**ಕಳೆದ ಸಂಚಿಕೆಯಿಂದ...**

ಮಹಮ್ಮದ್ ಬಿನ್ ತುಘಲಕ್ ರಾಜಧಾನಿಯನ್ನು ದೆಹಲಿಯಿಂದ ದೇವಗಿರಿಗೆ ಸ್ಥಳಾಂತರಿಸಿದ್ದರಿಂದ, ಖುಲ್ದಾಬಾದ್ ತಲುಪಿದ್ದ ಇವರು, ಇತರೆ ಸಂತರಾದ ಶೇಖ್ ಬುರಾಹುನುದ್ದೀನ್ ಗರೀಬ್, ಶೇಖ್ ಬಾಬು ಅವರ ಸಾಂಗತ್ಯದಲ್ಲಿ ಕಾರ್ಯ ಪ್ರವೃತ್ತರಾಗಿದ್ದರು. ಗಮನಿಸಬೇಕಾದ ವಿಷಯವೆಂದರೆ ಇಂದಿನ ಗುಲಬರ್ಗಾವು ಭಾರತ ಮಾತ್ರವಲ್ಲ, ಇಡೀ ವಿಶ್ವ ಇಸ್ಲಾಮಿ ಸಾಮ್ರಾಜ್ಯದಲ್ಲಿ ಪ್ರಸಿದ್ಧವಾಗಿದೆ. ಇದ–ಕ್ಕೆ ಪ್ರಮುಖ ಕಾರಣ; ಚಿಶ್ತಿಯಾ ಪರಂಪರೆಯ ಸೂಫಿಗಳಾದ ಹಜ್ರತ್ ಸಯ್ಯದ್ ಮಹ್ಮದ್ ಹುಸೇನಿ, ಖ್ವಾಜಾ ಬಂದೇನವಾಜ್ ಗೇಸುದರಾಜ್ ಇವರು. ಗುಲಬರ್ಗಾವು ಬಂದೇನವಾಜ್ ಗೇಸುದರಾಜ್ ಅವರು ಆಗಮಿಸಿ ನೆಲೆಸುವ ಮುಂಚೆಯೂ ಇತರ ಸೂಫಿ ಪರಂಪರೆಯ ಸೂಫಿಗಳ ತಾಣವಾಗಿತ್ತು. ಚಾರಿತ್ರಿಕ ಕಾಲಾನುಕ್ರಮದನುಗುಣವಾಗಿ ಮೊದಲು ಗುಲಬರ್ಗಾಕ್ಕೆ ಆಗಮಿಸಿದವರು, ಖಾದ್ರಿಯಾ ಸೂಫಿ ಪರಂಪರೆಯ 'ರುಕ್ನೋದಿನ್ ತೋಲಾ' ಅವರೆನ್ನುತ್ತದೆ ದಾಖಲೆ.

**ದಖನ್ ನೆಲದಲ್ಲಿ ಸೂಫಿಗಳ ಅಸ್ಮಿತೆ**

ಭಾರತದ ದಕ್ಷಿಣದ ವಿಂಧ್ಯಾ ಪರ್ವತದಿಂದ ಹಿಂದೂ ಮಹಾಸಾಗರದವರೆಗಿನ ಬಯಲು ಭೂಭಾಗವು ಸಾಮಾನ್ಯವಾಗಿ 'ದಖನ್' ಎಂದು ಕರೆಯಲ್ಪಡುತ್ತದೆ. ಇದು ದಕ್ಷಿಣ ಶಬ್ದದ ಅಪಭ್ರಂಶ. ದಖನ್ ಮಧ್ಯಕಾಲೀನ ಯುಗದಲ್ಲಿ ಹಲವ ಸೂಫಿಗಳ ತಾಣವಾಗಿತ್ತು. ದಖನ್‌ಗೆ ಆಗಮಿಸಿದ ಸೂಫಿಗಳು ಕ್ರಿ.ಶ. 1300 ರಿಂದ 1347ರವರೆಗೆ ತಮ್ಮ ಧಾರ್ಮಿಕ ಕೇಂದ್ರಗಳನ್ನು ನಿರ್ಮಿಸಿ, ಕ್ರಿ.ಶ. 1347 ರಿಂದ 1538ವರೆಗೆ ತಮ್ಮ ಆಧಾತ್ಮಿಕ ನಂಬುಗೆ, ಪರಂಪರೆಗಳ ಪ್ರಸಾರ ವಿಚಾರದಲ್ಲಿ ಅತ್ಯಂತ ಕ್ರಿಯಾ ಶೀಲರಾಗಿದ್ದರು. ಇವರೆಲ್ಲರೂ ಉತ್ತರ ಭಾರತದಿಂದ ಬಂದವರಾಗಿದ್ದರು. ಉತ್ತರ ಭಾರತದಲ್ಲಿ ಮುಸ್ಲಿಮರ ಆಗಮನಕ್ಕಿಂತ ಪೂರ್ವದಲ್ಲಿಯೇ ಕೆಲವು ಸೂಫಿಗಳು ದಕ್ಷಿಣ ಭಾರತ, ಶ್ರೀಲಂಕಾದಲ್ಲಿ ಕ್ರಿಯಾಶೀಲರಾಗಿದ್ದಿರುವುದು ತಿಳಿದುಬರುತ್ತದೆ. ಆದರೆ ಇವರ ಮಾಹಿತಿ ಐತಿಹಾಸಿಕವಾಗಿ ಅಷ್ಟಾಗಿ ಲಭ್ಯವಿಲ್ಲ. ದಕ್ಷಿಣ ಭಾರತಕ್ಕೆ ವರ್ತಕರ ಜೊತೆ ಸಾಕಷ್ಟು ಸೂಫಿ, ದರವೇಶರು ಆಗಮಿಸಿರಲಿಕ್ಕೂ ಸಾಕು. ಇತಿಹಾಸಕಾರ, ಪರ್ಯಟಕ 'ಇಬ್ನೆ' ಬತೂತ, ಶ್ರೀಲಂಕಾದ ತನ್ನ ಭೇಟಿಯ ಸಮಯಾ ಸೂಫಿಗಳ ಸಾಕಷ್ಟು ಗೋರಿಗಳನ್ನು ಅಲ್ಲಿ ಕಂಡಿರುವುದಾಗಿ ದಾಖಲಿಸಿದ್ದಾನೆ. ಮಲಬಾರಿನ ತೀರದಲ್ಲಿ ಹಲವು ಸೂಫಿಗಳಿಗೆ ಹಿಂದೂ ದೊರೆಯೊಬ್ಬ ಆಶ್ರಯ ನೀಡಿರುವ ಅತಿಹ್ಯವಿದ್ದು, ಚಾರಿತ್ರಿಕ ಮಾಹಿತಿ ಮಾತ್ರ ಅಲಭ್ಯ. ದಖನ್ ಸೂಫಿಗಳನ್ನು ಸ್ಮರಿಸುವಾಗ ಈ ಪ್ರಾಂತ್ಯದಲ್ಲಿ ಸುಪ್ರಸಿದ್ದನಾಗಿದ್ದ ಆಯಿನುದ್ದಿನ್ ಗಂಜುಲ್ ಉಲೂಮ್ ಹೆಸರಿನ ಜುನೈದಿ ಸೂಫಿಯು ದಖನ್‌ಜನರ ವಿಶೇಷ ಒಲವಿಗೆ ಪಾತ್ರನಾಗಿದ್ದ. ಮಾತ್ರವಲ್ಲ, 'ಅತ್ವಾರುಲ್ ಅಬ್ರಾರ್' ಎಂಬ ಅರೇಬಿಕ್ ಗ್ರಂಥ ಸಂಪಾದಿಸುವ ಮೂಲಕ ಗಮನ ಸೆಳೆದಿದ್ದನು.

ಜುನೈದಿ ಸೂಫಿ ಪರಂಪರೆಯ ಹಲವು ಸೂಫಿಗಳಲ್ಲಿ ಸಯ್ಯದ ಕಬೀರ್ ಎಂಬ ಹೆಸರಿನಿಂದ ಖ್ಯಾತರಾಗಿದ್ದ ಸಯ್ಯದ್ ಖುತುದ್ದೀನ್ ಮಹಮೂದ್ ಘಜನವಿ ಹುಸ್ನವಿಯವರು, ಒಬ್ಬ ಮಹಾನ್ ಧಾರ್ಮಿಕ ಫಖಿ(ವ್ಯಕ್ತಿ)ಯಾಗಿದ್ದು ಆ ಕಾಲದಲ್ಲಿ ಖ್ಯಾತರಾಗಿದ್ದ ನಜಮುದ್ದೀನರ ದೈವೀಸಾಧಕರಾಗಿದ್ದರು. ಸಯ್ಯದ್ ಅಜಾಲ್ ನಜಮುದ್ದೀನರ ಅನುಯಾಯಿ ಕೂಡ.

ಪ್ರವಾದಿ ಮಹಮ್ಮದರ ಅವರ ಕುಟುಂಬ ಸಂತತಿಯ ಪರಂಪರೆಯಲ್ಲಿ 7ನೆಯ ಪೀಳಿಗೆಯವರಾಗಿದ್ದರು ಎನ್ನುತ್ತದೆ ಇತಿಹಾಸ. ಸಯ್ಯದ ರಶೀದುದ್ದೀನ್ ಇವರ ಪುತ್ರ. ಗಾಜ್ನಾದಲ್ಲಿ ಇವರ ಕಬೀರರು ತಂದೆಯವರು ಮಂಗೋಲರ ವಿರುದ್ಧ ಯುದ್ಧದಲ್ಲಿ ಹುತಾತ್ಮರಾದ ಬಳಿಕ ದೆಹಲಿಗೆ ಆಗಮಿಸಿದ್ದರು. ಧಾರ್ಮಿಕ ಬೋಧನೆ ಮಾಡುತ್ತಿದ್ದ ಇವರು, ದೆಹಲಿಯ ಸುಲ್ತಾನ್ ನಾಸೀರುದ್ದೀನ್ ಮಹಮದ್ ಅಲ್ತಮಶ್‌ನ ಆಧ್ಯಾತ್ಮಿಕ ಗುರುವಾಗಿ ಹೆಸರು ಮಾಡಿದ್ದರು. ಆ ಕಾಲದ ಸುಪ್ರಸಿದ್ಧ ಚಿಶ್ತಿಯಾ ಪಂಥದ ಸಯ್ಯದ್ ಖುತ್ಬುದ್ದೀನ್ ಭಕ್ತಿಯಾರ್ ಕಾಕಿ, ಸುಹರ್ವರ್ದಿಯಾ ಪಂಥದ ಸಯ್ಯದ್ ಜಲಾಲುದ್ದೀನ್ ತಬ್ರೇಜಿ ಸೂಫಿಗಳ ಜೊತೆ ಸ್ನೇಹ ಹೊಂದಿದ್ದರು. ಸಯ್ಯದ್ ಜಲಾಲುದ್ದೀನ್ ಅವರು ದಿಲ್ಲಿ ತ್ಯಜಿಸಿ ಲಖ್ನೋಟಿಗೆ ಹೊರಟಾಗ, ಸಯ್ಯದ್ ಕಬೀರರೂ ತಮ್ಮ ಕುಟುಂಬ ಸಮೇತ ಉತ್ತರಪ್ರದೇಶದ ಕರಮನಿಕಪುರ ಎಂಬಲ್ಲಿ ಒಂದು ಖಾನಖಾವನ್ನು (ಸೂಫಿಕೇಂದ್ರ) ಸ್ಥಾಪಿಸಿದ್ದರು. ಇವರ ಪುತ್ರ ಸಯ್ಯದ್ ತಾಜುದ್ದೀನ್, ಕರಮನಿಕಪುರದಲ್ಲಿ ತಂದೆಯ ನಿಧನದ ಬಳಿಕ ಆ ಆಧ್ಯಾತ್ಮಿಕ ಕೇಂದ್ರದ ಉತ್ತರಾಧಿಕಾರಿಯಾದರು.

ಮುಂದುವರೆಯುವುದು...

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)